## ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ :ಚಿಕ್ಕಮಗಳೂರು ವಿಭಾಗ :ಚಿಕ್ಕಮಗಳೂರು

ಸಂಖ್ಯೆ.ಕರಾಸಾ/ಚಿಮವಿ/ಸಂಚಾರ/ವಾಣಿಜ್ಯ/ 1624 /2020-21 ದಿನಾಂಕ:25.09.2020

**"ಇ-ಟೆಂಡರ್ ಪ್ರಕಟಣೆ ಸಂಖ್ಯೆ 06/2020" (ಇ-ಪ್ರೊಕ್ಯೂರ್‌ಮೆಂಟ್ ಮೂಲಕ)**

ಕ.ರಾ.ರ.ಸಾ.ನಿಗಮ, ಚಿಕ್ಕಮಗಳೂರು ವಿಭಾಗದ ವ್ಯಾಪ್ತಿಗೆ ಬರುವ ಈ ಕೆಳಕಂಡ ಬಸ್ ನಿಲ್ದಾಣಗಳಲ್ಲಿ ಖಾಲಿಯಿರುವ/ ಖಾಲಿಯಾಗಲಿರುವ ವಾಣಿಜ್ಯ ಮಳಿಗೆಗಳಿಗೆ ಪರವಾನಗಿದಾರರನ್ನು ಆಯ್ಕೆ ಮಾಡಲು ಇ-ಪ್ರಕ್ಯೂರ್‌ಮೆಂಟ್ ಮೂಲಕ ಇ-ಟೆಂಡರ್ ಅರ್ಜಿಯನ್ನು ಆಹ್ವಾನಿಸಲಾಗಿದೆ. ಇ-ಟೆಂಡರ್ ದಸ್ತಾವೇಜುಗಳನ್ನು ಇ-ಪ್ರಕ್ಯೂರ್‌ಮೆಂಟ್ ವೆಬ್‌ಸೈಟ್ "https:// eproc.karnataka.gov.in" ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. ಇ-ಪ್ರೊಕ್ಯೂರ್‌ಮೆಂಟ್‌ನಲ್ಲಿ ನಮೂದಿಸಿದ ನಿಗದಿತ ದಾಖಲಾತಿ ಮತ್ತು ದಿನಾಂಕದೊಳಗೆ ಭಾಗವಹಿಸುವುದು (ಯಾವುದೇ ತಾಂತ್ರಿಕ ದೋಷವಿಲ್ಲದಿದ್ದಲ್ಲಿ)

| ವಿವರ | ದಿನಾಂಕ | ಸಮಯ |
|---|---|---|
| ಇ-ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಮತ್ತು ಸಮಯ | 20.10.2020 | 17.00 |
| ಇ-ಟೆಂಡರ್ ತೆರೆಯಲು ನಿಗದಿಪಡಿಸಿದ ದಿನಾಂಕ ಮತ್ತು ಸಮಯ | 22.10.2020 | 11.00 |
| ಅರ್ಜಿದಾರರು ಅರ್ಜಿ ಶುಲ್ಕ, ಇ.ಎಂ.ಡಿ. ಶುಲ್ಕದ ಮೂಲ ಡಿ.ಡಿ.ಗಳನ್ನು ಮತ್ತು ಇತರೆ ಅಗತ್ಯ ದಾಖಲಾತಿಗಳನ್ನು ಚಿಕ್ಕಮಗಳೂರು ವಿಭಾಗೀಯ ಕಛೇರಿಯಲ್ಲಿ ಇರಿಸಲಾಗಿರುವ ಟೆಂಡರ್ ಬಾಕ್ಸ್‌ನಲ್ಲಿ ಹಾಕಲು ಕೊನೆಯ ದಿನಾಂಕ ಮತ್ತು ಸಮಯ | 22.10.2020 | 10.45 |

| ಕ್ರ. ಸಂ | ಬಸ್ ನಿಲ್ದಾಣದ ಹೆಸರು | ಮಳಿಗೆಯ ವಿವರ | ವಿಸ್ತೀರ್ಣ (ಚ.ಅ) | ಪರವಾನಿಗೆ ಅವಧಿ | ಕನಿಷ್ಠ ಮಾಸಿಕ ಪರವಾನಗಿ ಶುಲ್ಕ (ರೂ.ಗಳಲ್ಲಿ) | ಡಿ.ಡಿ.ಮೂಲಕ ಈ ಕಛೇರಿಗೆ ಸಲ್ಲಿಸಬೇಕಾದ ಇ.ಎಂ.ಡಿ ಮೊತ್ತ | ಇ-ಪ್ರೊಕ್ಯೂರ್ ಮೆಂಟ್ ಮೂಲಕ ಪಾವತಿಸಬೇಕಾದ ಇ.ಎಂ.ಡಿ ಮೊತ್ತ | ಡಿ.ಡಿ ಮೂಲಕ ಈ ಕಛೇರಿಗೆ ಸಲ್ಲಿಸಬೇಕಾದ ಅರ್ಜಿ ಶುಲ್ಕ + ಜಿ.ಎಸ್.ಟಿ | ಖಾಲಿ ಅಗುವ ದಿನಾಂಕ |
|---|---|---|---|---|---|---|---|---|---|
| 1 | ಚಿಕ್ಕಮಗಳೂರು | ಉಪಹಾರ ಗೃಹ | 2368 | 5 ವರ್ಷ | 2,50,228/- | 7,50,184/- | 500/- | 2,953/- | 16.10.2020 |
| 2 | ಚಿಕ್ಕಮಗಳೂರು | ಜನರಲ್ ಸ್ಟಾಲ್-03 | 77.50 | 5 ವರ್ಷ | 62,979/- | 1,88,437/- | 500/- | 743/- | ಖಾಲಿ ಇದೆ |
| 3 | ಚಿಕ್ಕಮಗಳೂರು | ಜನರಲ್ ಸ್ಟಾಲ್-07 | 64.58 | 5 ವರ್ಷ | 43,272/- | 1,29,316/- | 500/- | 510/- | ಖಾಲಿ ಇದೆ |
| 4 | ಜಾವಗಲ್ | ಉಪಹಾರ ಗೃಹ | 752.08 | 5 ವರ್ಷ | 11,714/- | 34,642/- | 500/- | 138/- | ಖಾಲಿ ಇದೆ |
| 5 | ಜಾವಗಲ್ | ದ್ವಿಚಕ್ರ ನಿಲುಗಡೆ (ತೆರೆದ ಜಾಗ) | 300 | 3 ವರ್ಷ | 1,375/- | 3,625/- | 500/- | 118/- | ಖಾಲಿ ಇದೆ |
| 6 | ಗಂಡಸಿ | ಉಪಹಾರ ಗೃಹ | 503.22 | 5 ವರ್ಷ | 715/- | 1,645/- | 500/- | 118/- | ಖಾಲಿ ಇದೆ |
| 7 | ಗಂಡಸಿ | ಜನರಲ್ ಸ್ಟಾಲ್-02 | 64.58 | 5 ವರ್ಷ | 462/- | 886/- | 500/- | 118/- | ಖಾಲಿ ಇದೆ |
| 8 | ಸಕಲೇಶಪುರ | ಸೂಪರ್ ಬಜಾರ್/ ಡಾರ್ಮಿಟರಿ ಮತ್ತು ಲಾಡ್ಜಿಂಗ್/ ಗಾರ್ಮೆಂಟ್ಸ್ ಮಳಿಗೆ ಸಂಖ್ಯೆ::6&7 (ಮೊದಲ ಮಹಡಿ) | 2160.38 | 10 ವರ್ಷ | 20,000/- | 59,500/- | 500/- | 236/- | ಖಾಲಿ ಇದೆ |
| 9 | ಕಡೂರು | ಉಪಹಾರ ಗೃಹ | 3100 | 5 ವರ್ಷ | 48,315/- | 1,44,445/- | 500/- | 570/- | ಖಾಲಿ ಇದೆ |
| 10 | ಬೀರೂರು | ಉಪಹಾರ ಗೃಹ | 474.15 | 5 ವರ್ಷ | 2,754/- | 7,762/- | 500/- | 118/- | ಖಾಲಿ ಇದೆ |
| 11 | ಪಂಚನಹಳ್ಳಿ | ಜನರಲ್ ಸ್ಟಾಲ್-02 | 100 | 5 ವರ್ಷ | 1,485/- | 3,955/- | 500/- | 118/- | ಖಾಲಿ ಇದೆ |
| 12 | ಸಖರಾಯಪಟ್ಟಣ | ದ್ವಿಚಕ್ರ ನಿಲುಗಡೆ (ತೆರೆದ ಜಾಗ) | 30*10 | 3 ವರ್ಷ | 2,345/- | 6,535/- | 500/- | 118/- | 01.01.2021 |
| 13 | ಮೂಡಿಗೆರೆ | ಉಪಹಾರ ಗೃಹ | 1071.66 | 5 ವರ್ಷ | 57,060/- | 1,70,680/- | 500/- | 674/- | ಖಾಲಿ ಇದೆ |
| 14 | ಮೂಡಿಗೆರೆ | ಜನರಲ್ ಸ್ಟಾಲ್-02 | 135.62 | 5 ವರ್ಷ | 28,617/- | 85,351/- | 500/- | 338/- | ಖಾಲಿ ಇದೆ |
| 15 | ಮೂಡಿಗೆರೆ | ಸರ್ಕಾರಿ ಕಛೇರಿ/ ಡಾರ್ಮಿಟರಿ & ಲಾಡ್ಜಿಂಗ್ /ಗಾರ್ಮೆಂಟ್ಸ್ ಮಳಿಗೆ-06 & 7 (ಮೊದಲ ಮಹಡಿ) | 2,249 | 10 ವರ್ಷ | 15,000/- | 44,500/- | 500/- | 177/- | ಖಾಲಿ ಇದೆ |
| 16 | ಕೊಟ್ಟಿಗೆಹಾರ | ಉಪಹಾರ ಗೃಹ | 1057 | 5 ವರ್ಷ | 25,410/- | 75,730/- | 500/- | 300/- | ಖಾಲಿ ಇದೆ |
| 17 | ಕೊಟ್ಟಿಗೆಹಾರ | ಜನರಲ್ ಸ್ಟಾಲ್-2 | 8.95 | 5 ವರ್ಷ | 11,563/- | 34,189/- | 500/- | 136/- | ಖಾಲಿ ಇದೆ |
| 18 | ಬೇಲೂರು | ಉಪಹಾರ ಗೃಹ (ಪರಿಶಿಷ್ಟಜಾತಿಗೆ ಮೀಸಲು) | 1582.31 | 5 ವರ್ಷ | 57,685/- | 1,72,555/- | 500/- | 680/- | 09.01.2021 |
| 19 | ಬೇಲೂರು | ಜನರಲ್ ಸ್ಟಾಲ್-02 | 58.22 | 5 ವರ್ಷ | 8,799/- | 25,897/- | 500/- | 118/- | 09.03.2021 |
| 20 | ಬೇಲೂರು | ಜನರಲ್ ಸ್ಟಾಲ್-2 (ತೆರೆದ ಜಾಗ) | 8*10 | 3 ವರ್ಷ | 12,222/- | 36,166/- | 500/- | 144/- | 14.11.2020 |
| 21 | ಬೇಲೂರು | ಜನರಲ್ ಸ್ಟಾಲ್-4 (ತೆರೆದ ಜಾಗ) | 8*10 | 3 ವರ್ಷ | 14,300/- | 42,400/- | 500/- | 168/- | ಖಾಲಿ ಇದೆ |
| 22 | ಹಳೇಬೀಡು | ಜನರಲ್ ಸ್ಟಾಲ್-02 | 68.46 | 5 ವರ್ಷ | 3,253/- | 9,259/- | 500/- | 118/- | ಖಾಲಿ ಇದೆ |

ಹೆಚ್ಚಿನ ವಿವರಗಳಿಗಾಗಿ ವಿಭಾಗೀಯ ಕಛೇರಿ, ಕ.ರಾ.ರ.ಸಾ.ನಿಗಮ, ಚಿಕ್ಕಮಗಳೂರು ವಿಭಾಗ, ಚಿಕ್ಕಮಗಳೂರು 577 101 ಇವರಲ್ಲಿ ಕಛೇರಿ ಸಮಯದಲ್ಲಿ ಸಂಪರ್ಕಿಸಲು ಕೋರಲಾಗಿದೆ ಹಾಗೂ ಸಂಪರ್ಕಿಸುವ ದೂರವಾಣಿ ಸಂಖ್ಯೆ:-

ವಿಭಾಗೀಯ ಸಂಚಾರ ಅಧಿಕಾರಿ-7760990402 & ಸಹಾಯಕ ಸಂಚಾರ ವ್ಯವಸ್ಥಾಪಕರು -7760990411

Last date for submitting application : As per e-procurement portal.
Tender will be opened on : As per e-procurement portal.

ಸಹಿ/-
ವಿಭಾಗೀಯ ನಿಯಂತ್ರಣಾಧಿಕಾರಿ,
ಕ.ರಾ.ರ.ಸಾ.ನಿಗಮ:ಚಿಕ್ಕಮಗಳೂರು ವಿಭಾಗ.

<u>ಪ್ರತಿಯನ್ನು ವಂದನೆಗಳೊಂದಿಗೆ :-</u>

1. ಮುಖ್ಯ ಸಂಚಾರ ವ್ಯವಸ್ಥಾಪಕರು(ವಾಣಿಜ್ಯ), ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
2. ಮಾನ್ಯ ವ್ಯವಸ್ಥಾಪಕ ನಿರ್ದೇಶಕರು, ವಾ.ಕ.ರ.ಸಾ.ಸಂಸ್ಥೆ, ಈ.ಕ.ರ.ಸಾ.ಸಂಸ್ಥೆ ಮತ್ತು ಬೆ.ಮ.ಸಾ.ಸಂಸ್ಥೆ ಕೇಂದ್ರ ಕಛೇರಿ, ಹುಬ್ಬಳ್ಳಿ, ಕಲಬುರಗಿ ಮತ್ತು ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.

3. ಎಲ್ಲಾ ಹಿರಿಯ/ವಿಭಾಗೀಯ ನಿಯಂತ್ರಣಾಧಿಕಾರಿಗಳು, ಕ.ರಾ.ರ.ಸಾ.ನಿಗಮ, ವಾ.ಕ.ರ.ಸಾ.ಸಂಸ್ಥೆ, ಈ.ಕ.ರ.ಸಾ.ಸಂಸ್ಥೆ ಮತ್ತು ಬೆ.ಮ.ಸಾ.ಸಂಸ್ಥೆ ರವರ ಮಾಹಿತಿಗಾಗಿ ಹೆಚ್ಚಿನ ಪ್ರತಿಗಳನ್ನು ಸಾರ್ವಜನಿಕರ ಅವಗಹಾನೆಗಾಗಿ ಮುಖ್ಯ ಬಸ್ ನಿಲ್ದಾಣದ ಸೂಚನಾ ಫಲಕದಲ್ಲಿ ಅಂಟಿಸಲು ಕೋರಿದೆ.
4. ವಿಭಾಗೀಯ ಸಂಚಾರ ಅಧಿಕಾರಿ, ಸಹಾಯಕ ಸಂಚಾರ ವ್ಯವಸ್ಥಾಪಕರು, ಸಹಾಯಕ ಲೆಕ್ಕಾಧಿಕಾರಿ, ಕಾನೂನು ಅಧಿಕಾರಿ, ಸಹಾಯಕ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಭದ್ರತಾ & ಜಾಗೃತಾಧಿಕಾರಿ, ಕ.ರಾ.ರ.ಸಾ.ನಿಗಮ ಚಿಕ್ಕಮಗಳೂರು ವಿಭಾಗ ರವರ ಮಾಹಿತಿಗಾಗಿ ದಿನಾಂಕ:22.10.2020 ರಂದು 11.00 ಗಂಟೆಯಲ್ಲಿ ಕಛೇರಿಯಲ್ಲಿರಲು ಸೂಚಿಸಿದೆ.
5. ಸಹಾಯಕ ಆಡಳಿತಾಧಿಕಾರಿ, ಕ.ರಾ.ರ.ಸಾ.ನಿಗಮ, ಚಿಕ್ಕಮಗಳೂರು ವಿಭಾಗ ರವರಿಗೆ ಕಳುಹಿಸುತ್ತಾ ಸದರಿ ಪ್ರಕಟಣೆಯನ್ನು ವಿಭಾಗೀಯ ಕಛೇರಿ ಸೂಚನಾ ಫಲಕದಲ್ಲಿ ಪ್ರಕಟಿಸಲು ಈ ಮೂಲಕ ತಿಳಿಸಿದೆ.

## ಇ-ಟೆಂಡರ್‌ನಲ್ಲಿ ಭಾಗವಹಿಸಲು ಷರತ್ತು ಮತ್ತು ನಿಬಂಧನೆಗಳು (ಸಾ.ಸ್ಥಾ.ಆ. ಸಂ.787/2017 ರಂತೆ)

| ಕ್ರ.ಸಂ | ವಿವರ | ದಿನಾಂಕ | ಸಮಯ |
|---|---|---|---|
| 1 | ಇ-ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಮತ್ತು ಸಮಯ | 20.10.2020 | 17.00 |
| 2 | ಇ-ಟೆಂಡರ್ ತೆರೆಯಲು ನಿಗದಿಪಡಿಸಿದ ದಿನಾಂಕ ಮತ್ತು ಸಮಯ | 22.10.2020 | 11.00 |
| 3 | ಅರ್ಜಿದಾರರು ಅರ್ಜಿ ಶುಲ್ಕ, ಇ.ಎಂ.ಡಿ. ಶುಲ್ಕದ ಮೂಲ ಡಿ.ಡಿ.ಗಳನ್ನು ಮತ್ತು ಇತರೆ ಅಗತ್ಯ ದಾಖಲಾತಿಗಳನ್ನು ಚಿಕ್ಕಮಗಳೂರು ವಿಭಾಗೀಯ ಕಛೇರಿಯಲ್ಲಿ ಇರಿಸಲಾಗಿರುವ ಟೆಂಡರ್ ಬಾಕ್ಸ್‌ನಲ್ಲಿ ಹಾಕಲು ಕೊನೆಯ ದಿನಾಂಕ ಮತ್ತು ಸಮಯ | 22.10.2020 | 10.45 |

1. **ಈ ಪ್ರಕಟಣೆಯಲ್ಲಿ ಸೂಚಿಸಿರುವ ಮಳಿಗೆಗಳಿಗೆ ಮಿತವ್ಯಯ ಮಾಸಿಕ ಪರವಾನಿಗೆ ಶುಲ್ಕ ನಿಗದಿಪಡಿಸಿದ್ದು, ಸದರಿ ಮಿತವ್ಯಯ ಮಾಸಿಕ ಪರವಾನಿಗೆ ಶುಲ್ಕದಲ್ಲಿ ಸರಕು ಮತ್ತು ಸೇವಾ ತೆರಿಗೆ ಹಾಗೂ ಇತರೆ ಶುಲ್ಕಗಳು ಒಳಗೊಂಡಿರುವುದಿಲ್ಲ. ಬಿಡ್‌ದಾರರು ಈ ಪ್ರಕಟಣೆಯಲ್ಲಿ ನಮೂದಿಸಿರುವ ಬಿಡ್ ಮೊತ್ತವನ್ನು ಕೇವಲ ಮಾಸಿಕ ಪರವಾನಿಗೆ ಶುಲ್ಕ ಎಂದು ಪರಿಗಣಿಸಲಾಗುವುದು.**
2. ಟೆಂಡರ್‌ನಲ್ಲಿ ಭಾಗವಹಿಸುವ ಅರ್ಜಿದಾರರು ಇ-ಪ್ರೊಕ್ಯೂರ್‌ಮೆಂಟ್ ಮುಖಾಂತರ ಮಾತ್ರ ಅರ್ಜಿ ಸಲ್ಲಿಸುವುದು ಹಾಗೂ ನೇರವಾಗಿ ಸಲ್ಲಿಸುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.
3. ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್‌ಗೆ ನಿಗದಿಪಡಿಸಿದ ಅವಧಿಯೊಳಗೆ ಅರ್ಜಿ ಸಲ್ಲಿಸುವುದು ಸದರಿ ಸಮಯದಲ್ಲಿ ಉಂಟಾಗುವ ಯಾವುದೇ ತಾಂತ್ರಿಕ ದೋಷಗಳಿಗೆ ಕ.ರಾ.ರ.ಸಾ.ನಿಗಮವು ಜವಾಬ್ದಾರಿಯಾಗಿರುವುದಿಲ್ಲ.
4. ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್‌ಗೆ ಭಾಗವಹಿಸುವ ಬಿಡ್‌ದಾರರು ತಮ್ಮ ಸ್ವಂತ ಖರ್ಚಿನಲ್ಲಿ ಟೆಂಡರ್ ನಿಯಮಾವಳಿಗಳನ್ನು ಪೂರೈಸುವುದು.
5. ಟೆಂಡರ್‌ಗೆ ಭಾಗವಹಿಸುವ ಬಿಡ್‌ದಾರರು ಅರ್ಜಿ ಸಲ್ಲಿಸುವ ಮೊದಲು ತಮ್ಮ ಸ್ವಂತ ಖರ್ಚಿನಲ್ಲಿ ಆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ ನಂತರವೇ ಬಿಡ್ ಮೊತ್ತ ದಾಖಲಿಸುವುದು ಬಿಡ್‌ದಾರರ ಜವಾಬ್ದಾರಿಯಾಗಿರುತ್ತದೆ. ಟೆಂಡರ್ ಪ್ರಕ್ರಿಯೆ ಮುಗಿದ ನಂತರ ಯಾವುದೇ ಕಾರಣಕ್ಕೂ ಮಳಿಗೆಯ ವ್ಯವಹಾರ/ಸ್ಥಳವನ್ನು ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
6. ವಾಣಿಜ್ಯ ಮಳಿಗೆಗಳು ಯಾವ ಯಾವ ಸ್ಥಿತಿಯಲ್ಲಿವೆಯೋ ಹಾಗೇಯೇ ನೀಡಲಾಗುವುದು ಮತ್ತು ಟೆಂಡರ್‌ನಲ್ಲಿ ನೀಡಿರುವ/ನಮೂದಿಸಿರುವ ಸ್ಥಳದಲ್ಲಿ ಮಾತ್ರ ವ್ಯವಹಾರ ನಡೆಸತಕ್ಕದ್ದು ಹಾಗೂ ಮಳಿಗೆಯ ಮೂಲ ಸ್ವರೂಪಕ್ಕೆ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

**ಟೆಂಡರ್ ಅರ್ಜಿ ಶುಲ್ಕ, ಇ-ಪ್ರೊಕ್ಯೂರ್‌ಮೆಂಟ್ ಶುಲ್ಕ ಹಾಗೂ ಇ.ಎಂ.ಡಿ. ಮೊತ್ತ:**

1. ಟೆಂಡರ್‌ಗೆ ಭಾಗವಹಿಸುವ ಬಿಡ್‌ದಾರರು / ಅರ್ಜಿದಾರರು ನಿಗದಿತ ಇ.ಎಂ.ಡಿ. ಮೊತ್ತದಲ್ಲಿ ರೂ.500/- ನ್ನು ಇ-ಪೋರ್ಟಲ್ ಮುಖೇನ ಪಾವತಿಸುವುದು. ಇನ್ನುಳಿದ ಇ.ಎಂ.ಡಿ. ಮೊತ್ತವನ್ನು Divisional Controller, K.S.R.T.C, Chikmagaluru Division ರವರ ಪದನಾಮಕ್ಕೆ ಡಿ.ಡಿ. ರೂಪದಲ್ಲಿ ಪಡೆದು ಸದರಿ ಡಿ.ಡಿ ಯ ಹಿಂಭಾಗದಲ್ಲಿ ತಮ್ಮ ಹೆಸರು, ಬಿಡ್ ಮಾಡುವ ಮಳಿಗೆಯ ಹೆಸರು & ಮಳಿಗೆಯ ಸಂಖ್ಯೆಯನ್ನು ನಮೂದಿಸಿ, ಹಾಗೂ ಇ-ಪ್ರೊಕ್ಯೂರ್‌ಮೆಂಟ್‌ನಲ್ಲಿ ಅಫ್‌ಲೋಡ್ ಮಾಡಿರುವ ಎಲ್ಲಾ ದಾಖಲಾತಿಗಳ ಜರಾಕ್ಸ್ ಪ್ರತಿಗಳನ್ನು ಇ.ಎಂ.ಡಿ ಮತ್ತು ಅರ್ಜಿ ಶುಲ್ಕದ ಡಿ.ಡಿ ಜೊತೆಯಲ್ಲಿ ಟೆಂಡರ್ ತೆರೆಯುವ **ಕೊನೆಯ ದಿನಾಂಕದೊಳಗಾಗಿ** 22.10.2020 ರ ಬೆಳಗ್ಗೆ 10.45 ಗಂಟೆಯ ಒಳಗೆ) ವಿಭಾಗೀಯ ಕಛೇರಿ ಸಂಚಾರ ಶಾಖೆಯಲ್ಲಿರುವ ಬಾಕ್ಸ್‌ನಲ್ಲಿ ಹಾಕುವುದು. ಸದರಿ ಡಿ.ಡಿ.ಯ ಜೆರಾಕ್ಸ್ ಪ್ರತಿಯನ್ನು ಇ-ಪೋರ್ಟಲ್‌ನಲ್ಲಿ ಇತರೆ ದಾಖಲಾತಿಗಳೊಂದಿಗೆ ಅಪ್‌ಲೋಡ್ ಮಾಡುವುದು.

2. The tenderer shall pay processing fee and EMD through e-procurement following four modes of payment: a) Debit Card, b) Credit Card, c) OTC (Over the counter) and NEFT (National Electronic fund transfer).
3. The tenderer shall pay processing fee Rs.500/-through e-procurement following four modes of payment: a) Debit Card, b) Credit Card, c) OTC (Over the counter) and NEFT (National Electronic fund transfer).
4. ಅರ್ಜಿದಾರರು/ಬಿಡ್‌ದಾರರು ಪ್ರಕಟಣೆಯಲ್ಲಿ ಮಳಿಗೆಗೆ ನಿಗದಿಪಡಿಸಿದ ಅರ್ಜಿ ಶುಲ್ಕವನ್ನು Divisional Controller, K.S.R.T.C, Chikmagaluru Division ರವರ ಪದನಾಮಕ್ಕೆ ಪ್ರತ್ಯೇಕವಾಗಿ ಡಿ.ಡಿ. ರೂಪದಲ್ಲಿ ಪಡೆದು ಸದರಿ ಡಿ.ಡಿ ಯ ಹಿಂಭಾಗದಲ್ಲಿ ತಮ್ಮ ಹೆಸರು, ಬಿಡ್ ಮಾಡುವ ಮಳಿಗೆಯ ಹೆಸರು & ಮಳಿಗೆಯ ಸಂಖ್ಯೆಯನ್ನು ನಮೂದಿಸಿ ಟೆಂಡರ್ ತೆರೆಯುವ ಕೊನೆಯ ದಿನಾಂಕದೊಳಗೆ ವಿಭಾಗೀಯ ಸಂಚಾರ ಶಾಖೆಯಲ್ಲಿಸಿರುವ ಬಾಕ್ಸ್‌ನಲ್ಲಿ ಖುದ್ದಾಗಿ ಸಲ್ಲಿಸುವುದು. ಸದರಿ ಡಿ.ಡಿ.ಯ ಜೆರಾಕ್ಸ್ ಪ್ರತಿಯನ್ನು ಇ-ಪೋರ್ಟಲ್‌ನಲ್ಲಿ ಇತರೆ ದಾಖಲಾತಿಗಳೊಂದಿಗೆ ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ.
5. ನಿಗದಿಪಡಿಸಿದ ಮಾಸಿಕ ಮಿತವ್ಯಯ ಪರವಾನಗಿ ಶುಲ್ಕದ ಮೂರು (03) ಪಟ್ಟು ಮೊತ್ತವನ್ನು ಇ.ಎಂ.ಡಿ. (Earnest Money Deposit)ಯನ್ನಾಗಿ ನಿಗದಿಪಡಿಸಲಾಗಿರುತ್ತದೆ.
6. ಟೆಂಡರ್ ಪ್ರಕಟಣೆಯಲ್ಲಿ ನಿಗದಿಪಡಿಸಿರುವ ಇ.ಎಂ.ಡಿ.ಮೊತ್ತಕ್ಕೆ, ಟೆಂಡರ್ ಪ್ರಕಟಣೆಯ ದಿನಾಂಕದ ನಂತರದ ಅವಧಿಯಲ್ಲಿ ಪಡೆದುಕೊಂಡಿರುವ ಡಿ.ಡಿ.ಯನ್ನು ಮಾತ್ರ ಪರಿಗಣಿಸಲಾಗುವುದು.
7. ಇ.ಎಂ.ಡಿ. ಮೊತ್ತಕ್ಕೆ ಯಾವುದೇ ಬಡ್ಡಿಯನ್ನು ನೀಡಲಾಗುವುದಿಲ್ಲ.

ಅ:- ಬಿಡ್‌ದಾರರು ನಿಗದಿತ ದಾಖಲಾತಿಯೊಂದಿಗೆ ಇ-ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವುದು ಮತು ಇ-ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಿರುವ ದಾಖಲಾತಿಗಳನ್ನು ಟೆಂಡರ್ ತೆರೆಯುವ ದಿನಾಂಕದೊಳಗೆ ವಿಭಾಗೀಯ ಸಂಚಾರ ಶಾಖೆಯಲ್ಲಿ ಇರಿಸಲಾಗಿರುವ ಟೆಂಡರ್ ಬಾಕ್ಸ್‌ನಲ್ಲಿ ಖುದ್ದಾಗಿ ಸಲ್ಲಿಸುವುದು.

ಆ:-ಡ್‌ದಾರರು ಇ-ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಿ, ಟೆಂಡರ್ ಬಾಕ್ಸ್‌ನಲ್ಲಿ ದಾಖಲಾತಿಗಳನ್ನು ಸಲ್ಲಿಸಲು ವಿಫಲರಾದಲ್ಲಿ ಮತ್ತು ಟೆಂಡರ್ ಬಾಕ್ಸ್‌ನಲ್ಲಿ ದಾಖಲಾತಿಗಳನ್ನು ಸಲ್ಲಿಸಿ, ಇ-ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಲು ವಿಫಲರಾದಂತಹ ಸಂದರ್ಭದಲ್ಲಿ ಮುನ್ಸೂಚನೆ ನೀಡದೇ ಅರ್ಜಿಯನ್ನು ತಿರಸ್ಕರಿಸಿ, ಸಲ್ಲಿಸಿರುವ ಇ.ಎಂ.ಡಿ./ಭದ್ರತಾ ಠೇವಣಿಯನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

8. ಪೋರ್ಟಲ್‌ನಲ್ಲಿ ಅಪಲೋಡ್ ಮಾಡಿದ ಮಳಿಗೆಗೆ ಸಂಬಂಧಿಸಿದ ವಿವರಗಳನ್ನು ಸಂಪೂರ್ಣವಾಗಿ ಓದಿ ಅರ್ಥೈಸಿಕೊಂಡಿರುವ ಬಗ್ಗೆ ಹಾಗೂ ಎಲ್ಲಾ ಷರತ್ತು ಮತ್ತು ನಿಬಂಧನೆಗಳನ್ನು ಒಪ್ಪಿರುವ ಬಗ್ಗೆ ಎಲ್ಲಾ ಪುಟಗಳ ಷರತ್ತು ಮತ್ತು ನಿಭಂಧನೆಗಳ ಪ್ರತಿಯಲ್ಲಿ, ಟೆಂಡರ್‌ದಾರರು/ಅರ್ಜಿದಾರರು/ಬಿಡ್‌ದಾರರು ಸಹಿ ಮಾಡಿ, ಇ-ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವುದು.
9. ಮೀಸಲಾತಿ ಬಯಸುವ ಬಿಡ್‌ದಾರರು/ಅರ್ಜಿದಾರರು ಮೀಸಲಾತಿಗೆ ಸಂಬಂಧಿಸಿದ ದಾಖಲೆಗಳನ್ನು ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡುವುದು.
10. ಬಿಡ್‌ದಾರರು/ಅರ್ಜಿದಾರರು ಒಂದು ಮಳಿಗೆಗೆ ಒಂದಕ್ಕಿಂತ ಹೆಚ್ಚಿನ ಬಿಡ್‌ಗಳನ್ನು ಸಲ್ಲಿಸಲು ಅವಕಾಶವಿರುವುದಿಲ್ಲ.
11. ಒಂದು ವೇಳೆ ಬಿಡ್‌ದಾರರು/ಅರ್ಜಿದಾರರು ಇ-ಪೋರ್ಟಲ್‌ನ ಆರ್ಥಿಕ ಬಿಡ್‌ನಲ್ಲಿ ಮತ್ತು ನಿಗದಿತ ನಮೂನೆಯಲ್ಲಿ ನಮೂದಿಸಿದ ಬಿಡ್ ಮೊತ್ತ ಬೇರೆ ಬೇರೆ ಆಗಿದ್ದಲ್ಲಿ, ಇ-ಪೋರ್ಟಲ್‌ನ ಆರ್ಥಿಕ ಬಿಡ್ ಮೊತ್ತವನ್ನು ಪರಿಗಣಿಸಲಾಗುವುದು.
12. ಬಿಡ್‌ದಾರರ/ಅರ್ಜಿದಾರರ ಷರತ್ತಿನ ಟೆಂಡರ್‌ಗಳನ್ನು ಪರಿಗಣಿಸಲು ಅವಕಾಶವಿರುವುದಿಲ್ಲ. ಯಾವುದೇ ಷರತ್ತುಗಳು ಇಲ್ಲದೆ ಟೆಂಡರ್ ನಿಯಮಗಳನ್ನು ಪಾಲಿಸಿರುವ ಅರ್ಹ ಟೆಂಡರ್‌ಗಳನ್ನು ಮಾತ್ರ ಅಂಗೀಕರಿಸಲಾಗುವುದು. ಹಾಗೂ ಅರ್ಜಿಯೊಂದಿಗೆ ಅಳವಡಿಸಿರುವ ಚೆಕ್‌ಲಿಸ್ಟ್‌ನ್ನು ಭರ್ತಿಮಾಡಿ ಸಹಿ ಮಾಡಿ ಅಪ್‌ಲೋಡ್ ಮಾಡುವುದು.
13. ಬಿಡ್‌ದಾರರು/ಅರ್ಜಿದಾರರು ಕೆಳಕಂಡ ಅಗತ್ಯ ದಾಖಲೆಗಳನ್ನು ಇ-ಪ್ರೊಕ್ಯೂರ್‌ಮೆಂಟ್‌ನಲ್ಲಿ ಅಪ್‌ಲೋಡ್ ಮಾಡಬೇಕಿರುತ್ತದೆ.

| ರೂ.5.00 ಲಕ್ಷಗಳಿಗಿಂತ ಕಡಿಮೆ ಮಾಸಿಕ ಪರವಾನಗಿ ಶುಲ್ಕವಿರುವ ವಾಣಿಜ್ಯ ಮಳಿಗೆಗಳಿಗೆ | ರೂ.5.00 ಲಕ್ಷ ಅಥವಾ ಹೆಚ್ಚಿನ ಮಾಸಿಕ ಪರವಾನಗಿ ಶುಲ್ಕವಿರುವ ವಾಣಿಜ್ಯ ಮಳಿಗೆಗಳಿಗೆ |
|---|---|
| ಅ) ವಿಳಾಸ ದೃಢೀಕರಣ ಪತ್ರ (Voter ID, Aadhaar Card, Bank Passbook, Passport, etc.)<br>ಆ) ಬಿಡ್‌ದಾರರು ಪಾಲುದಾರಿಕೆ ವ್ಯವಹಾರ ಸಂಸ್ಥೆಯನ್ನು ಹೊಂದಿದ್ದಲ್ಲಿ, ಭಾರತೀಯ ಪಾಲುದಾರಿಕೆ ಕಾಯ್ದೆಯಡಿಯಲ್ಲಿ ನೋಂದಣಿಯಾಗಿರುವ ದಾಖಲಾತಿ, ಬಿಡ್ ಸಹಿಗೊಳಿಸುವ ವ್ಯಕ್ತಿಯು ಪಾಲುದಾರಿಕೆಯ ಸಂಸ್ಥೆಯಲ್ಲಿ ವ್ಯವಸ್ಥಾಪಕ ಪಾಲುದಾರನಾಗಿರುವ ಬಗ್ಗೆ ದಾಖಲಾತಿಯನ್ನು ಸಲ್ಲಿಸಬೇಕು. ಪಾಲುದಾರಿಕೆಯಲ್ಲಿರುವ ಎಲ್ಲಾ ನಿರ್ದೇಶಕರು / ಪಾಲುದಾರರ ಪೂರ್ಣ ವಿಳಾಸದ ಮಾಹಿತಿಯನ್ನು ಸಲ್ಲಿಸಬೇಕು.<br>ಇ) ಬಿಡ್‌ದಾರರು ಕಂಪನಿ / ವ್ಯವಹಾರ ಸಂಸ್ಥೆಯ ಹೆಸರಿನಲ್ಲಿ ಬಿಡ್ ಮಾಡಿದ್ದಲ್ಲಿ, ಕಂಪನಿಯು ಇಂಡಿಯನ್ ಕಂಪನೀಸ್ ಕಾಯ್ದೆಯಡಿಯಲ್ಲಿ ನೋಂದಣಿಯಾಗಿರುವ ದಾಖಲಾತಿಯನ್ನು ಸಲ್ಲಿಸಬೇಕು.<br>**ಈ) ಬಿಡ್‌ದಾರರು ಕ.ರಾ.ರ.ಸಾ.ನಿಗಮ ಮತ್ತು ಇತರೆ ನಿಗಮುಗಳಲ್ಲಿ Defaulter ಆಗದೆ ಇರುವ ಬಗ್ಗೆ ಹಾಗೂ ಕಪ್ಪುಪಟ್ಟಿಗೆ ಸೇರಿಲ್ಲದಿರುವ ಬಗ್ಗೆ ಸ್ವಯಂ-ದೃಢೀಕರಣ ಪತ್ರ**<br>ಉ) ಪಾನ್ ಕಾರ್ಡ್ ಸಲ್ಲಿಸುವುದು ಕಡ್ಡಾಯವಾಗಿರುತ್ತದೆ. | ಅ) ಕಂಪನಿ / ವ್ಯಕ್ತಿಯ ವಿಳಾಸ ದೃಢೀಕರಣ ಪತ್ರ (Voter ID, Aadhaar Card, Bank Passbook, Passport, etc)<br>ಆ) ಆದಾಯ ತೆರಿಗೆ ತಿರುವಳಿ ಪತ್ರ.<br>ಇ) ನಿಗದಿತ ಮಾಸಿಕ ಪರವಾನಗಿ ಶುಲ್ಕಕ್ಕಿಂತ ಹೆಚ್ಚಿನ ವಹಿವಾಟು ನಡೆಸಿರುವ ಬಗ್ಗೆ, 02 ವರ್ಷದ ವಾರ್ಷಿಕ ವಹಿವಾಟಿನ ದಾಖಲೆಗಳನ್ನು ಲೆಕ್ಕಪರಿಶೋಧಕರಿಂದ ದೃಢೀಕರಿಸಿ ನೀಡುವುದು.<br>ಈ) ಬಿಡ್‌ದಾರರು ಪಾಲುದಾರಿಕೆ ವ್ಯವಹಾರ ಸಂಸ್ಥೆಯನ್ನು ಹೊಂದಿದ್ದಲ್ಲಿ, ಭಾರತೀಯ ಪಾಲುದಾರಿಕೆ ಕಾಯ್ದೆಯಡಿಯಲ್ಲಿ ನೋಂದಣಿಯಾಗಿರುವ ದಾಖಲಾತಿ, ಬಿಡ್ ಸಹಿಗೊಳಿಸುವ ವ್ಯಕ್ತಿಯು ಪಾಲುದಾರಿಕೆಯ ಸಂಸ್ಥೆಯಲ್ಲಿ ವ್ಯವಸ್ಥಾಪಕ ಪಾಲುದಾರನಾಗಿರುವ ಬಗ್ಗೆ ದಾಖಲಾತಿಯನ್ನು ಸಲ್ಲಿಸಬೇಕು. ಪಾಲುದಾರಿಕೆಯಲ್ಲಿರುವ ಎಲ್ಲಾ ನಿರ್ದೇಶಕರು / ಪಾಲುದಾರರ ಪೂರ್ಣ ವಿಳಾಸದ ಮಾಹಿತಿಯನ್ನು ಸಲ್ಲಿಸಬೇಕು.<br>ಉ) ಬಿಡ್‌ದಾರರು ಕಂಪನಿ / ವ್ಯವಹಾರ ಸಂಸ್ಥೆಯ ಹೆಸರಿನಲ್ಲಿ ಬಿಡ್ ಮಾಡಿದ್ದಲ್ಲಿ, ಕಂಪನಿಯು ಇಂಡಿಯನ್ ಕಂಪನೀಸ್ ಕಾಯ್ದೆಯಡಿಯಲ್ಲಿ ನೋಂದಣಿಯಾಗಿರುವ ದಾಖಲಾತಿಯನ್ನು ಸಲ್ಲಿಸಬೇಕು.<br>ಊ) ವಹಿವಾಟಿಗೆ ಪೂರಕವಾಗಿ ಕಳೆದ 02 ವರ್ಷದ ಲಾಭ / ನಷ್ಟದ ಲೆಕ್ಕಾಚಾರದ ದಾಖಲೆಗಳು ಮತ್ತು ಬ್ಯಾಲೆನ್ಸ್ ಶೀಟ್ ಪ್ರತಿಗಳನ್ನು ಲೆಕ್ಕಪರಿಶೋಧಕರಿಂದ ದೃಢೀಕರಿಸಿ ನೀಡುವುದು.<br>ಋ) ಬಿಡ್‌ದಾರರು ಕ.ರಾ.ರ.ಸಾ.ನಿಗಮ ಮತ್ತು ಇತರೆ ನಿಗಮಗಳಲ್ಲಿ Defaulter ಆಗದೆ ಇರುವ ಬಗ್ಗೆ ಹಾಗೂ ಕಪ್ಪುಪಟ್ಟಿಗೆ ಸೇರಿಲ್ಲದಿರುವ ಬಗ್ಗೆ ಸ್ವಯಂ ದೃಢೀಕರಣ ಪತ್ರ |

14. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಮೀಸಲಿಟ್ಟ ಮಳಿಗೆಗಳಲ್ಲಿ, ಒಬ್ಬ ಬಿಡ್‌ದಾರರು ಒಂದು ಮಳಿಗೆಯನ್ನು ಮಾತ್ರ ಮೀಸಲಾತಿ ಆಧಾರದ ಮೇಲೆ ಪಡೆಯಲು ಅವಕಾಶವಿದೆ. ನಾಲ್ಕು ರಾಜ್ಯ ಸಾರಿಗೆ ನಿಗಮ/ಸಂಸ್ಥೆ ವ್ಯಾಪ್ತಿಯ ಬಸ್ ನಿಲ್ದಾಣಗಳಲ್ಲಿ ಮತ್ತು ಇತರೆ ಸರ್ಕಾರಿ ಇಲಾಖೆಗಳಲ್ಲಿ ಯಾವುದೇ ಮಳಿಗೆ/ಜಾಹೀರಾತು ಪರವಾನಗಿಯನ್ನು ಮೀಸಲಾತಿ ಆಧಾರದ ಮೇಲೆ ಪಡೆದಿರುವುದಿಲ್ಲ ಎಂಬ ಬಗ್ಗೆ **ಸ್ವಯಂ-ದೃಢೀಕರಣವನ್ನು** ಬಿಡ್‌ದಾರರು ಇ-ಟೆಂಡರ್‌ನಲ್ಲಿ ಅಪ್‌ಲೋಡ್ ಮಾಡುವುದು. ಈ ನಿಯಮವನ್ನು ಟೆಂಡರ್‌ನಲ್ಲಿ ಭಾಗವಹಿಸುವ ಬಿಡ್‌ದಾರರು ಉಲ್ಲಂಘಿಸಿರುವುದು, ಯಾವುದೇ ಹಂತದಲ್ಲಿ ಕಂಡು ಬಂದಲ್ಲಿ, ಇ.ಎಂ.ಡಿ./ಭದ್ರತಾ ಠೇವಣಿಯನ್ನು ಮುಟ್ಟುಗೋಲು ಹಾಕಿಕೊಂಡು ಆಯ್ಕೆ/ಕರಾರನ್ನು ರದ್ದುಗೊಳಿಸಲಾಗುವುದು.
15. ಅಂಧರು ಮತ್ತು ವಿಕಲಚೇತನರಿಗೆ ಮೀಸಲಿಟ್ಟ ಮಳಿಗೆಗಳನ್ನು, ಒಬ್ಬ ಬಿಡ್‌ದಾರರು ಒಂದು ಮಳಿಗೆಯನ್ನು ಮಾತ್ರ ಮೀಸಲಾತಿ ಆಧಾರದ ಮೇಲೆ ಪಡೆಯಲು ಅವಕಾಶವಿದೆ. ನಾಲ್ಕು ರಾಜ್ಯ ಸಾರಿಗೆ ನಿಗಮ/ಸಂಸ್ಥೆ ವ್ಯಾಪ್ತಿಯ ಬಸ್ ನಿಲ್ದಾಣಗಳಲ್ಲಿ ಮತ್ತು ಇತರೆ ಸರ್ಕಾರಿ ಇಲಾಖೆಗಳಲ್ಲಿ ಯಾವುದೇ ಮಳಿಗೆಗಳ ಪರವಾನಗಿಯನ್ನು ಮೀಸಲಾತಿ ಆಧಾರದ ಮೇಲೆ ಪಡೆದಿರುವುದಿಲ್ಲ ಎಂಬ ಬಗ್ಗೆ **ಸ್ವಯಂ-ದೃಢೀಕರಣವನ್ನು** ಬಿಡ್‌ದಾರರು ಇ-ಟೆಂಡರ್‌ನಲ್ಲಿ ಅಪ್‌ಲೋಡ್ ಮಾಡುವುದು. ಈ ನಿಯಮವನ್ನು ಟೆಂಡರ್‌ನಲ್ಲಿ

ಭಾಗವಹಿಸುವ ಬಿಡ್‌ದಾರರು ಉಲ್ಲಂಘಿಸಿರುವುದು ಯಾವುದೇ ಹಂತದಲ್ಲಿ ಕಂಡು ಬಂದಲ್ಲಿ, ಇ.ಎಂ.ಡಿ/ಭದ್ರತಾ ಠೇವಣಿಯನ್ನು ಮುಟ್ಟುಗೋಲು ಹಾಕಿಕೊಂಡು ಆಯ್ಕೆ/ಕರಾರನ್ನು ರದ್ದುಗೊಳಿಸಲಾಗುವುದು.

16. ದೂರವಾಣಿ ಭೂತ್‌ನ ಜೊತೆಗೆ ಮೊಬೈಲ್ ರಿಚಾರ್ಜರ್ ಅಂಗವಿಕಲರಿಗೆ ಮಾತ್ರ.
17. ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಅರ್ಜಿಸಲ್ಲಿಸಿ, ಅತಿ ಹೆಚ್ಚಿನ ಮೊತ್ತವನ್ನು ಬಿಡ್ ಮಾಡಿರುವ ಮತ್ತು ಸಮರ್ಪಕ ದಾಖಲೆಗಳನ್ನು ಸಲ್ಲಿಸಿರುವ ಬಿಡ್‌ದಾರರನ್ನು ಪರವಾನಗಿದಾರರನ್ನಾಗಿ ಆಯ್ಕೆ ಮಾಡಲಾಗುವುದು.
18. ಭಾರತ ಸರ್ಕಾರ / ಕರ್ನಾಟಕ ಸರ್ಕಾರ / ಕ.ರಾ.ರ.ಸಾ.ನಿಗಮವು ಆಗಿಂದಾಗ್ಗೆ ವಿಧಿಸುವ / ಕಾಲ ಕಾಲಕ್ಕೆ ಬದಲಾಗುವ ಷರತ್ತು / ನಿಬಂಧನೆಗಳಿಗೆ ಪರವಾನಗಿದಾರರು ಬದ್ಧರಾಗಿರಬೇಕು.

<u>ಪರವಾನಗಿ ಅವಧಿ:–</u>

1. ನಿಗಮದಲ್ಲಿನ ಮಳಿಗೆಗಳನ್ನು ಈ ಕೆಳಕಂಡಂತೆ ಪರವಾನಿಗೆ ನೀಡಲಾಗುವುದು.

| ಕ್ರ. ಸಂ. | ಮಳಿಗೆ ಮಾದರಿ/ಸ್ಥಳ | ಪರವಾನಗಿ ಅವಧಿ |
|---|---|---|
| 1 | ತೆರೆದ ಸ್ಥಳದಲ್ಲಿನ ಮಳಿಗೆಗಳು | 3 ವರ್ಷಗಳು |
| 2 | ಕಟ್ಟಿದ ಮಳಿಗೆಗಳು | 5 ವರ್ಷಗಳು |
| 3 | ಡಾರ್ಮಿಟರಿ / ಲಾಡ್ಜಿಂಗ್ / ಕಛೇರಿ ಉದ್ದೇಶಕ್ಕಾಗಿ / ಮೊಬೈಲ್ ಟವರ್ಸ್ | 10 ವರ್ಷಗಳು |

2. ಉಪಹಾರಗೃಹದ ನವೀಕರಣ:
   - ಪರವಾನಿಗೆಯನ್ನು ಮತ್ತೊಂದು ಅವಧಿಗೆ ಮಾತ್ರ (5+5 ವರ್ಷಗಳು) ನವೀಕರಣಕ್ಕೆ ಅವಕಾಶ ಕಲ್ಪಿಸಲಾಗಿದೆ.
   - ಉಪಹಾರ ಗೃಹದ ಪರವಾನಿಗೆದಾರರ ಮನವಿಯ ಮೇರೆಗೆ, ಪರವಾನಿಗೆ ಅವಧಿಯಲ್ಲಿನ ಉಪಹಾರ ಗೃಹದ ನಿರ್ವಹಣೆಯ ಗುಣಮಟ್ಟ ಮತ್ತು ಮಾಸಿಕ ಪರವಾನಿಗೆ ಶುಲ್ಕ ಪಾವತಿಯನ್ನು ಪರಿಗಣಿಸಿ, ಪರವಾನಿಗೆ ಶುಲ್ಕ ಪಾವತಿಯನ್ನು ಪರಿಗಣಿಸಿ, ಪರವಾನಿಗೆ ಶುಲ್ಕದಲ್ಲಿ 6ನೇ ವರ್ಷದಲ್ಲಿ ಶೇ.15 ರಷ್ಟು ಹಾಗೂ ತದನಂತರ ಪ್ರತಿವರ್ಷ ಶೆ.10 ರಷ್ಟು ಹೆಚ್ಚಳದ ಷರತ್ತೊಹೊಂದಿಗೆ 5 ವರ್ಷಗಳಿಗೆ ನವೀಕರಿಸಲಾಗುವುದು.
   - ಉಪಹಾರ ಗೃಹದ ಪರವನಿಗೆದಾರರು ನವೀಕರಣಕ್ಕೆ ಇಚ್ಚಿಸಿದಲ್ಲಿ 6 ತಿಂಗಳು ಮುಂಚಿತವಾಗಿ (ಟೆಂಡರ್ ಅಹ್ವಾನಿಸುವ ಮುಂಚೆ) ಮನವಿ ಸಲ್ಲಿಸಬೇಕು, ಕರಾರು ನವೀಕರಣದ ಬಗ್ಗೆ ತೀರ್ಮಾನದ ಹಕ್ಕನ್ನು ನಿಗಮವು ಕಾಯ್ದಿರಿಸಿದೆ.

<u>ಭದ್ರತಾ ಠೇವಣಿ:–</u>

1. ಕೆಳಕಂಡಂತೆ ನಿಗದಿತ ಭದ್ರತಾ ಠೇವಣಿ ಮೊತ್ತವನ್ನು ರಾಷ್ಟ್ರೀಕೃತ / ಶೆಡ್ಯೂಲ್ ಬ್ಯಾಂಕ್‌ನಿಂದ ಪಡೆದ ಡಿ.ಡಿ. / RTGS / NEFT ಮೂಲಕ ಪಾವತಿ ಮಾಡುವುದು.

| ಕ್ರ.ಸಂ. | ಪರವಾನಗಿ ಅವಧಿ | ಒಟ್ಟು ಪಾವತಿಸಬೇಕಿರುವ ಭದ್ರತಾ ಠೇವಣಿ |
|---|---|---|
| 1 | 3 ವರ್ಷ | ಅಂಗೀಕೃತ ಮಾಸಿಕ ಪರವಾನಗಿ ಶುಲ್ಕದ 6 ಪಟ್ಟು |
| 2 | 5 ವರ್ಷ | ಅಂಗೀಕೃತ ಮಾಸಿಕ ಪರವಾನಗಿ ಶುಲ್ಕದ 8 ಪಟ್ಟು |
| 3 | 10 ವರ್ಷ | ಅಂಗೀಕೃತ ಮಾಸಿಕ ಪರವಾನಗಿ ಶುಲ್ಕದ 10 ಪಟ್ಟು |

2. ಪರವಾನಗಿದಾರರು RTGS / NEFT ಮೂಲಕ ಪಾವತಿ ಮಾಡುವಾಗ ಬಸ್ ನಿಲ್ದಾಣ, ಮಳಿಗೆ ಸಂಖ್ಯೆ, ಪರವಾನಗಿದಾರರ ಹೆಸರನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.
3. ಭದ್ರತಾ ಠೇವಣಿ ಮೊತ್ತವನ್ನು ಡಿ.ಡಿ. ರೂಪದಲ್ಲಿ ಸಲ್ಲಿಸುವಾಗ Divisional Controller, K.S.R.T.C, Chikmagaluru Division ರವರ ಪದನಾಮಕ್ಕೆ ಡಿ.ಡಿ.ಪಡೆದು ಈ ಕಛೇರಿಗೆ ಸಲ್ಲಿಸುವುದು.
4. ಭದ್ರತಾ ಠೇವಣಿಗೆ ಯಾವುದೇ ಬಡ್ಡಿಯನ್ನು ನೀಡಲಾಗುವುದಿಲ್ಲ.
5. ಆಯ್ಕೆಗೊಂಡ ಪರವಾನಗಿದಾರರ ಇ.ಎಂ.ಡಿ. ಮೊತ್ತವನ್ನು ಭದ್ರತಾ ಠೇವಣಿ ಮೊತ್ತಕ್ಕೆ ಹೊಂದಾಣಿಕೆ ಮಾಡಿಕೊಂಡು, ಉಳಿಕೆ ಭದ್ರತಾ ಠೇವಣಿ ಮೊತ್ತವನ್ನು ಪಾವತಿಸಿಕೊಳ್ಳಲಾಗುವುದು.
6. ಪರವಾನಗಿ ಅವಧಿ ಮುಕ್ತಾಯವಾದ ನಂತರ ನಿಗಮಕ್ಕೆ ಪಾವತಿಸಬೇಕಾದ ಬಾಕಿ ಶುಲ್ಕಗಳನ್ನು ಕಡಿತಗೊಳಿಸಿ ಉಳಿದ ಭದ್ರತಾ ಠೇವಣಿಯನ್ನು ಪರವಾನಗಿದಾರರಿಗೆ ಹಿಂತಿರುಗಿಸಲಾಗುವುದು.

**<u>ಕರಾರು ಒಪ್ಪಂದ:</u>**

1. ಟೆಂಡರ್‌ನಲ್ಲಿ ಆಯ್ಕೆಯಾದ ಬಿಡ್‌ದಾರರು, ಆಯ್ಕೆ ಪತ್ರ ತಲುಪಿದ ದಿನಾಂಕದಿಂದ 07 ದಿನಗಳೊಳಗಾಗಿ ನಿಗದಿತ ಭದ್ರತಾ ಠೇವಣಿ ಮತ್ತು ಒಂದು ತಿಂಗಳ ಮುಂಗಡ ಮಾಸಿಕ ಪರವಾನಗಿ ಶುಲ್ಕವನ್ನು ಪಾವತಿಸಿ, ಕರ್ನಾಟಕ ಸ್ಟ್ಯಾಂಪ್ ಕಾಯಿದೆ ಪ್ರಕಾರ ಸೂಕ್ತ ಮೌಲ್ಯದ ಛಾಪಾ ಕಾಗದದ ಮೇಲೆ ಕರಾರು ಒಪ್ಪಂದ ಮಾಡಿಕೊಳ್ಳಬೇಕು.
2. ಆಯ್ಕೆಯಾದ ಬಿಡ್‌ದಾರರು, ಆಯ್ಕೆ ಪತ್ರ ತಲುಪಿದ 07 ದಿನಗಳೊಳಗೆ ಕರಾರು ಒಪ್ಪಂದ ಮಾಡಿಕೊಳ್ಳುವಲ್ಲಿ ವಿಫಲರಾದಲ್ಲಿ, ಸದರಿ ಬಿಡ್‌ದಾರರ ಇ.ಎಂ.ಡಿ. ಮೊತ್ತವನ್ನು ನಿಗಮಕ್ಕೆ ಆದ ನಷ್ಟಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

**ಮಾಸಿಕ ಪರವಾನಗಿ ಶುಲ್ಕ ಮತ್ತು ಸರಕು & ಸೇವಾ ತೆರಿಗೆ (GST) ಪಾವತಿ:–**

1. ಪರವಾನಗಿದಾರರು ಕರಾರು ಒಪ್ಪಂದ ಪ್ರಾರಂಭದ ಮಾಹೆಯ ಮುಂಗಡ ಮಾಸಿಕ ಪರವಾನಗಿ ಶುಲ್ಕವನ್ನು ಡಿ.ಡಿ. ಮೂಲಕ ಭದ್ರತಾ ಠೇವಣಿ ಜೊತೆ ಸಲ್ಲಿಸುವುದು.
2. ಈ ಪ್ರಕಟಣೆಯಲ್ಲಿನ ಸೂಚಿಸಿರುವ ಮಳಿಗೆಳಿಗೆ ಕನಿಷ್ಠ ಮಾಸಿಕ ಪರವಾನಿಗೆ ಶುಲ್ಕ ನಿಗದಿಪಡಿಸಿದ್ದು, ಸದರಿ ಕನಿಷ್ಟ ಮಾಸಿಕ ಪರವಾನಿಗೆ ಶುಲ್ಕದಲ್ಲಿ ಸರಕು ಮತ್ತು ಸೇವಾ ತೆರಿಗೆ ಹಾಗೂ ಇತರೆ ಶುಲ್ಕಗಳು ಒಳಗೊಂಡಿರವುದಿಲ್ಲ. ಬಿಡ್‌ದಾರರು ಈ ಪ್ರಕಟಣೆಯಲ್ಲಿ ನಮೂದಿಸಿರುವ ಬಿಡ್ ಮೊತ್ತವನ್ನು ಕೇವಲ ಮಾಸಿಕ ಪರವಾನಿಗೆ ಶುಲ್ಕ ಎಂದು ಪರಿಗಣಿಸಲಾಗುವುದು.
3. ಪರವಾನಗಿದಾರರು ಪ್ರತಿ ಮಾಹೆ 07 ನೇ ತಾರೀಖಿನೊಳಗಾಗಿ ಮಾಸಿಕ ಪರವಾನಗಿ ಶುಲ್ಕ ಮತ್ತು ಸರಕು & ಸೇವಾ ತೆರಿಗೆ ಶುಲ್ಕವನ್ನು, ಪ್ರಸ್ತುತ ಶೇ.18% ಮುಂಗಡವಾಗಿ ನಿಗಮಕ್ಕೆ ಪಾವತಿಸಬೇಕು.
4. ಪರವಾನಗಿದಾರರು ಮಾಸಿಕ ಪರವಾನಗಿ ಶುಲ್ಕ ಮತ್ತು ಸರಕು & ಸೇವಾ ತೆರಿಗೆ ಪಾವತಿಸಲು ಇನ್‌ವಾಯ್ಸ್ ಅನ್ನು ಪ್ರತಿ ತಿಂಗಳ 3ನೇ ತಾರೀಖಿನೊಳಗೆ ಪಡೆದುಕೊಳ್ಳುವುದು.
5. ಇನ್‌ವಾಯ್ಸ್‌ನಲ್ಲಿ ನಮೂದಿಸಿದ ಪೂರ್ಣ ಮೊತ್ತವನ್ನು ಪರವಾನಗಿದಾರರು ಪಾವತಿಸಬೇಕಿರುತ್ತದೆ. ಒಂದು ವೇಳೆ ಇನ್‌ವಾಯ್ಸ್ ಮೊತ್ತ ಪಾವತಿಸಲು ಪರವಾನಗಿದಾರರು ತಡಮಾಡಿದಲ್ಲಿ, ಬಾಕಿ ಪರವಾನಗಿ ಶುಲ್ಕ ಮತ್ತು ಸರಕು & ಸೇವಾ ತೆರಿಗೆ ಮೇಲೂ ವಾರ್ಷಿಕ ಶೇ.18ರಷ್ಟು ಬಡ್ಡಿಯನ್ನು ಕನಿಷ್ಠ 100/– ರಂತೆ, ವಿಳಂಬದ ದಿನಗಳ ಲೆಕ್ಕದಲ್ಲಿ ವಿಧಿಸಲಾಗುವುದು.
6. ಪರವಾನಗಿದಾರರು ಊಖಖ ನೊಂದಣಿ ಮತ್ತು ಇದಕ್ಕೆ ಪೂರಕವಾದ ದಾಖಲೆಗಳನ್ನು ಲಭ್ಯವಿದ್ದಲ್ಲಿ ಈ ಕಚೇರಿಗೆ ಸಲ್ಲಿಸುವುದು.
7. ಮಾಸಿಕ ಪರವಾನಗಿ ಶುಲ್ಕವು ಪ್ರತಿ ವರ್ಷ ಶೇ.10 ರಷ್ಟು ಹೆಚ್ಚಳವಾಗುವುದು. ಇದಕ್ಕನುಗುಣವಾಗಿ ಸರಕು & ಸೇವಾ ತೆರಿಗೆಯು ಹೆಚ್ಚಳವಾಗುವುದು.

**ಕರಾರಿನ ಅವಧಿ ಮುಗಿಯುವ ದಿನ ಮಳಿಗೆಯನ್ನು/ತೆರೆದ ಸ್ಥಳಗಳಲ್ಲಿ ಸ್ಟ್ರಕ್ಚರ್‌ಗಳನ್ನು ತೆರವುಗೊಳಿಸಲು ವಿಳಂಭ ಮಾಡಿದ್ದಲ್ಲಿ ತೆಗೆದುಕೊಳ್ಳಬೇಕಾಗಿರುವ ಕ್ರಮದ ಬಗ್ಗೆ.–**

| ಕ್ರ.ಸಂ | ವಿಳಂಬದ ದಿನಗಳು | ವಿಧಿಸಬೇಕಿರುವ ದಂಡದ ಮೊತ್ತ ಶೇ. ವಾರು |
|---|---|---|
| 1 | ಮಳಿಗೆಯನ್ನು ತೆರವುಗೊಳಿಸಲು 07 ದಿನಗಳವರೆಗಿನ ವಿಳಂಬಕ್ಕೆ | ಕೊನೆಯ ತಿಮುಗಳ ಪರವಾನಗಿ ಶುಲ್ಕದ ಶೇ.25 ರಷ್ಟು ದಂಡ ಮತ್ತು ಅನ್ವಯಿಸುವ ತೆರಿಗೆಗಳನ್ನು ವಿಧಿಸಲಾಗುವುದು. |
| 2 | ಮಳಿಗೆಯನ್ನು ತೆರವುಗೊಳಿಸಲು 07 ದಿನಗಳ ಮೇಲ್ಪಟ್ಟು, 15 ದಿನಗಳವರೆಗಿನ ವಿಳಂಬಕ್ಕೆ | ಕೊನೆಯ ತಿಂಗಳ ಪರವಾನಗಿ ಶುಲ್ಕದ ಶೇ.50 ರಷ್ಟು ದಂಡ ಮತ್ತು ಅನ್ವಯಿಸುವ ತೆರಿಗಳನ್ನು ವಿಧಿಸಲಾಗುವುದ. |
| 3 | ಮಳಿಗೆಯನ್ನು ತೆರವುಗೊಳಿಸಲು 15 ದಿನಗಳ ಮೇಲ್ಪಟ್ಟು, ಒಂದು ತಿಂಗಳವರೆಗಿನ ವಿಳಂಬಕ್ಕೆ | ಕೊನೆಯ ತಿಂಗಳ ಪೂರ್ಣ ಪರವಾನಗಿ ಶುಲ್ಕದಷ್ಟು ದಂಡ ಮತ್ತು ಅನ್ವಯಿಸುವ ತೆರಿಗೆಗಳು |

I. ಒಂದು ತಿಂಗಳೊಳಗಾಗಿ ಮಳಿಗೆಯಲ್ಲಿನ ವಸ್ತುಗಳನ್ನು ಹಾಗೂ ತೆರೆದ ಸ್ಥಳಗಳಲ್ಲಿನ (Structure) ಸ್ಟ್ರಕ್ಚರ್‌ನ್ನು ತೆರವುಗೊಳಿಸಲು ವಿಫಲರಾದಲ್ಲಿ ಅವುಗಳನ್ನು ಮುಟ್ಟುಗೋಲು ಹಾಕಿಕೊಂಡು ಪರವಾನಿಗೆದಾಶರರ ಖರ್ಚಿನಲ್ಲಿ ತೆರವುಗೊಳಿಸಲು/ವಿಲೇವಾರಿ ಮಾಢಲು ನಿಗಮದ ವತಿಯಿಂದ ಕ್ರಮಕೈಗೊಳ್ಳಲಾಗುವುದು.

II. ಮಳಿಗೆಯಲ್ಲಿನ ವಸ್ತುಗಳನ್ನು ಮತ್ತು ತೆರೆದ ಸ್ಥಳಗಳಲ್ಲಿನ (Structure) ಸ್ಟ್ರಕ್ಚರ್ ತೆರವುಗೊಳಿಸಿರುವುದನ್ನು ಖಚಿತಪಡಿಸಿಕೊಂಡು, ಬರಬೇಕಾಗಿರುವ ಬಾಕಿ ಮೊತ್ತವನ್ನು ಹೊಂದಾಣಿಕೆ ಮಾಡಿದ ನಂತರ, ಭದ್ರತಾ ಠೇವಣಿಯನ್ನು ಹಿಂದಿರುಗಿಸಲಾಗುವುದು.

**ವಿದ್ಯುಚ್ಛಕ್ತಿ ಹಾಗೂ ನೀರಿನ ಬಿಲ್ಲುಗಳ ಪಾವತಿ:**

1. ನಿಗಮದ ಕೊಳವೆ ಬಾವಿಗಳಿಂದ ನೀರಿನ ಸೌಲಭ್ಯವನ್ನು ಕಲ್ಪಿಸಿರುವಂತಹ ಮಳಿಗೆಗಳ ಪರವಾನಗಿದಾರರು ಮಾಸಿಕ ಪರವಾನಗಿ ಶುಲ್ಕದ ಶೇ.2 ರಷ್ಟು ಅಥವಾ ಕೊಳವೆ ಬಾವಿಯ ವಿದ್ಯುತ್ ಬಿಲ್ಲಿನ ಶೇ.50 ರಷ್ಟು, ಇದರಲ್ಲಿ ಯಾವುದು ಹೆಚ್ಚಿನದು, ಆ ಮೊತ್ತವನ್ನು ಪಾವತಿಸಬೇಕು.
2. ಒಂದು ವೇಳೆ ಮಳಿಗೆಗಳಿಗೆ ಜಲಮಂಡಳಿ / ಸಂಬಂಧಿಸಿದ ಇಲಾಖೆಗಳಿಂದ ಪ್ರತ್ಯೇಕವಾಗಿ ನೀರಿನ ಮೀಟರ್ ಅಳವಡಿಸಿದ್ದಲ್ಲಿ, ಅಂತಹ ಮಳಿಗೆಯ ಪರವಾನಗಿದಾರರು ಅನ್ವಯಿಸುವ ನೀರಿನ ಶುಲ್ಕವನ್ನು ಸಂಬಂಧಿಸಿದ ಇಲಾಖೆಗೆ ಪಾವತಿಸಬೇಕು.
3. ಪ್ರತಿ ಮಾಹೆಯ ವಿದ್ಯುಚ್ಛಕ್ತಿ ಹಾಗೂ ನೀರಿನ ಬಿಲ್ಲುಗಳನ್ನು ನಿಗದಿತ ಸಮಯದಲ್ಲಿ ಪಾವತಿಸಬೇಕು.
4. ಒಂದು ವೇಳೆ ನಿಗಮದ ವತಿಯಿಂದ ನೀರಿನ ಸರಬರಾಜು ಮಾಡಲು ಸಾಧ್ಯವಾಗದಿದ್ದಲ್ಲಿ, ಪರವಾನಗಿದಾರರು ತಮ್ಮ ಸ್ವಂತ ಖರ್ಚಿನಲ್ಲಿ ನೀರಿನ ವ್ಯವಸ್ಥೆಯನ್ನು ಮಾಡಿಕೊಳ್ಳಬೇಕಿರುತ್ತದೆ. ಸಂಸ್ಥೆಯು ಯಾವುದೇ ರೀತಿಯ ಭಾದ್ಯಸ್ಥರಲ್ಲ.

**ಹೆಚ್ಚುವರಿ ಸ್ಥಳಾವಕಾಶ:–**

**1.** ಪರವಾನಗಿದಾರರು ಟೆಂಡರ್/ಕರಾರು ಒಪ್ಪಂದದಲ್ಲಿ ನಮೂದಿಸಿದ ಸ್ಥಳದ ವಿಸ್ತೀರ್ಣಕ್ಕಿಂತ ಆ ವಾಣಿಜ್ಯ ಮಳಿಗೆಗೆ ಹೊಂದಿಕೊಂಡಂತೆ ಇರುವ ಹೆಚ್ಚುವರಿ ಸ್ಥಳವನ್ನು ಅನಧಿಕೃತವಾಗಿ ಬಳಸಿಕೊಳ್ಳುವುದು ನಿಯಮ ಬಾಹಿರವಾಗಿರುತ್ತದೆ.

**ಅನಧಿಕೃತವಾಗಿ ಹೆಚ್ಚುವರಿ ಸ್ಥಳಾವಕಾಶದ ಬಳಕೆ:–**

1. ಪರವಾನಗಿದಾರರು ಅನಧಿಕೃತವಾಗಿ ಬಳಸಿದ ಹೆಚ್ಚುವರಿ ಸ್ಥಳಾವಕಾಶವನ್ನು ನೋಟಿಸ್ ನೀಡಿದ ಕೂಡಲೇ ತೆರವುಗೊಳಿಸಬೇಕು. ಇದಲ್ಲದೆ, ಪರವಾನಗಿದಾರರಿಗೆ ಕೆಳಕಂಡಂತೆ ದಂಡ ವಿಧಿಸಲಾಗುವುದು ಹಾಗೂ ಕರಾರನ್ನು ರದ್ದುಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

| | | |
|---|---|---|
| ಮೊದಲ ಬಾರಿಗೆ | ಉಪಯೋಗಿಸಿದ ಹೆಚ್ಚುವರಿ ಸ್ಥಳಕ್ಕೆ ಮಾಸಿಕ ಪರವಾನಗಿ ಶುಲ್ಕದ 3 ಪಟ್ಟು ಪ್ರೋರೇಟಾ ದರಕ್ಕನುಗುಣವಾಗಿ ದಂಡ ವಿಧಿಸಲಾಗುವುದು | ದಂಡವನ್ನು ಕನಿಷ್ಠ 1 ತಿಂಗಳು, ಗರಿಷ್ಠ ಉಪಯೋಗಿಸಿದ ಒಟ್ಟು ದಿನಗಳಿಗೆ ವಿಧಿಸಲಾಗುವುದು. |
| ಎರಡನೇ ಬಾರಿಗೆ ಹಾಗೂ ಪುನರಾವರ್ತನೆ ಗೊಂಡಲ್ಲಿ | ಉಪಯೋಗಿಸಿದ ಹೆಚ್ಚುವರಿ ಸ್ಥಳಕ್ಕೆ ಮಾಸಿಕ ಪರವಾನಗಿ ಶುಲ್ಕದ 5 ಪಟ್ಟು ಪ್ರೋರೇಟಾ ದರಕ್ಕನುಗುಣವಾಗಿ ದಂಡ ವಿಧಿಸಲಾಗುವುದು. ಇದಲ್ಲದೆ ಭದ್ರತಾ ಠೇವಣಿಯನ್ನು ಮುಟ್ಟುಗೋಲು ಹಾಕಿಕೊಂಡು, ಕರಾರನ್ನು ರದ್ದುಪಡಿಸುವ ಅಧಿಕಾರವನ್ನು ನಿಗಮವು ಹೊಂದಿರುತ್ತದೆ. | ದಂಡವನ್ನು ಕನಿಷ್ಠ 1 ತಿಂಗಳು, ಗರಿಷ್ಠ ಉಪಯೋಗಿಸಿದ ಒಟ್ಟು ದಿನಗಳಿಗೆ ವಿಧಿಸಲಾಗುವುದು. |

2. ಪರವಾನಗಿ ಪಡೆದ ಮಳಿಗೆಗಳಲ್ಲಿ ಟೆಂಡರ್‌ನಲ್ಲಿ ನಿಗದಿಪಡಿಸಿದ ವ್ಯವಹಾರವನ್ನು ಹೊರತುಪಡಿಸಿ ಇತರೆ ವ್ಯವಹಾರವನ್ನು ನಡೆಸಲು ಅವಕಾಶವಿರುವುದಿಲ್ಲ.
3. ಜನರಲ್ ಸ್ಟಾಲ್‌ಗಳಿಗೆ ಆಯ್ಕೆಯಾದ ಪರವಾನಗಿದಾರರು, ಈ ಕೆಳಗಿನ ಪಟ್ಟಿಯಲ್ಲಿ ನಮೂದಿಸಿದ ವಸ್ತು / ಪದಾರ್ಥಗಳನ್ನು ಮಾರಾಟ ಮಾಡಬೇಕಿರುತ್ತದೆ. ಮಾರಾಟ ಮಾಡಲು ನಿಷೇಧಿಸಿದ ವಸ್ತು / ಪದಾರ್ಥಗಳನ್ನು ಮಾರಾಟ ಮಾಡುವಂತಿಲ್ಲ. ಸದರಿ ಪಟ್ಟಿಯ ಹೊರತಾಗಿ ಇರುವ ವಸ್ತುಗಳನ್ನು ಮಾರಾಟ ಮಾಡಬೇಕಿದ್ದಲ್ಲಿ, ಪರವಾನಗಿದಾರರು ಕರಾರಿಗೂ ಮುಂಚಿತವಾಗಿ ನಿಗಮದಿಂದ ಪೂರ್ವಾನುಮತಿ ಪಡೆಯಬೇಕಿರುತ್ತದೆ.

| **ಜನರಲ್ ಮಳಿಗೆಯಲ್ಲಿ ಮಾರಾಟ ವಾಡಬಹುದಾದ ವಸ್ತು / ಪದಾರ್ಥಗಳು** | **ಜನರಲ್ ಮಳಿಗೆಯಲ್ಲಿ ಮಾರಾಟ ಮಾಡಲು ನಿಷೇಧಿಸಿರುವ ವಸ್ತು / ಪದಾರ್ಥಗಳು** |
|---|---|
| ಪುಸ್ತಕ / ದಿನಪತ್ರಿಕೆ / ನಿಯತಕಾಲಿಕೆಗಳು ಮತ್ತು ಸ್ಟೇಷನರಿ ವಸ್ತುಗಳು, ಮಾರ್ಜಕ / ಸಾಬೂನುಗಳು ಹಣ್ಣು / ಹೂಗಳು, ಜೆರಾಕ್ಸ್, ಪ್ಯಾಕ್ ಆಗಿರುವ ಬಿಸ್ಕೆಟ್ಸ್ / ಜ್ಯೂಸ್, ಬೇಕರಿ ತಿನಿಸುಗಳು, ನೀರಿನ ಬಾಟಲ್, ಮೊಬೈಲ್ ಕರೆನ್ಸಿ, ಸೌಂದರ್ಯವರ್ಧಕಗಳು, ಅಲಂಕಾರಿಕ ವಸ್ತುಗಳು, ಕೊಡುಗೆ ನೀಡುವ ವಸ್ತುಗಳು, ಫ್ಯಾನ್ಸಿ ಸ್ಟೋರ್‌ನಲ್ಲಿ ಮಾರಾಟ ಮಾಡುವ ವಸ್ತುಗಳು, **ಈ ಮಳಿಗೆಗಳಲ್ಲಿ ಗ್ಯಾಸ್ / ಸ್ಟೌವ್ ಬಳಕೆಗೆ ಅವಕಾಶವಿಲ್ಲ.** | ಬೇಯಿಸಿದ ಪದಾರ್ಥಗಳಾದ ಕಾಫಿ, ಟೀ, ಉಪಹಾರ, ಊಟ, ಹಾಲು ಇತ್ಯಾದಿಗಳು, ಔಷಧಿಗಳು, ದೂರವಾಣಿ ಬೂತ್, ನಾಣ್ಯ ಚಾಲಿತ ಮಾನವ ತೂಕದ ಯಂತ್ರ, ಕಾನೂನು ಬಾಹಿರವಾಗಿರುವ ಪಟಾಕಿ, ಗನ್ನುಗಳು, ಸಿಡಿಮದ್ದುಗಳು, ತಂಬಾಕುಯುಕ್ತ ಪದಾರ್ಥಗಳು, ಮದ್ಯದ ಮಾರಾಟ, ಸೀಮೆಎಣ್ಣೆ, ಡೀಸೆಲ್, ಪೆಟ್ರೋಲ್ & ಗ್ಯಾಸ್, ಗ್ಯಾಸ್ ಸಿಲಿಂಡರ್, ಟ್ರಾವೆಲ್ / ಟ್ರಾನ್ಸ್‌ಪೋರ್ಟ್ ಏಜೆನ್ಸಿ, ಟಿಕೆಟ್ ಬುಕಿಂಗ್, ಇತ್ಯಾದಿ ಕಾನೂನು ಮತ್ತು ನಿಗಮದ ವತಿಯಿಂದ ನಿಷೇಧಿಸಲ್ಪಟ್ಟ ಹಾಗೂ ಮುಂದೆ ನಿಷೇಧಿಸಲ್ಪಡುವ ವಸ್ತುಗಳು. |

4. ವಾಣಿಜ್ಯ ಮಳಿಗೆಗಳಲ್ಲಿ ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ ನಿಷೇದಿಸಲಾಗಿರುತ್ತದೆ.
5. ಔಷಧಿ ಮಳಿಗೆಗಳಿಗೆ ಭಾಗವಹಿಸುವ ಅರ್ಜಿದಾರರು ಔಷಧಿ ಮಳಿಗೆ ನಡೆಸಲು ಅವಶ್ಯವಿರುವ ಫಾರ್ಮಸಿ ವಿದ್ಯಾರ್ಹತೆಯನ್ನು **(D.Pharma / B.Pharma)** ಮತ್ತು ಔಷಧ ನಿಯಂತ್ರಣ ಪ್ರಾಧಿಕಾರದಿಂದ ಔಷಧಿಗಳನ್ನು ಮಾರಾಟ ಮಾಡಲು ಅನುಮತಿ ಪಡೆದಿರುವ ಪ್ರಮಾಣ ಪತ್ರವನ್ನು **(Drugs Sales Registration Certification from Drug Control Authority)** ಕಡ್ಡಾಯವಾಗಿ ಹೊಂದಿರಬೇಕು. ಸದರಿ ದಾಖಲೆಗಳ ಪ್ರತಿಯನ್ನು ಟೆಂಡರ್‌ನಲ್ಲಿ ಅಪ್‌ಲೋಡ್ ಮಾಡಬೇಕು ಹಾಗೂ ಅಗತ್ಯ ಅನುಮತಿಯನ್ನು ವಿವಿಧ ಸರ್ಕಾರಿ ಇಲಾಖೆಯಿಂದ ಪಡೆಯುವುದು ಪರವಾನಗಿದಾರರ ಜವಾಬ್ದಾರಿಯಾಗಿರುತ್ತದೆ.

**ನಿಗದಿತ ದರದಲ್ಲಿ ಮಾರಾಟ (MRP rate):-**

1. ವಾಣಿಜ್ಯ ಮಳಿಗೆಗಳಲ್ಲಿ ಪರವಾನಗಿದಾರರು ಮಾರಾಟ ಮಾಡುವ ವಸ್ತುಗಳ ಮೇಲೆ ನಮೂದಿಸಲಾದ ಗರಿಷ್ಠ ಮೊತ್ತಕ್ಕೆ/MRP (Maximum Retail Price) ಮೀರದಂತೆ ಮಾರಾಟ ಮಾಡಬೇಕು. ವಸ್ತುಗಳನ್ನು ಹೆಚ್ಚಿನ ದರದಲ್ಲಿ ಮಾರಾಟ ಮಾಡುತ್ತಿರುವುದು ನಿಗಮದ ಗಮನಕ್ಕೆ ಬಂದಲ್ಲಿ, ಅಂತಹ ಪರವಾನಗಿದಾರರಿಗೆ ಮೊದಲ ಪ್ರಕರಣಕ್ಕೆ ರೂ.500/-, 2ನೇ ಪ್ರಕರಣಕ್ಕೆ ರೂ.1,000/- ಮತ್ತು 3ನೇ ಪ್ರಕರಣಕ್ಕೆ ರೂ.2,000/- ದಂಡ ವಿಧಿಸಲಾಗುವುದು. ಇದು ಪುನರಾವರ್ತನೆಗೊಂಡಲ್ಲಿ, ರೂ.2,000/- ದಂಡ ವಿಧಿಸುವ ಅಥವಾ ಕರಾರನ್ನು ರದ್ದುಪಡಿಸುವ ಅಧಿಕಾರವನ್ನು ನಿಗಮವು ಹೊಂದಿರುತ್ತದೆ.
2. ವಾಣಿಜ್ಯ ಮಳಿಗೆಗಳಲ್ಲಿ ಪರವಾನಿಗೆದಾರರು ನಿಗದಿತ ವಸ್ತುಗಳನ್ನು ಹೊರತುಪಡಿಸಿ, ಇತರೆ ವಸ್ತುಗಳನ್ನು ಮಾರಾಟ ಮಾಡುತ್ತಿರುವುದು ನಿಗಮದ ಗಮನಕ್ಕೆ ಬಂದಲ್ಲಿ ಅಂತಹ ಪರವಾನಿಗೆದಾರರಿಗೆ ಮೊದಲನೇ ಬಾರಿ ರೂ.1,000/- ದಂಡ, 2ನೇ ಬಾರಿ ರೂ.2,000/- ದಂಡ ಮತ್ತು 3ನೇ ಬಾರಿ ಅಥವಾ ತದನಂಥರ ರೂ.5,000/- ದಂಡ ವಿಧಿಸುವ ಅಥವಾ ಕರಾರನ್ನು ರದ್ದುಪಡಿಸುವ ಅಧಿಕಾರವನ್ನು ನಿಗಮವು ಹೊಂದಿರುತ್ತದೆ.

**ದ್ವಿಚಕ್ರ / ಕಾರು ವಾಹನ ನಿಲುಗಡೆ ಶುಲ್ಕ:-**

1. ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರ ಅನುಕೂಲಕ್ಕಾಗಿ ದ್ವಿಚಕ್ರ ವಾಹನ ನಿಲ್ದಾಣ ಹಾಗೂ ಕಾರು ನಿಲ್ದಾಣದ ವ್ಯವಸ್ಥೆ ಕಲ್ಪಿಸಲಾಗಿದ್ದು, ವಾಹನ ನಿಲುಗಡೆ ಪರವಾನಗಿ ಪಡೆದ ಪರವಾನಗಿದಾರರು ಈ ಕೆಳಕಂಡಂತೆ ನಿಲುಗಡೆ ಶುಲ್ಕಗಳನ್ನು ವಿಧಿಸಬೇಕಿರುತ್ತದೆ.

**ಇತರೆ ಜಿಲ್ಲಾ ಕೇಂದ್ರ ಬಸ್ ನಿಲ್ದಾಣಗಳ ಪಾರ್ಕಿಂಗ್ ದರಗಳು:**

| ವಾಹನದ ವಿಧ | ದರ (ರೂ.ಗಳಲ್ಲಿ) | | | | | |
|---|---|---|---|---|---|---|
| ಸಮಯ (ಗಂಟೆಗಳಲ್ಲಿ) | 0-2 | 2-4 | 4-8 | 8-12 | 12-24 | 24 ಗಂಟೆಗಳ ಮೇಲ್ಪಟ್ಟು |
| ದ್ವಿಚಕ್ರ ವಾಹನಗಳು | 5/- | 10/- | 15/- | 20/- | 25/ | ಪ್ರತಿ ದಿನಕ್ಕೆ ರೂ.25/- |
| ಕಾರು | 10/- | 20/- | 30/- | 40/- | 50/- | ಪ್ರತಿ ದಿನಕ್ಕೆ ರೂ.50/- |

**ತಾಲ್ಲೂಕು / ಇತರೆ ಬಸ್ ನಿಲ್ದಾಣಗಳ ಪಾರ್ಕಿಂಗ್ ದರಗಳು:**

| ವಾಹನದ ವಿಧ | ದರ (ರೂ.ಗಳಲ್ಲಿ) | | | | | |
|---|---|---|---|---|---|---|
| ಸಮಯ (ಗಂಟೆಗಳಲ್ಲಿ) | 0-2 | 2-4 | 4-8 | 8-12 | 12-24 | 24 ಗಂಟೆಗಳ ಮೇಲ್ಪಟ್ಟು |
| ದ್ವಿಚಕ್ರ ವಾಹನಗಳು | 5/- | 5/- | 10/- | 15/- | 20/- | ಪ್ರತಿ ದಿನಕ್ಕೆ ರೂ.20/- |
| ಕಾರು | 10/- | 10/- | 20/- | 30/- | 40/- | ಪ್ರತಿ ದಿನಕ್ಕೆ ರೂ.40/- |

2. ಒಬ್ಬ ಗ್ರಾಹಕರು ಮೂರು (03) ದಿನಗಳ ಮೇಲ್ಪಟ್ಟು ನಿರಂತರವಾಗಿ ವಾಹನವನ್ನು ಪಾರ್ಕಿಂಗ್ ಮಾಡಲು ಅವಕಾಶವಿರುವುದಿಲ್ಲ.
3. ಸೈಕಲ್ / ಸ್ಕೂಟರ್ ನಿಲ್ದಾಣ (ದ್ವಿಚಕ್ರ ವಾಹನ ನಿಲ್ದಾಣ) ಮತ್ತು ಕಾರು ನಿಲ್ದಾಣದಲ್ಲಿ ವಾಹನಗಳ ನಿಲುಗಡೆಗೆ ನಿಗದಿಪಡಿಸಿದ ದರಗಳನ್ನು ಮಾತ್ರ ಪಡೆದುಕೊಳ್ಳುವುದು. ಒಂದು ವೇಳೆ ನಿಗದಿತ ದರಕ್ಕಿಂತ ಹೆಚ್ಚಿನ ದರಗಳನ್ನು ಪರವಾನಗಿದಾರರು ಪಡೆಯುತ್ತಿರುವುದು ನಿಗಮದ ಗಮನಕ್ಕೆ ಬಂದಲ್ಲಿ, ಅಂತಹ ಪರವಾನಗಿದಾರರಿಗೆ ಮೊದಲ ಐದು(5) ಪ್ರಕರಣಕ್ಕೆ ರೂ.500/-, ನಂತರದ ಐದು (5) ಪ್ರಕರಣಕ್ಕೆ ರೂ.1,000/-ತದ ನಂತರದ ಪ್ರಕರಣಗಳು ದಾಖಲಾದಲ್ಲಿ ಭದ್ರತಾ ಠೇವಣಿಯನ್ನು ಮುಟ್ಟುಗೋಲು ಹಾಕಿಕೊಂಡು ಕರಾರು ಒಪ್ಪಂದವನ್ನು ರದ್ದುಪಡಿಸಿ, ಕಪ್ಪು ಪಟ್ಟಿಗೆ ಸೇರಿಸಲಾಗುವುದು. 3.
4. ಅಂಗವಿಕಲರ ದ್ವಿಚಕ್ರ ಮತ್ತು ತ್ರಿಚಕ್ರ ವಾಹನಗಳಿಗೆ ನಿಲ್ದಾಣದಲ್ಲಿ ಪಾರ್ಕಿಂಗ್ ಮಾಡಲು ಲಭ್ಯವಿರುವ ಸ್ಥಳದಲ್ಲಿ ಕನಿಷ್ಠ ಎರಡು ದ್ವಿಚಕ್ರ/ತ್ರಿಚಕ್ರ /ಕಾರನ್ನು ಅಥವಾ ಲಭ್ಯವಿರುವ ಪಾರ್ಕಿಂಗ್ ಸ್ಥಳದಲ್ಲಿ ಶೇ.2 ರಷ್ಟನ್ನು ಅಂಗವಿಕಲರ ವಾಹನಗಳನ್ನು ಉಚಿತವಾಗಿ ನಿಲ್ಲಿಸಲು ಸ್ಥಳಾವಕಾಶ ಮಾಡಿಕೊಡುವುದು.
5. ಸೈಕಲ್ / ಸ್ಕೂಟರ್ ನಿಲ್ದಾಣ (ದ್ವಿಚಕ್ರ ವಾಹನ ನಿಲ್ದಾಣ) ಮತ್ತು ಕಾರು ನಿಲ್ದಾಣದಲ್ಲಿ ವಾಹನಗಳ ಪರವಾನಗಿದಾರರು ಪರವಾನಗಿ ಶುಲ್ಕದ ಮೇಲೆ ಸರ್ಕಾರ ನಿಗದಿಪಡಿಸಿರುವ/ನಿಗದಿಪಡಿಸುವ ಟಿ.ಸಿ.ಎಸ್ (Tax Collected on Source) (ಪ್ರಸ್ತುತ ಶೇಖಡಾ 2 ರಷ್ಟು) ಶುಲ್ಕವನ್ನು ಪಾವತಿಸುವುದು.

**ಲಗೇಜ್/ ಕ್ಲೋಕ್ ರೂಮ್ ದರಗಳು:-**

ಬಸ್ ನಿಲ್ದಾಣಗಳಲ್ಲಿ ಲಗೇಜ್/ಕ್ಲೋಕ್ ರೂಮ್‌ಗಳಿಗೆ ಪರವಾನಗಿ ಪಡೆದ ಪರವಾನಗಿದಾರರು ಈ ಕೆಳಕಂಡಂತೆ ನಿಬಂಧನೆಗೊಳಪಟ್ಟು ಗ್ರಾಹಕರಿಗೆ ದರಗಳನ್ನು ವಿಧಿಸಬೇಕಾಗಿರುತ್ತದೆ.

1. ಸಾರ್ವಜನಿಕ ಪ್ರಯಾಣಿಕರ ವಸ್ತುಗಳನ್ನು ಸುರಕ್ಷಿತವಾಗಿ ಲಗೇಜ್/ಕ್ಲೋಕ್ ರೂಂಗಳಲ್ಲಿ ಇಡಬಹುದಾಗಿರುತ್ತದೆ.
2. ಈ ಸಂಬಂಧ ಪರವಾನಗಿದಾರರು ರಸೀದಿಯನ್ನು ಪ್ರಯಾಣಿಕರಿಗೆ ನೀಡಬೇಕಿರುತ್ತದೆ.
3. ಸರಿಯಾಗಿ ಪ್ಯಾಕ್ ಮಾಡದ ವಸ್ತುಗಳು / ಲಾಕ್‌ಮಾಡದ ಟ್ರಂಕ್ / ಸೂಟ್ ಕೇಸ್‌ಗಳು, ಕೆಟ್ಟುಹೋಗುವ ವಸ್ತುಗಳಾದ ತರಕಾರಿ, ಮೀನು, ಮಾಂಸ, ಸ್ಫೋಟಕ ವಸ್ತುಗಳು, ಜ್ವಾಲೆ ಎಬ್ಬಿಸುವ ವಸ್ತುಗಳು, ನಿಷೇಧಿತ ವಸ್ತುಗಳು ಹಾಗೂ ಪ್ರಾಣಿಗಳಾದ ನಾಯಿ, ಮೊಲ ಇತ್ಯಾದಿಗಳನ್ನು ಕ್ಲೋಕ್ ರೂಂನಲ್ಲಿ ಪಡೆಯುವಂತಿಲ್ಲ, ಇದು ನಿಯಮ ಬಾಹಿರವಾಗಿರುತ್ತದೆ.
4. ಕ್ಲೋಕ್ ರೂಂ / ಲಗೇಜ್ ರೂಂನ ಪರವಾನಗಿದಾರರು ಅಗತ್ಯ ದಾಖಲಾತಿಯನ್ನು ನಿರ್ವಹಿಸಿ, ವಸ್ತುಗಳನ್ನು ಠೇವಣಿ ಇಡುವವರ ವಿವರಗಳನ್ನು ದಾಖಲಿಸುವುದು. ನಿಗಮದ ಅಧಿಕಾರಿಗಳು / ಬಸ್ ನಿಲ್ದಾಣದ ಅಧಿಕಾರಿಗಳು ಕೇಳಿದಲ್ಲಿ, ಸದರಿ ದಾಖಲಾತಿಯನ್ನು ತೋರಿಸತಕ್ಕದ್ದು.
5. ಬಸ್ ನಿಲ್ದಾಣಗಳಲ್ಲಿರುವ ಕ್ಲೋಕ್ ರೂಂ/ಲಗೇಜ್ ರೂಂನಲ್ಲಿ ಪರವಾನಗಿದಾರರು ಗ್ರಾಹಕರಿಂದ ಪಡೆಯಬೇಕಿರುವ ದರಗಳ ವಿವರಗಳು ಈ ಕೆಳಕಂಡಂತಿವೆ.

| ಕ್ರ. ಸಂ. | ವಿವರಗಳು | ವಿಧಿಸಬೇಕಾದ ದರ | |
|---|---|---|---|
| | | ಪ್ಯಾಕೇಜ್‌ಗೆ (ರೂ.) | ಲಾಕರ್ ವ್ಯವಸ್ಥೆಗೆ (ರೂ.) |
| 1 | 30 ಕೆ.ಜಿ.ವರೆಗೆ, 12 ಗಂಟೆಗಳ ಅವಧಿಗೆ (ಸೂಟ್‌ಕೇಸ್, ಟ್ರಂಕ್, ಹಾಸಿಗೆ ಇತ್ಯಾದಿ) | 5/- | 10/- |
| 2 | ಮುಂದಿನ 12 ಗಂಟೆಗಳು ಅಥವಾ ಭಾಗಶಃ ಅವಧಿಗೆ | 10/- | 15/- |
| 3 | ನಂತರದ ಪ್ರತಿ 12 ಗಂಟೆಗಳಿಗೆ | 15/- | 20/- |

6. ಮೂವತ್ತು (30) ಕೆ.ಜಿ.ವರೆಗಿನ ಪ್ಯಾಕೇಜ್‌ಗಳನ್ನು ಮಾತ್ರ ಸುರಕ್ಷಿತವಾಗಿಡಲು ಪರವಾನಗಿದಾರರು ಪಡೆಯಬೇಕು.
7. ಠೇವಣಿ ಇರಿಸಿರುವ ವಸ್ತುಗಳು 15 ದಿನಗಳ ಅವಧಿಯಲ್ಲಿ ವಾಪಸ್ ಪಡೆಯದಿದ್ದಲ್ಲಿ, ವಾರಸುದಾರರಿಲ್ಲದ ಸ್ವತ್ತು ಎಂದು ಪರಿಗಣಿಸಿ ಬಸ್ ನಿಲ್ದಾಣದ ಅಧಿಕಾರಿಯವರ / ಸಂಬಂಧಿಸಿದ ಘಟಕ ವ್ಯವಸ್ಥಾಪಕರ ವಶಕ್ಕೆ ನೀಡುವುದು.
8. ಪರವಾನಗಿದಾರರು ಠೇವಣಿ ಇರಿಸುವ ವಸ್ತುಗಳಿಗೆ ಬೆಂಕಿ ತಗುಲದಂತೆ ಅಗ್ನಿರಕ್ಷಕ ಉಪಕರಣಗಳ ವ್ಯವಸ್ಥೆ ಮಾಡಿಕೊಳ್ಳುವುದು.
9. ವಿಭಾಗೀಯ ಕೇಂದ್ರ ಸ್ಥಳಗಳಲ್ಲಿರುವ ಬಸ್ ನಿಲ್ದಾಣದಲ್ಲಿನ ಪರವಾನಗಿದಾರರು ಲಗೇಜ್ / ಕ್ಲೋಕ್ ರೂಂಗಳನ್ನು ದಿನಪೂರ್ತಿ, ಅಂದರೆ ಸದರಿ ಬಸ್ ನಿಲ್ದಾಣದಲ್ಲಿ ಮೊದಲ ಅನುಸೂಚಿ ಆಚರಣೆಯ 30 ನಿಮಿಷಗಳ ಮುಂಚಿತವಾಗಿ ಹಾಗೂ ಕೊನೆಯ ಅನುಸೂಚಿ ಆಚರಣೆಯ 30 ನಿಮಿಷದ ನಂತರದ ಸಮಯದವರೆಗೆ ತೆರೆದಿಡತಕ್ಕದ್ದು.
10. ಕ್ಲೋಕ್ ರೂಂನಲ್ಲಿ ಠೇವಣಿ ಇಡಬಹುದಾದ / ನಿಷೇಧಿತ ವಸ್ತುಗಳು, ದರಗಳು, ವಸ್ತುಗಳ ತೂಕ ಇತ್ಯಾದಿ ವಿವರಗಳನ್ನು, ಕ್ಲೋಕ್ ರೂಂ ಮುಂದುಗಡೆ ಸಾರ್ವಜನಿಕ ಪ್ರಯಾಣಿಕರು ವೀಕ್ಷಿಸಲು ಪ್ರದರ್ಶಿಸತಕ್ಕದ್ದು.
11. ಪ್ರಯಾಣಿಕರು ಠೇವಣಿ ಇಡುವ ವಸ್ತುಗಳಿಗೆ ಪರವಾನಗಿದಾರರು ಜವಾಬ್ದಾರರಾಗಿದ್ದು, ಠೇವಣಿ ಇಡುವ ವಸ್ತುಗಳು ಕಳವು / ಹಾನಿಗೊಂಡಲ್ಲಿ, ರೂ.1,000/- ರವರೆಗೆ ಪರಿಹಾರ ನೀಡುವುದಾಗಿ ಗ್ರಾಹಕರಿಗೆ ನೀಡುವ ರಸೀದಿಯಲ್ಲಿ ಮುದ್ರಿಸುವುದು ಹಾಗೂ ಅದರಂತೆ ಕ್ರಮ ವಹಿಸುವುದು.
12. ಪರವಾನಗಿದಾರರು ನಿಗದಿಪಡಿಸಿದ ದರಗಳನ್ನು ಮಾತ್ರ ಪಡೆದುಕೊಳ್ಳುವುದು. ಒಂದು ವೇಳೆ ನಿಗದಿತ ದರಕ್ಕಿಂತ ಹೆಚ್ಚಿನ ದರಗಳನ್ನು ಪರವಾನಗಿದಾರರು ಪಡೆಯುತ್ತಿರುವುದು ನಿಗಮದ ಗಮನಕ್ಕೆ ಬಂದಲ್ಲಿ, ಅಂತಹ ಪರವಾನಗಿದಾರರಿಗೆ ಮೊದಲ ಪ್ರಕರಣಕ್ಕೆ ರೂ.500/-, 2ನೇ ಪ್ರಕರಣಕ್ಕೆ ರೂ.1,000/- ಮತ್ತು 3ನೇ ಪ್ರಕರಣಕ್ಕೆ ರೂ.2,000/- ದಂಡ ವಿಧಿಸುವುದು. ಇದು ಪುನರಾವರ್ತನೆಗೊಂಡಲ್ಲಿ ರೂ.2,000/- ದಂಡ ವಿಧಿಸುವ ಅಥವಾ ಕರಾರನ್ನು ರದ್ದುಪಡಿಸುವ ಅಧಿಕಾರವನ್ನು ನಿಗಮವು ಹೊಂದಿರುತ್ತದೆ.

**ಕರಾರು ರದ್ಧತಿಯ ಷರತ್ತುಗಳು:-**

1. ಯಾವುದೇ ಕಾರಣ ನೀಡದೇ, 4 ತಿಂಗಳ ನೋಟೀಸ್ ನೀಡಿ ಮಳಿಗೆಯ ಪರವಾನಗಿಯನ್ನು ರದ್ದುಪಡಿಸಲು ನಿಗಮವು ಅಧಿಕಾರವನ್ನು ಹೊಂದಿರುತ್ತದೆ.
2. ಪರವಾನಗಿ ಪಡೆದ ಅವಧಿಯಿಂದ ಒಂದು ವರ್ಷದ ಒಳಗೆ ಪರವಾನಗಿದಾರರು, 6 ತಿಂಗಳ ಮಾಸಿಕ ಪರವಾನಗಿ ಶುಲ್ಕವನ್ನು ಮುಂಗಡವಾಗಿ ಪಾವತಿಸಿ, ತಮ್ಮ ಪರವಾನಗಿಯನ್ನು ರದ್ದುಪಡಿಸಿಕೊಳ್ಳಬಹುದು.
3. ಒಂದು ವರ್ಷದ ನಂತರ ಪರವಾನಗಿಯನ್ನು ರದ್ದುಪಡಿಸಿಕೊಳ್ಳಲು ಪರವಾನಗಿದಾರರು ಇಚ್ಛಿಸಿದಲ್ಲಿ, 4 ತಿಂಗಳ ಮಾಸಿಕ ಪರವಾನಗಿ ಶುಲ್ಕವನ್ನು ಮುಂಗಡವಾಗಿ ನಿಗಮಕ್ಕೆ ಪಾವತಿಸಿ, ತಮ್ಮ ಪರವಾನಗಿಯನ್ನು ರದ್ದುಪಡಿಸಿಕೊಳ್ಳಬಹುದು.
4. ಮಾಸಿಕ ಪರವಾನಗಿ ಶುಲ್ಕ, ಸರಕು & ಸೇವಾ ತೆರಿಗೆ ಮತ್ತು ಇತರೆ ಶುಲ್ಕಗಳನ್ನು ಸತತವಾಗಿ 2 ತಿಂಗಳು ಪಾವತಿಸದೇ ಬಾಕಿ ಉಳಿಸಿಕೊಂಡಲ್ಲಿ, ಅಂತಹ ಮಳಿಗೆಗಳ ಪರವಾನಗಿದಾರರ ಪರವಾನಗಿಯನ್ನು ನಿಗಮದ ವತಿಯಿಂದ ರದ್ದುಪಡಿಸಿ, ಪರವಾನಗಿದಾರರು ನಿಗಮದಲ್ಲಿಟ್ಟಿರುವ ಭದ್ರತಾ ಠೇವಣಿಯನ್ನು ಮುಟ್ಟುಗೋಲು ಹಾಕಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದು.
5. ಬಸ್ ನಿಲ್ದಾಣಗಳ ನವೀಕರಣ ಕಾಮಗಾರಿ / ಆವರಣವನ್ನು ಮೇಲ್ದರ್ಜೆಗೇರಿಸುವ / ದುರಸ್ಥಿ ಕಾರ್ಯಗಳನ್ನು ಕೈಗೆತ್ತಿಕೊಳ್ಳುವ ಸಮಯದಲ್ಲಿ, ನಿಗಮವು ಪರವಾನಗಿದಾರರಿಗೆ ಒಂದು ತಿಂಗಳು ಮುಂಗಡ ನೋಟೀಸ್‌ನ್ನು ಜಾರಿ ಮಾಡಿ ಪರವಾನಗಿಯನ್ನು ರದ್ದುಪಡಿಸಬಹುದು.

**ಬಿಡ್‌ದಾರರ / ಪರವಾನಗಿದಾರರ ಹೆಸರನ್ನು ಕಪ್ಪುಪಟ್ಟಿಗೆ ಸೇರಿಸುವ ಸಂದರ್ಭಗಳು:-**

1. ಟೆಂಡರ್‌ನಲ್ಲಿ ಅರ್ಹಗೊಳ್ಳುವ ಸಲುವಾಗಿ ಬಿಡ್‌ದಾರರು / ಪರವಾನಗಿದಾರರು ಸಲ್ಲಿಸಿರುವ ದಾಖಲೆಗಳು ಯಾವುದೇ ಹಂತದಲ್ಲಿ ನೈಜತೆಯಿಂದ ಕೂಡಿಲ್ಲದಿರುವುದು ಕಂಡುಬಂದಲ್ಲಿ, ಅಂತಹ ಬಿಡ್‌ದಾರರ ಆಯ್ಕೆ / ಪರವಾನಗಿದಾರರ ಪರವಾನಗಿಯನ್ನು ರದ್ದುಪಡಿಸಿ, ನಿಗಮದಲ್ಲಿಟ್ಟಿರುವ ಇ.ಎಂ.ಡಿ / ಭದ್ರತಾ ಠೇವಣಿಯನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು. ಅಂತಹ ಬಿಡ್‌ದಾರರನ್ನು / ಪರವಾನಗಿದಾರರನ್ನು ಮುಂದಿನ 02 ವರ್ಷಗಳ ಅವಧಿಗೆ ಕ.ರಾ.ರ.ಸಾ.ನಿಗಮದ ವತಿಯಿಂದ ಆಹ್ವಾನಿಸಲಾಗುವ ಯಾವುದೇ ಟೆಂಡರ್‌ನಲ್ಲಿ ಭಾಗವಹಿಸದಂತೆ ಕಪ್ಪುಪಟ್ಟಿಗೆ ಸೇರಿಸಲಾಗುವುದು.
2. ಬಿಡ್‌ದಾರರು ಬಿಡ್ ಹಿಂದಕ್ಕೆ ಪಡೆದಲ್ಲಿ ಅಥವಾ ತಿದ್ದುಪಡಿಗೊಳಿಸಿದಲ್ಲಿ ಅಥವಾ ಅಗೌರವ ತರುವಂತಹ ಸಂದರ್ಭಗಳಲ್ಲಿ, ಇ.ಎಂ.ಡಿ. ಮೊತ್ತ ಮುಟ್ಟುಗೋಲು ಹಾಕಿಕೊಂಡು, ಮುಂದಿನ 02 ವರ್ಷಗಳ ಅವಧಿಗೆ ಕ.ರಾ.ರ.ಸಾ. ನಿಗಮದ ವತಿಯಿಂದ ಆಹ್ವಾನಿಸಲಾಗುವ ಯಾವುದೇ ಟೆಂಡರ್‌ನಲ್ಲಿ ಭಾಗವಹಿಸದಂತೆ ಕಪ್ಪುಪಟ್ಟಿಗೆ ಸೇರಿಸಲಾಗುವುದು.
3. ಒಂದು ವರ್ಷದ ಅವಧಿಯೊಳಗೆ ಯಾವುದೇ ಕಾರಣದಿಂದ ಪರವಾನಗಿ ರದ್ದುಗೊಳ್ಳುವಂತಹ ಮತ್ತು ಒಂದು ವರ್ಷದ ಅವಧಿಯೊಳಗೆ ಪರವಾನಗಿಯನ್ನು ರದ್ದುಪಡಿಸುವಂತೆ ಮನವಿ ಸಲ್ಲಿಸುವ ಪರವಾನಗಿದಾರರನ್ನು, ಮನವಿ ಸಲ್ಲಿಸಿದ ದಿನಾಂಕದಿಂದ ಮುಂದಿನ 02 ವರ್ಷಗಳ ಅವಧಿಗೆ ಕ.ರಾ.ರ.ಸಾ. ನಿಗಮದ ವತಿಯಿಂದ ಆಹ್ವಾನಿಸಲಾಗುವ ಯಾವುದೇ ಟೆಂಡರ್‌ನಲ್ಲಿ ಭಾಗವಹಿಸದಂತೆ ಕಪ್ಪುಪಟ್ಟಿಗೆ ಸೇರಿಸಲಾಗುವುದು.
4. ಪರವಾನಗಿ ಅವಧಿಯ ಯಾವುದೇ ಸಮಯದಲ್ಲಿ ಮಳಿಗೆಯನ್ನು ಉಪ-ಪರವಾನಗಿಗೆ ನೀಡಿರುವುದು ಕಂಡು ಬಂದಲ್ಲಿ, ಪರವಾನಗಿಯನ್ನು ತಕ್ಷಣದಿಂದಲೇ ಜಾರಿಗೆ ಬರುವಂತೆ ರದ್ದುಪಡಿಸಲಾಗುವುದು ಹಾಗೂ ಭದ್ರತಾ ಠೇವಣಿ ಮೊತ್ತವನ್ನು ಮುಟ್ಟುಗೋಲು ಹಾಕಿಕೊಂಡು, ಕರಾರು ರದ್ದುಪಡಿಸಿದ ದಿನಾಂಕದಿಂದ ಮುಂದಿನ 02 ವರ್ಷಗಳ ಅವಧಿಗೆ ಕ.ರಾ.ರ.ಸಾ.ನಿಗಮದ ವತಿಯಿಂದ ಆಹ್ವಾನಿಸಲಾಗುವ ಯಾವುದೇ ಟೆಂಡರ್‌ನಲ್ಲಿ ಭಾಗವಹಿಸದಂತೆ ಸದರಿ ಪರವಾನಗಿದಾರರನ್ನು ಕಪ್ಪುಪಟ್ಟಿಗೆ ಸೇರಿಸಲಾಗುವುದು.
5. ಕಪ್ಪು ಪಟ್ಟಿಗೆ ಸೇರಿದ ಪರವಾನಗಿದಾರರು ನಿಗಮದ ಯಾವುದೇ ಟೆಂಡರ್ / ಸಂಧಾನದಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ. ಅಂತಹ ಬಿಡ್‌ದಾರರು / ಅರ್ಜಿದಾರರು ಒಂದು ವೇಳೆ ಟೆಂಡರ್ / ಸಂಧಾನದಲ್ಲಿ ಭಾಗವಹಿಸಿದಲ್ಲಿ, ಯಾವುದೇ ಹಂತದಲ್ಲಿ ಅವರ ಇ.ಎಂ.ಡಿ. ಮೊತ್ತವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

**<u>ಇತರೆ ಷರತ್ತು ನಿಯಮಗಳು :-</u>**

1. ಟೆಂಡರ್‌ನಲ್ಲಿ ಆಯ್ಕೆಯಾಗದ ಬಿಡ್‌ದಾರರುಗಳ (H1 & H2 ಹೊರತುಪಡಿಸಿ) ಇ.ಎಂ.ಡಿ. ಮೊತ್ತವನ್ನು ಟೆಂಡರ್ ಅಂತಿಮಗೊಂಡ ನಂತರ ಹಿಂದಿರುಗಿಸಲಾಗುವುದು. H2 ಬಿಡ್‌ದಾರರ ಇ.ಎಂ.ಡಿ. ಮೊತ್ತವನ್ನು H1 ಬಿಡ್‌ದಾರರು ಕರಾರು ಒಪ್ಪಂದ ಮಾಡಿಕೊಂಡ ನಂತರ ಹಿಂದಿರುಗಿಸಲಾಗುವುದು.
2. ಟೆಂಡರ್‌ನಲ್ಲಿ ಅತಿ ಹೆಚ್ಚು ಮೊತ್ತವನ್ನು ಬಿಡ್‌ಮಾಡಿ ಪರವಾನಗಿದಾರರಾಗಿ ಆಯ್ಕೆಯಾದ ಬಿಡ್‌ದಾರರು ನಿಗದಿತ ದಿನಾಂಕದೊಳಗಾಗಿ ಭದ್ರತಾ ಠೇವಣಿ ಹಾಗೂ ಮುಂಗಡ ಮಾಸಿಕ ಪರವಾನಗಿ ಶುಲ್ಕಗಳನ್ನು ಪಾವತಿಸಲು ವಿಫಲರಾದಲ್ಲಿ, ಅಂತಹ ಬಿಡ್‌ದಾರರ ಇ.ಎಂ.ಡಿ. ಮೊತ್ತವನ್ನು ನಿಗಮಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.
3. ಒಂದು ವೇಳೆ ಆಯ್ಕೆಯಾದ ಬಿಡ್‌ದಾರರು ಭದ್ರತಾ ಠೇವಣಿ ಮತ್ತು ಮುಂಗಡ ಮಾಸಿಕ ಪರವಾನಗಿ ಶುಲ್ಕಗಳನ್ನು ಪಾವತಿಸಿ, ನಿಗದಿತ ದಿನಾಂಕದೊಳಗಾಗಿ ಕರಾರು ಒಪ್ಪಂದವನ್ನು ಮಾಡಿಕೊಳ್ಳಲು ವಿಫಲರಾದಲ್ಲಿ, ಅಂತಹ ಬಿಡ್‌ದಾರರ ಭದ್ರತಾ ಠೇವಣಿ ಹಾಗೂ ಮುಂಗಡ ಮಾಸಿಕ ಪರವಾನಗಿ ಶುಲ್ಕಗಳನ್ನು ನಿಗಮಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.
4. H2 ಬಿಡ್‌ದಾರರನ್ನು ಪರವಾನಗಿದಾರರಾಗಿ ಆಯ್ಕೆ ಮಾಡಿದಾಗ, ಅವರು ಕರಾರು ಒಪ್ಪಂದ ಮಾಡಿಕೊಳ್ಳಲು ವಿಫಲರಾದಲ್ಲಿ, ಅವರ ಇ.ಎಂ.ಡಿ. ಮೊತ್ತವನ್ನು ಸಹ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.
5. ಪರವಾನಗಿ ಪಡೆದ ಪರವಾನಗಿದಾರರೇ ಮಳಿಗೆಯನ್ನು ನಡೆಸುವುದು. ಮಳಿಗೆಗಳನ್ನು ಉಪ ಪರವಾನಗಿಗೆ ನೀಡಲು ಅವಕಾಶವಿರುವುದಿಲ್ಲ.

6. ಮುಷ್ಕರ / ಬಂದ್ ಅವಧಿಯಲ್ಲಿ ಮಾಸಿಕ ಪರವಾನಗಿ ಶುಲ್ಕದಲ್ಲಿ ರಿಯಾಯಿತಿಗೆ ಅವಕಾಶವಿರುವುದಿಲ್ಲ.
7. ಪರವಾನಗಿದಾರರು ತಮ್ಮ ವ್ಯವಹಾರಕ್ಕೆ ಸಂಬಂಧಿಸಿದ ಜಿ.ಎಸ್.ಟಿ., ಆದಾಯ ತೆರಿಗೆ, ಭವಿಷ್ಯ ನಿಧಿ, ಇ.ಎಸ್.ಐ, ಸೇಲ್ಸ್ ಟ್ಯಾಕ್ಸ್ ಕ್ಲಿಯರೆನ್ಸ್ ಪ್ರಮಾಣ ಪತ್ರ, ಟ್ರೇಡ್ ಲೈಸೆನ್ಸ್, ಲೇಬರ್ ಲೈಸೆನ್ಸ್, ಫುಡ್ ಲೈಸೆನ್ಸ್ ಇತ್ಯಾದಿ ಪ್ರಮಾಣಪತ್ರಗಳನ್ನು ಹೊಂದಿರಬೇಕು. ನಿಗಮವು & ಸರ್ಕಾರದ ಇತರ ಇಲಾಖೆಯವರು ದಾಖಲೆಗಳನ್ನು ಹಾಜರುಪಡಿಸಲು ಕೋರಿದ್ದಲ್ಲಿ ಸಂಬಂಧಿಸಿದ ದಾಖಲೆಗಳನ್ನು ಕೂಡಲೇ ಸಲ್ಲಿಸಬೇಕಾಗಿರುತ್ತದೆ.
8. ಸ್ಥಳೀಯ ಇಲಾಖೆ / ಪ್ರಾಧಿಕಾರಗಳು ವಿಧಿಸುವ ತೆರಿಗೆಯನ್ನು ಪರವಾನಗಿದಾರರೇ ಸಂಬಂಧಿಸಿದ ಇಲಾಖೆ / ಪ್ರಾಧಿಕಾರಗಳಿಗೆ ಸಂದಾಯ ಮಾಡಲು ಜವಾಬ್ದಾರರಾಗಿರುತ್ತಾರೆ.
9. ನಿಗಮದ ವ್ಯವಹಾರಕ್ಕೆ ವ್ಯತಿರಿಕ್ತ ಪರಿಣಾಮ ಉಂಟುಮಾಡುವ ವ್ಯವಹಾರವನ್ನು, ನಿಗಮದ ವತಿಯಿಂದ ನಿಷೇದಿಸಲ್ಪಟ್ಟ, ಮುಂದೆ ನಿಷೇಧಿಸಲ್ಪಡುವ ವಸ್ತುಗಳು ಮತ್ತು ಕಾನೂನುಬಾಹಿರ ವಸ್ತುಗಳ ಮಾರಾಟವನ್ನು ಮಳಿಗೆಗಳಲ್ಲಿ ನಿಷೇಧಿಸಲಾಗಿದೆ. ಈ ರೀತಿಯ ವಸ್ತುಗಳ ಮಾರಾಟ ಕಂಡುಬಂದಲ್ಲಿ, ಪರವಾನಗಿಯನ್ನು ರದ್ದುಪಡಿಸಿ, ಕಾನೂನು ಕ್ರಮ ಕೈಗೊಳ್ಳಲಾಗುವುದು.
10. ಆಯ್ಕೆಗೊಂಡ ಪರವಾನಗಿದಾರರು ನಿಗಮದ ವಾಣಿಜ್ಯ ಮಳಿಗೆಗಳಲ್ಲಿ ಅಗ್ನಿ ರಕ್ಷಕ / ಶಾಮಕ ಉಪಕರಣಗಳನ್ನು ಕಡ್ಡಾಯವಾಗಿ ಅಳವಡಿಸುವುದು. ಅಗ್ನಿ ಅವಘಡ ಹಾಗೂ ಇತರೆ ನೈಸರ್ಗಿಕ ದುರಂತಗಳಿಗೆ ನಿಗಮವು ಜವಾಬ್ದಾರಿಯಾಗಿರುವುದಿಲ್ಲ.
11. ಲಾಡ್ಜಿಂಗ್ & ಡಾರ್ಮಿಟರಿ, ಉಪಹಾರ ಗೃಹ, ಬೇಕರಿ ಮಳಿಗೆಗಳು, ಚಾಟ್ಸ್ ಸೆಂಟರ್ ಇವುಗಳನ್ನು ಹೊರತುಪಡಿಸಿ, ಇತರೆ ಮಳಿಗೆಗಳಲ್ಲಿ ಎಲ್ಲಾ ಮಾದರಿಯ ಸ್ಟೌವ್ / ಗ್ಯಾಸ್ ಬಳಕೆಯನ್ನು ನಿಷೇಧಿಸಲಾಗಿದೆ.
12. ಮಳಿಗೆಗಳಲ್ಲಿ ಟೂರಿಸ್ಟ್ ಟ್ರಾವಲ್, ಮಧ್ಯಪಾನ, ಮಾಂಸ ಮತ್ತು ಇತರೆ ಕಾನೂನು ಬಾಹಿರ ಚಟುವಟಿಕೆಗಳಿರುವ ವ್ಯಾಪಾರ, ಮಾದಕ ವಸ್ತುಗಳು, ವಾಯು ಮಾಲಿನ್ಯ ಉಂಟುಮಾಡುವ ಹಾಗೂ ಸಂಸ್ಥೆಯ ಹಿತಕ್ಕೆ ಧಕ್ಕೆಯಾಗುವಂತಹ ವ್ಯಾಪಾರಗಳನ್ನು ಹೊರತು ಪಡಿಸಿದೆ.
13. ಡಾರ್ಮಿಟರಿ ಮತ್ತು ಲಾಡ್ಜಿಂಗ್ ವ್ಯವಹಾರ ನಡೆಸಲು ಆಯ್ಕೆಯಾಗುವ ಪರವಾನಿಗೆದಾರರೇ ಮೂಲಭೂತ ಸೌಕರ್ಯಗಳನ್ನು ನಿರ್ಮಿಸಿಕೊಳ್ಳಬಹುದಾಗಿರುತ್ತದೆ ಹಾಗೂ ಕಟ್ಟಡದ ಮೂಲ ಸ್ವರೂಪದಲ್ಲಿ ಯಾವುದೇ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
14. ಬಸ್ ನಿಲ್ದಾಣದಲ್ಲಿರುವ ವಾಣಿಜ್ಯ ಮಳಿಗೆಗಳಲ್ಲಿ ಸಿಗರೇಟು/ಗುಟ್ಕಾ ಮತ್ತು ಇನ್ನಿತರೆ ತಂಬಾಕು ಪದಾರ್ಥಗಳ ಮಾರಾಟವನ್ನು ಕಡ್ಡಾಯವಾಗಿ ನಿಷೇದಿಸಿದೆ.
15. ಉಪಹಾರ ಗೃಹದಲ್ಲಿ ಹೊಟ್ಟಾಗಲಿ, ಸೌದೆಯ ಒಲೆಯನ್ನು ಉರಿಸುವಂತಿರುವುದಿಲ್ಲ, ಗ್ಯಾಸ್ ಮತ್ತು ವಿದ್ಯುತ್‌ನ್ನು ಮಾತ್ರ ಬಳಸುವುದು.
16. ಉಪಹಾರ ಗೃಹ/ವಾಣಿಜ್ಯ ಮಳಿಗೆಗಳಲ್ಲಿ ನೇಮಿಸಿಕೊಂಡಿರುವ ಕಾರ್ಮಿಕರಿಗೆ ಕಾರ್ಮಿಕ ಇಲಾಖೆಯು ನಿಗದಿಪಡಿಸಿರುವ ಇಎಸ್‌ಐ/ಪಿ.ಎಫ್ ಹಾಗೂ ಇನ್ನಿತರೆ ಸೌಲಭ್ಯವನ್ನು ಒದಗಿಸುವುದು, ಸಂಬಂಧಿಸದಿದ್ದಲ್ಲಿ, ಸ್ವಯಂ ಘೋಷಣಾ ಪತ್ರವನ್ನು ಸಲ್ಲಿಸುವುದು. ತಪ್ಪಿದ್ದಲ್ಲಿ ಭದ್ರತಾ ಠೇವಣಿ ಮೊತ್ತವನ್ನು ಮುಟ್ಟುಗೋಲು ಹಾಕಿಕೊಂಡು ಕರಾರು ಒಪ್ಪಂದ ರದ್ದುಪಡಿಸಲಾಗುವುದು.
17. ಪರವಾನಗಿದಾರರು ಬಾಲ ಕಾರ್ಮಿಕರನ್ನು ನೇಮಿಸಿಕೊಳ್ಳುವಂತಿಲ್ಲ.
18. ಉಪಹಾರ ಗೃಹವನ್ನು ಹೊರತುಪಡಿಸಿ, ಉಳಿದ ವಾಣಿಜ್ಯ ಮಳಿಗೆಗಳಲ್ಲಿ ಗ್ಯಾಸ್‌ನ್ನಾಗಲಿ, ಹೊಟ್ಟಾಗಲಿ ಅಥವಾ ವಿದ್ಯುತ್ ಬಳಿಸಿ ಒಲೆಯನ್ನು ಉರಿಸುವಂತಿಲ್ಲ.
19. ಕರ್ನಾಟಕ ರಾಜ್ಯ ಸರ್ಕಾರವು ಜಾರಿ ಮಾಡಿರುವ 1957 ರ ಗ್ರಾಹಕರ ಅಧಿನಿಯಮ-6/23(1)ರ ಅನ್ವಯ ಗ್ರಾಹಕರಿಗೆ ಮಳಿಗೆಯಲ್ಲಿ ವ್ಯಾಪಾರ ಮಾಡುವ ಸಾಮಾಗ್ರಿಗಳ ಪೊಟ್ಟಣದ ಮೇಲೆ ಮುದ್ರಿಸಿರುವ ಗರಿಷ್ಟ ಚಿಲ್ಲರೆ ಬೆಲೆಗಿಂತ ಹೆಚ್ಚಿಗೆ ಬೆಲೆ ಪಡೆಯುವುದಾಗಲಿ ಅಥವಾ ಬೆಲೆಯನ್ನು ಅಳಿಸುವುದು/ತಿದ್ದುವುದು/ಇತ್ಯಾದಿಗಳನ್ನು ಮಾಡಿದ ಬಗ್ಗೆ ದೂರುಗಳು ಬಂದಲ್ಲಿ / ನಿಗಮದ ಹೆಸರಿಗೆ ಧಕ್ಕೆ ಬರುವಂತಹ ಸನ್ನಿವೇಶಗಳಲ್ಲಿ ಪರವಾನಗಿದಾರರ ಪರವಾನಗಿಯನ್ನು ರದ್ದು ಪಡಿಸಲಾಗುವುದು.
20. ಟೆಂಡರ್/ಸಂಧಾನ ಪ್ರಕಟಣೆಯಲ್ಲಿ ಆಯ್ಕೆಯಾದವರು ತಮ್ಮ ಸ್ವಂತ ಖರ್ಚಿನಲ್ಲಿ ಕರ್ನಾಟಕ ಸ್ಟಾಂಪ್ ಆಕ್ಟ್‌ನಂತೆ ಸ್ಟಾಂಪ್ ಶುಲ್ಕವನ್ನು ಭರಿಸಿ ಕರಾರು ಒಪ್ಪಂದ ಮಾಡಿಕೊಳ್ಳಬೇಕಾಗಿರುತ್ತದೆ.
21. ಕರಾರು ಒಪ್ಪಂದ ಮಾಡಿಕೊಳ್ಳುವ ಸಮಯದಲ್ಲಿ ಸೇಲ್ಸ್ ಟ್ಯಾಕ್ಸ್ ಕ್ಲಿಯರೆನ್ಸ್ ಸರ್ಟಿಫಿಕೇಟ್ ನೀಡುವುದು.
22. ಟೆಂಡರ್‌ನಲ್ಲಿ ಭಾಗವಹಿಸುವ ಅರ್ಜಿದಾರರು/ಬಿಡ್‌ದಾರರು ನಿಗಮಕ್ಕೆ ಯಾವುದೇ ಷರತ್ತುಗಳನ್ನು ಹಾಕುವಂತಿಲ್ಲ, ನಿಗಮವು ಕಾಲಕಾಲಕ್ಕೆ ವಿಧಿಸುವ ಎಲ್ಲಾ ಷರತ್ತುಗಳನ್ನು ಒಪ್ಪಿಕೊಳ್ಳತಕ್ಕದಾಗಿರುತ್ತದೆ.
23. ಪರವಾನಗಿದಾರರು / ಬಿಡ್ಡದಾರರು ಕಡ್ಡಾಯವಾಗಿ ಪಾನ್‌ಕಾರ್ಡ್ ಹೊಂದಿರಬೇಕಾಗಿರುತ್ತದೆ.
24. ಯಾವುದೇ ಸಮಯದಲ್ಲಿ ಹೆಚ್ಚಿನ ಷರತ್ತು ಮತ್ತು ನಿಬಂಧನೆಗಳನ್ನು ಕರಾರಿನಲ್ಲಿ ಸೇರಿಸಲು ಮತ್ತು ಮಾರ್ಪಡಿಸಲು ನಿಗಮವು ಅಧಿಕಾರ ಹೊಂದಿರುತ್ತದೆ.
25. ಪರವಾನಗಿದಾರರು ಮತ್ತು ನಿಗಮದ ಮಧ್ಯೆ ಯಾವುದೇ ವ್ಯಾಜ್ಯ / ತಕರಾರು ಉಂಟಾದಲ್ಲಿ, ನಿಗಮದ ವ್ಯವಸ್ಥಾಪಕ ನಿರ್ದೇಶಕರು ಮಧ್ಯಸ್ಥಿಕೆದಾರರಾಗಿರುತ್ತಾರೆ. ಸದರಿಯವರ ತೀರ್ಮಾನವೇ ಅಂತಿಮವಾಗಿರುತ್ತದೆ.
26. ಕರಾರಿನಿಂದ ಉದ್ಭವಿಸಬಹುದಾದಂತಹ ಯಾವುದೇ ವ್ಯಾಜ್ಯ ಅಥವಾ ವಿವಾದ ಕ್ಷೇಮುಗಳನ್ನು ಪರಿಹರಿಸಿಕೊಳ್ಳುವುದಕ್ಕಾಗಿ ಉಭಯ ಪಕ್ಷದವರು ಅಂತಹ ವಿವಾದವನ್ನು ಕರ್ನಾಟಕ Arbitration ಕೇಂದ್ರ (ದೇಶಿಯ, ಅಂತರ್‌ದೇಶಿಯ)ನಿಯಮಗಳು, 2012ರಡಿಯಲ್ಲಿ ನೇಮಕಗೊಂಡ ಒಬ್ಬರು ಅಥವಾ ಹಲವು ಪಂಚಾಯತ್‌ದಾರರ ಮೂಲಕ ಪರಿಹರಿಸಲು ಒಪ್ಪಿಕೊಳ್ಳಲಾಗಿದೆ.
27. ಯಾವುದೇ ಕಾರಣ ನೀಡದೇ ಟೆಂಡರನ್ನು ಪುರಸ್ಕರಿಸುವ / ತಿರಸ್ಕರಿಸುವ ಅಧಿಕಾರವನ್ನು ನಿಗಮವು ಹೊಂದಿರುತ್ತದೆ.
28. ನಿಗಮದಿಂದ ಕರೆಯಲಾಗುವ ಯಾವುದೇ ಟೆಂಡರ್ / ಸಂಧಾನವನ್ನು ಯಾವುದೇ ಸಮಯದಲ್ಲಿ ಯಾವುದೇ ಕಾರಣವನ್ನು ನೀಡದೇ ರದ್ದುಪಡಿಸುವ ಅಧಿಕಾರವನ್ನು ನಿಗಮವು ಕಾಯ್ದಿರಿಸಿಕೊಂಡಿರುತ್ತದೆ.
29. ಇ-ಟೆಂಡರ್ ಪ್ರಕಟಣೆಯನ್ನು ಯಾವುದೇ ಕಾರಣ ನೀಡದೆ ಮುಂದೂಡುವ & ತಿರಸ್ಕರಿಸುವ ಹಾಗೂ ರದ್ದು ಮಾಡುವ ಹಕ್ಕನ್ನು ನಿಗಮವು ಕಾಯ್ದರಿಸಿಕೊಂಡಿದೆ.
30. ಇ.ಎಸ್.ಐ ಕಾಯ್ದೆಯ ವ್ಯಾಪ್ತಿಯಲ್ಲಿ ಬರುವ ವಾಣಿಜ್ಯ ಮಳಿಗೆಗಳ / ಸ್ಥಳಗಳ ಪರವಾನಗಿದಾರರುಗಳು ಇ.ಎಸ್.ಐ ಕೋಡ್‌ನ್ನು ಹೊಂದಿರಬೇಕು ಮತ್ತು ಅವರುಗಳ ವ್ಯಾಪ್ತಿಯಲ್ಲಿ ಬರುವ ನೌಕರರನ್ನು ಇ.ಎಸ್.ಐ ವ್ಯಾಪ್ತಿಯಲ್ಲಿ ತರಬೇಕು ಮತ್ತು ಇ.ಎಸ್.ಐ ಕಾರ್ಡ್‌ನ್ನು ಕೊಡಿಸಬೇಕು.
31. ಇ.ಎಸ್.ಐ ಕಾಯ್ದೆಯ ವ್ಯಾಪ್ತಿಯಲ್ಲಿ ಬರುವ ವಾಣಿಜ್ಯ ಮಳಿಗೆಗಳ / ಸ್ಥಳಗಳ ಪರವಾನಗಿದಾರರುಗಳು ನಿಗದಿತ ವಂತಿಕೆಯನ್ನು ಆನ್‌ಲೈನ್‌ನಲ್ಲಿ ಸಲ್ಲಿಸಬೇಕು ಮತ್ತು ಇ.ಎಸ್.ಐ ಸೌಲಭ್ಯಗಳನ್ನು ನೌಕರರಿಗೆ ಮತ್ತು ಅವರ ಅವಲಂಬಿತರಿಗೆ ಸಿಗುವಂತೆ ಸಹಾಯ ಮಾಡಬೇಕು.
32. ವಾಣಿಜ್ಯ ಮಳಿಗೆಗಳಿಗೆ ಸಂಬಂಧಿಸಿದ ವ್ಯವಹಾರಗಳನ್ನು ಪ್ರಾರಂಭಿಸಲು ಕಾನೂನು ರೀತಿಯಲ್ಲಿ ಆಗತ್ಯವಿರುವ ಪರವಾನಿಗೆಯನ್ನು ಸಂಬಂಧಿಸಿದ ಪ್ರಾಧಿಕಾರಗಳಿಂದ ಪರವಾನಗಿದಾರರು ಪಡೆದುಕೊಳ್ಳತಕ್ಕದ್ದು.
33. ಕಟ್ಟಿದ/ತೆರೆದ ಸ್ಥಳದ ಮಳಿಗೆಗಳಿಗೆ ಆಯ್ಕೆಯಾಗಿರುವ ಪರವಾನಿಗೆದಾರರು ಪರವಾನಿಗೆ ಅವಧಿಯು ಮುಕ್ತಾಯದ ನಂತರ ಅಥವಾ ಕರಾರು ರದ್ದತಿಯ ನಂತರ ತಾವು ತಾತ್ಕಾಲಿಕವಾಗಿ ನಿರ್ಮಿಸಿಕೊಂಡಿರುವ ಮಳಿಗೆ(ಶೆಡ್)/Structure/ಹೋರ್ಡಿಂಗ್ಸ್ ಇತರೆ ಮಾರ್ಪಾಡುಗಳನ್ನು ತೆರವುಗೊಳಿಸಿ ಖಾಲಿ ಸ್ಥಳವನ್ನು ನಿಗಮದ ವಶಕ್ಕೆ ಒಪ್ಪಿಸುವುದು, ಸಂಪೂರ್ಣವಾಗಿ ತೆರೆದ ಸ್ಥಳದಲ್ಲಿ ನಿರ್ಮಿಸಿಕೊಂಡಿರುವ ಶೆಡ್ (ಮಳಿಗೆ)/Structure ತೆರವುಗೊಳಿಸದಿದ್ದಲ್ಲಿ ಭದ್ರತಾ ಠೇವಣಿ ಮುಟ್ಟುಗೋಲು ಹಾಕಿಕೊಂಡು ಶೆಡ್ (ಮಳಿಗೆ)/Structure ನ್ನು ನಿಗಮದ ವಶಕ್ಕೆ ಪಡೆದುಕೊಳ್ಳಲಾಗುವುದು.

**ವಿಶೇಷ ಸೂಚನೆ : –**

1. ಮಳಿಗೆಗೆ ನಿಗದಿಪಡಿಸಿದ ಇ.ಎಂ.ಡಿ ಮೊತ್ತದಲ್ಲಿ ರೂ.500–00 ಗಳನ್ನು ಮಾತ್ರ ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಪಾವತಿಸುವುದು ಉಳಿದ ಇ.ಎಂ.ಡಿ ಮೊತ್ತವನ್ನು ಡಿ.ಡಿ.ಮೂಲಕ ಪಡೆದು ಸದರಿ ಡಿ.ಡಿ ಯ ಹಿಂಭಾಗದಲ್ಲಿ ತಮ್ಮ ಹೆಸರು, ಬಿಡ್ ಮಾಡುವ ಮಳಿಗೆಯ ಹೆಸರು & ಮಳಿಗೆಯ ಸಂಖ್ಯೆಯನ್ನು ನಮೂದಿಸಿ, ಟೆಂಡರ್ ತೆರೆಯುವ ಕೊನೆಯ ದಿನಾಂಕದೊಳಗಾಗಿ 22.10.2020 ರ ಬೆಳಗ್ಗೆ 10.45 ಗಂಟೆಯ ಒಳಗೆ) ವಿಭಾಗೀಯ ಕಛೇರಿ ಸಂಚಾರ ಶಾಖೆಯಲ್ಲಿರುವ ಬಾಕ್ಸ್‌ನಲ್ಲಿ ಹಾಕುವುದು. ಸದರಿ ಡಿ.ಡಿಯ ಜರಾಕ್ಸ್ ಪ್ರತಿಯನ್ನು ಇತರೆ ದಾಖಲಾತಿಗಳೊಂದಿಗೆ ಅಪ್‌ಲೋಡ್ ಮಾಡುವುದು.
2. ಇ–ಪ್ರೊಕ್ಯೂರ್‌ಮೆಂಟ್ ಭಾಗವಹಿಸುವ ಬಿಡ್‌ದಾರರು ಅಫ್‌ಲೋಡ್ ಮಾಡಿರುವ ಎಲ್ಲಾ ದಾಖಲಾತಿಗಳ ಜರಾಕ್ಸ್ ಪ್ರತಿಗಳನ್ನು ಇ.ಎಂ.ಡಿ ಮತ್ತು ಅರ್ಜಿ ಶುಲ್ಕದ ಡಿ.ಡಿ ಜೊತೆಯಲ್ಲಿ ಟೆಂಡರ್ ತೆರೆಯುವ ಕೊನೆಯ ದಿನಾಂಕದೊಳಗಾಗಿ (22.10.2020 ರ ಬೆಳಗ್ಗೆ 10.45 ಗಂಟೆಯ ಒಳಗೆ) ವಿಭಾಗೀಯ ಕಛೇರಿ ಸಂಚಾರ ಶಾಖೆಯಲ್ಲಿರುವ ಬಾಕ್ಸ್‌ನಲ್ಲಿ ಹಾಕುವುದು.
3. ಮಳಿಗೆಗೆ ನಿಗದಿಪಡಿಸಿದ ಅರ್ಜಿ ಶುಲ್ಕದ ಮೊತ್ತವನ್ನು ಡಿ.ಡಿ.ಮೂಲಕ ಪಡೆದು ಸದರಿ ಡಿ.ಡಿ ಯ ಹಿಂಭಾಗದಲ್ಲಿ ತಮ್ಮ ಹೆಸರು, ಬಿಡ್ ಮಾಡುವ ಮಳಿಗೆಯ ಹೆಸರು & ಮಳಿಗೆಯ ಸಂಖ್ಯೆಯನ್ನು ನಮೂದಿಸಿ ಟೆಂಡರ್ ತೆರೆಯುವ ಕೊನೆಯ ದಿನಾಂಕದೊಳಗಾಗಿ ವಿಭಾಗೀಯ ಕಛೇರಿ ಸಂಚಾರ ಶಾಖೆಯಲ್ಲಿರುವ ಬಾಕ್ಸ್‌ನಲ್ಲಿ ಹಾಕುವುದು. ಸದರಿ ಡಿ.ಡಿಯ ಜರಾಕ್ಸ್ ಪ್ರತಿಯನ್ನು ಇತರೆ ದಾಖಲಾತಿಗಳೊಂದಿಗೆ ಅಪ್‌ಲೋಡ್ ಮಾಡುವುದು.
4. ಪೋರ್ಟಲ್‌ನಲ್ಲಿ ಅಪಲೋಡ್ ಮಾಡಿದ ಮಳಿಗೆಗೆ ಸಂಬಂಧಿಸಿದ ವಿವರಗಳನ್ನು ಸಂಪೂರ್ಣವಾಗಿ ಓದಿ ಅರ್ಥೈಸಿಕೊಂಡಿರುವ ಬಗ್ಗೆ ಹಾಗೂ ಎಲ್ಲಾ ಷರತ್ತು ಮತ್ತು ನಿಬಂಧನೆಗಳನ್ನು ಒಪ್ಪಿರುವ ಬಗ್ಗೆ ಷರತ್ತು ಮತ್ತು ನಿಭಂಧನೆಗಳ ಪ್ರತಿಯಲ್ಲಿ, ಟೆಂಡರ್‌ದಾರರು/ಅರ್ಜಿದಾರರು/ಬಿಡ್‌ದಾರರು ಸಹಿ ಮಾಡಿ, ಇ–ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವುದು.
5. ಪಾನ್ ಕಾರ್ಡ್ ಸಲ್ಲಿಸುವುದು ಕಡ್ಡಾಯವಾಗಿದ್ದು ಹಾಗೂ ವಿಳಾಸ ದೃಢೀಕರಣ ಪತ್ರಕ್ಕೆ ವೋಟರ್ ಐಡಿ, ಆಧಾರ ಕಾರ್ಡ್, ಬ್ಯಾಂಕ್ ಪಾಸ್ ಬುಕ್, ಪಾಸಪೋರ್ಟ & ಇತರೆ ದಾಖಲಾತಿಗಳನ್ನು ಇ–ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವುದು.
6. ಎಲ್ಲಾ ಬಿಡ್‌ದಾರರು ಕಪ್ಪುಪಟ್ಟಿಗೆ ಸೇರಿಲ್ಲದಿರುವ ಬಗ್ಗೆ ನಾವು ಅಪ್‌ಲೋಡ್ ಮಾಡಿರುವ ಸ್ವಯಂ ದೃಢೀಕರಣ ಪತ್ರದ ನಮೂನೆಯಲ್ಲಿ ಭರ್ತಿ ಮಾಡಿ ಪೂರ್ಣ ಹೆಸರು, ವಿಳಾಸದೊಂದಿಗೆ ಸಹಿ ಮಾಡಿ ಇ–ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವುದು.
7. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಅಂಗವಿಕಲ/ವಿಕಲಚೇತನ ಮೀಸಲಾತಿ ಪಡೆಯುವ ಬಿಡ್‌ದಾರರು ನಾವು ಅಪ್‌ಲೋಡ್ ಮಾಡಿರುವ ಸ್ವಯಂ ದೃಢೀಕರಣ ಪತ್ರದ ನಮೂನೆಯಲ್ಲಿ ಭರ್ತಿ ಮಾಡಿ ಪೂರ್ಣ ಹೆಸರು, ವಿಳಾಸದೊಂದಿಗೆ ಸಹಿ ಮಾಡಿ ಇ–ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವುದು.
8. ಬಿಡ್‌ದಾರರು ಬಿಡ್‌ನಲ್ಲಿ ಸಲ್ಲಿಸಿರುವ ದಾಖಲಾತಿಗಳ ಬಗ್ಗೆ ಅಳವಡಿಸಿರುವ ಚೆಕ್‌ಲಿಸ್ಟ್‌ನಲ್ಲಿ ದಾಖಲಾತಿಗಳನ್ನು ಸಲ್ಲಿಸಿದ ಬಗ್ಗೆ ಕಾಲಂಗಳನ್ನು ಭರ್ತಿ ಮಾಡಿ ದೃಢೀಕರಿಸಿ ಸಹಿಯೊಂದಿಗೆ ಅಪ್‌ಲೋಡ ಮಾಡುವುದು.

–ಸಹಿ–
ವಿಭಾಗೀಯ ನಿಯಂತ್ರಣಾಧಿಕಾರಿ
ಕರಾರಸಾನಿಗಮ : ಚಿಕ್ಕಮಗಳೂರು ವಿಭಾಗ

**ವಿಶೇಷ ಸೂಚನೆ : –**

9. ಮಳಿಗೆಗೆ ನಿಗದಿಪಡಿಸಿದ ಇ.ಎಂ.ಡಿ ಮೊತ್ತದಲ್ಲಿ ರೂ.500–00 ಗಳನ್ನು ಮಾತ್ರ ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಪಾವತಿಸುವುದು ಉಳಿದ ಇ.ಎಂ.ಡಿ ಮೊತ್ತವನ್ನು ಡಿ.ಡಿ.ಮೂಲಕ ಪಡೆದು ಸದರಿ ಡಿ.ಡಿ ಯ ಹಿಂಭಾಗದಲ್ಲಿ ತಮ್ಮ ಹೆಸರು, ಬಿಡ್ ಮಾಡುವ ಮಳಿಗೆಯ ಹೆಸರು & ಮಳಿಗೆಯ ಸಂಖ್ಯೆಯನ್ನು ನಮೂದಿಸಿ, ಟೆಂಡರ್ ತೆರೆಯುವ ಕೊನೆಯ ದಿನಾಂಕದೊಳಗಾಗಿ 15.07.2020 ರ ಬೆಳಗ್ಗೆ 10.45 ಗಂಟೆಯ ಒಳಗೆ) ವಿಭಾಗೀಯ ಕಛೇರಿ ಸಂಚಾರ ಶಾಖೆಯಲ್ಲಿರುವ ಬಾಕ್ಸ್‌ನಲ್ಲಿ ಹಾಕುವುದು. ಸದರಿ ಡಿ.ಡಿಯ ಜರಾಕ್ಸ್ ಪ್ರತಿಯನ್ನು ಇತರೆ ದಾಖಲಾತಿಗಳೊಂದಿಗೆ ಅಪ್‌ಲೋಡ್ ಮಾಡುವುದು.
10. ಇ–ಪ್ರೊಕ್ಯೂರ್‌ಮೆಂಟ್ ಭಾಗವಹಿಸುವ ಬಿಡ್‌ದಾರರು ಅಫ್‌ಲೋಡ್ ಮಾಡಿರುವ ಎಲ್ಲಾ ದಾಖಲಾತಿಗಳ ಜರಾಕ್ಸ್ ಪ್ರತಿಗಳನ್ನು ಇ.ಎಂ.ಡಿ ಮತ್ತು ಅರ್ಜಿ ಶುಲ್ಕದ ಡಿ.ಡಿ ಜೊತೆಯಲ್ಲಿ ಟೆಂಡರ್ ತೆರೆಯುವ ಕೊನೆಯ ದಿನಾಂಕದೊಳಗಾಗಿ (15.07.2020 ರ ಬೆಳಗ್ಗೆ 10.45 ಗಂಟೆಯ ಒಳಗೆ) ವಿಭಾಗೀಯ ಕಛೇರಿ ಸಂಚಾರ ಶಾಖೆಯಲ್ಲಿರುವ ಬಾಕ್ಸ್‌ನಲ್ಲಿ ಹಾಕುವುದು.
11. ಮಳಿಗೆಗೆ ನಿಗದಿಪಡಿಸಿದ ಅರ್ಜಿ ಶುಲ್ಕದ ಮೊತ್ತವನ್ನು ಡಿ.ಡಿ.ಮೂಲಕ ಪಡೆದು ಸದರಿ ಡಿ.ಡಿ ಯ ಹಿಂಭಾಗದಲ್ಲಿ ತಮ್ಮ ಹೆಸರು, ಬಿಡ್ ಮಾಡುವ ಮಳಿಗೆಯ ಹೆಸರು & ಮಳಿಗೆಯ ಸಂಖ್ಯೆಯನ್ನು ನಮೂದಿಸಿ ಟೆಂಡರ್ ತೆರೆಯುವ ಕೊನೆಯ ದಿನಾಂಕದೊಳಗಾಗಿ ವಿಭಾಗೀಯ ಕಛೇರಿ ಸಂಚಾರ ಶಾಖೆಯಲ್ಲಿರುವ ಬಾಕ್ಸ್‌ನಲ್ಲಿ ಹಾಕುವುದು. ಸದರಿ ಡಿ.ಡಿಯ ಜರಾಕ್ಸ್ ಪ್ರತಿಯನ್ನು ಇತರೆ ದಾಖಲಾತಿಗಳೊಂದಿಗೆ ಅಪ್‌ಲೋಡ್ ಮಾಡುವುದು.
12. ಪೋರ್ಟಲ್‌ನಲ್ಲಿ ಅಪಲೋಡ್ ಮಾಡಿದ ಮಳಿಗೆಗೆ ಸಂಬಂಧಿಸಿದ ವಿವರಗಳನ್ನು ಸಂಪೂರ್ಣವಾಗಿ ಓದಿ ಅರ್ಥೈಸಿಕೊಂಡಿರುವ ಬಗ್ಗೆ ಹಾಗೂ ಎಲ್ಲಾ ಷರತ್ತು ಮತ್ತು ನಿಬಂಧನೆಗಳನ್ನು ಒಪ್ಪಿರುವ ಬಗ್ಗೆ ಷರತ್ತು ಮತ್ತು ನಿಭಂಧನೆಗಳ ಪ್ರತಿಯಲ್ಲಿ, ಟೆಂಡರ್‌ದಾರರು/ಅರ್ಜಿದಾರರು/ಬಿಡ್‌ದಾರರು ಸಹಿ ಮಾಡಿ, ಇ–ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವುದು.
13. ಪಾನ್ ಕಾರ್ಡ್ ಸಲ್ಲಿಸುವುದು ಕಡ್ಡಾಯವಾಗಿದ್ದು ಹಾಗೂ ವಿಳಾಸ ದೃಢೀಕರಣ ಪತ್ರಕ್ಕೆ ವೋಟರ್ ಐಡಿ, ಆಧಾರ ಕಾರ್ಡ್, ಬ್ಯಾಂಕ್ ಪಾಸ್ ಬುಕ್, ಪಾಸಪೋರ್ಟ & ಇತರೆ ದಾಖಲಾತಿಗಳನ್ನು ಇ–ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವುದು.
14. ಎಲ್ಲಾ ಬಿಡ್‌ದಾರರು ಕಪ್ಪುಪಟ್ಟಿಗೆ ಸೇರಿಲ್ಲದಿರುವ ಬಗ್ಗೆ ನಾವು ಅಪ್‌ಲೋಡ್ ಮಾಡಿರುವ ಸ್ವಯಂ ದೃಢೀಕರಣ ಪತ್ರದ ನಮೂನೆಯಲ್ಲಿ ಭರ್ತಿ ಮಾಡಿ ಪೂರ್ಣ ಹೆಸರು, ವಿಳಾಸದೊಂದಿಗೆ ಸಹಿ ಮಾಡಿ ಇ–ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವುದು.
15. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಅಂಗವಿಕಲ/ವಿಕಲಚೇತನ ಮೀಸಲಾತಿ ಪಡೆಯುವ ಬಿಡ್‌ದಾರರು ನಾವು ಅಪ್‌ಲೋಡ್ ಮಾಡಿರುವ ಸ್ವಯಂ ದೃಢೀಕರಣ ಪತ್ರದ ನಮೂನೆಯಲ್ಲಿ ಭರ್ತಿ ಮಾಡಿ ಪೂರ್ಣ ಹೆಸರು, ವಿಳಾಸದೊಂದಿಗೆ ಸಹಿ ಮಾಡಿ ಇ–ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವುದು.
16. ಬಿಡ್‌ದಾರರು ಬಿಡ್‌ನಲ್ಲಿ ಸಲ್ಲಿಸಿರುವ ದಾಖಲಾತಿಗಳ ಬಗ್ಗೆ ಅಳವಡಿಸಿರುವ ಚೆಕ್‌ಲಿಸ್ಟ್‌ನಲ್ಲಿ ದಾಖಲಾತಿಗಳನ್ನು ಸಲ್ಲಿಸಿದ ಬಗ್ಗೆ ಕಾಲಂಗಳನ್ನು ಭರ್ತಿ ಮಾಡಿ ದೃಢೀಕರಿಸಿ ಸಹಿಯೊಂದಿಗೆ ಅಪ್‌ಲೋಡ ಮಾಡುವುದು.

–ಸಹಿ–
ವಿಭಾಗೀಯ ನಿಯಂತ್ರಣಾಧಿಕಾರಿ
ಕರಾರಸಾನಿಗಮ : ಚಿಕ್ಕಮಗಳೂರು ವಿಭಾಗ

ಯಿಂದ,
ಶ್ರೀ ---------------

---------------

---------------

---------------

ಗೆ,
ವಿಭಾಗೀಯ ನಿಯಂತ್ರಣಾಧಿಕಾರಿ,
ಕ.ರಾ.ರ.ಸಾ.ನಿಗಮ,
ಚಿಕ್ಕಮಗಳೂರು ವಿಭಾಗ,
ಚಿಕ್ಕಮಗಳೂರು.

ಮಾನ್ಯರೆ,

ವಿಷಯ:**ಕಪ್ಪು ಪಟ್ಟಿಗೆ** ಸೇರಿಲ್ಲದಿರುವ ಬಗ್ಗೆ ಸ್ವಯಂ ದೃಢೀಕರಣ ಪತ್ರ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ನಾನು ಇ-ಟೆಂಡರ್ ಪ್ರಕಟಣೆ ಸಂಖ್ಯೆ : ___/201920 ದಿ:______________ ರಂತೆ ____________ ಬಸ್ ನಿಲ್ದಾಣದ ___________________ಮಳಿಗೆಯ ಬಗ್ಗೆ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಅರ್ಜಿ ಸಲ್ಲಿಸಿದ್ದು, ನಾನು ಕ.ರಾ.ರ.ಸಾ.ನಿಗಮ / ಬೆಂ.ಮ.ಸಾ.ಸಂಸ್ಥೆ / ವಾ.ಕ.ರ.ಸಾ.ಸಂಸ್ಥೆ / ಈ.ಕ.ರ.ಸಾ.ಸಂಸ್ಥೆ ಮತ್ತು ಇತರೆ ಸರ್ಕಾರಿ ಇಲಾಖೆಗಳಲ್ಲಿ ಯಾವುದೇ ವಾಣಿಜ್ಯ ಮಳಿಗೆಗಳ / ಜಾಹೀರಾತು ವಿಷಯಕ್ಕೆ ಸಂಬಂಧಿಸಿದಂತೆ **ಕಪ್ಪು ಪಟ್ಟಿಗೆ** ಸೇರಿಲ್ಲವೆಂದು ಈ ಮೂಲಕ ಸ್ವಯಂ ದೃಢೀಕರಿಸುತ್ತೇನೆ.

ನಾನು ಒದಗಿಸಿರುವ ಮಾಹಿತಿಯು ಸತ್ಯವೆಂದು ದೃಢೀಕರಿಸುತ್ತ, ಈ ಬಗ್ಗೆ ಯಾವುದೇ ಮಾಹಿತಿ ತಪ್ಪು ಎಂದು ಯಾವುದೇ ಹಂತದಲ್ಲಿ ಕಂಡುಬಂದಲ್ಲಿ ನಾನು ಸಲ್ಲಿಸಿರುವ ಇ.ಎಂ.ಡಿ / ಭದ್ರತಾ ಠೇವಣಿಯ ಮೊತ್ತವನ್ನು ಮುಟ್ಟುಗೋಲು ಹಾಕಿಕೊಂಡು ನನ್ನ ಆಯ್ಕೆ / ಕರಾರನ್ನು ರದ್ದುಗೊಳಿಸುವ ನಿಯಮದ ಬಗ್ಗೆ ತಿಳಿದು ಅರ್ಜಿ ಸಲ್ಲಿಸಿದ್ದು, ಈ ಬಗ್ಗೆ ನಾನು ಯಾವುದೇ ತಪ್ಪು ಮಾಹಿತಿ ನೀಡಿರುವುದು ಕಂಡುಬಂದಲ್ಲಿ / ಅಸತ್ಯವೆಂದು ದೃಡಪಟ್ಟಲ್ಲಿ ನಿಗಮವು ತೆಗೆದುಕೊಳ್ಳುವ ನಿರ್ಧಾರ / ಕ್ರಮಗಳಿಗೆ ಬದ್ಧನಾಗಿರುತ್ತೇನೆಂದು ಈ ಮೂಲಕ ದೃಢೀಕರಿಸುತ್ತೇನೆ..

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

( )

ದಿ :

ಯಿಂದ,
ಶ್ರೀ --------------

---------------

---------------

---------------

ಗೆ,
ವಿಭಾಗೀಯ ನಿಯಂತ್ರಣಾಧಿಕಾರಿ,
ಕ.ರಾ.ರ.ಸಾ.ನಿಗಮ,
ಚಿಕ್ಕಮಗಳೂರು ವಿಭಾಗ,
ಚಿಕ್ಕಮಗಳೂರು
ಮಾನ್ಯರೆ,

ವಿಷಯ:**<u>ಪರಿಶಿಷ್ಟ ಜಾತಿ/ಪರಿಶಿಷ್ಠ ಪಂಗಡದ</u>** ಮೀಸಲಾತಿ ಆಧಾರದಲ್ಲಿ ಬೇರೆ ಮಳಿಗೆಯನ್ನು ಪಡೆಯದಿರುವ ಬಗ್ಗೆ ಸ್ವಯಂ ದೃಢೀಕರಣ ಪತ್ರ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ನಾನು ಇ-ಟೆಂಡರ್ ಪ್ರಕಟಣೆ ಸಂಖ್ಯೆ : ____/2019-20 ದಿ : ______________ ರಂತೆ ____________ ಬಸ್ ನಿಲ್ದಾಣದ ___________________ಮಳಿಗೆಯ ಬಗ್ಗೆ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಅರ್ಜಿ ಸಲ್ಲಿಸಿದ್ದು, ನಾನು ಕ.ರಾ.ರ.ಸಾ.ನಿಗಮ / ಬೆಂ.ಮ.ಸಾ.ಸಂಸ್ಥೆ / ವಾ.ಕ.ರ.ಸಾ.ಸಂಸ್ಥೆ / ಈ.ಕ.ರ.ಸಾ.ಸಂಸ್ಥೆ ಮತ್ತು ಇತರೆ ಸರ್ಕಾರಿ ಇಲಾಖೆಗಳಲ್ಲಿ ಯಾವುದೇ ವಾಣಿಜ್ಯ ಮಳಿಗೆಗಳ / ಜಾಹೀರಾತು ಪರವಾನಗಿಯನ್ನು **<u>ಪರಿಶಿಷ್ಟ ಜಾತಿ/ಪರಿಶಿಷ್ಠ ಪಂಗಡದ</u>** ಮೀಸಲಾತಿ ಆಧಾರದ ಮೇಲೆ ಪಡೆದಿರುವುದಿಲ್ಲವೆಂದು ಈ ಮೂಲಕ ಸ್ವಯಂ ದೃಢೀಕರಿಸುತ್ತೇನೆ.

ನಾನು ಒದಗಿಸಿರುವ ಮಾಹಿತಿಯು ಸತ್ಯವೆಂದು ದೃಢೀಕರಿಸುತ್ತ, ಈ ಬಗ್ಗೆ ಯಾವುದೇ ಮಾಹಿತಿ ತಪ್ಪು ಎಂದು ಯಾವುದೇ ಹಂತದಲ್ಲಿ ಕಂಡುಬಂದಲ್ಲಿ ನಾನು ಸಲ್ಲಿಸಿರುವ ಇ.ಎಂ.ಡಿ / ಭದ್ರತಾ ಠೇವಣಿಯ ಮೊತ್ತವನ್ನು ಮುಟ್ಟುಗೋಲು ಹಾಕಿಕೊಂಡು ನನ್ನ ಆಯ್ಕೆ / ಕರಾರನ್ನು ರದ್ದುಗೊಳಿಸುವ ನಿಯಮದ ಬಗ್ಗೆ ತಿಳಿದು ಅರ್ಜಿ ಸಲ್ಲಿಸಿದ್ದು, ಈ ಬಗ್ಗೆ ನಾನು ಯಾವುದೇ ತಪ್ಪು ಮಾಹಿತಿ ನೀಡಿರುವುದು ಕಂಡುಬಂದಲ್ಲಿ / ಅಸತ್ಯವೆಂದು ದೃಡಪಟ್ಟಲ್ಲಿ ನಿಗಮವು ತೆಗೆದುಕೊಳ್ಳುವ ನಿರ್ಧಾರ / ಕ್ರಮಗಳಿಗೆ ಬದ್ಧನಾಗಿರುತ್ತೇನೆಂದು ಈ ಮೂಲಕ ದೃಢೀಕರಿಸುತ್ತೇನೆ..

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

(                              )

ದಿ :

ಯಿಂದ,
ಶ್ರೀ ________________

__________________

__________________

ಗೆ,
ವಿಭಾಗೀಯ ನಿಯಂತ್ರಣಾಧಿಕಾರಿ,
ಕ.ರಾ.ರ.ಸಾ.ನಿಗಮ,
ಚಿಕ್ಕಮಗಳೂರು ವಿಭಾಗ,
ಚಿಕ್ಕಮಗಳೂರು.

ಮಾನ್ಯರೆ,

ವಿಷಯ:**ಅಂಗವಿಕಲ/ವಿಕಲಚೇತನ** ಮೀಸಲಾತಿ ಆಧಾರದಲ್ಲಿ ಬೇರೆ ಮಳಿಗೆಯನ್ನು ಪಡೆಯದಿರುವ ಬಗ್ಗೆ ಸ್ವಯಂ ದೃಢೀಕರಣ ಪತ್ರ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ನಾನು ಇ-ಟೆಂಡರ್ ಪ್ರಕಟಣೆ ಸಂಖ್ಯೆ : ____/2019-20 ದಿ :__________ ರಂತೆ ಬಸ್ ನಿಲ್ದಾಣದ ಮಳಿಗೆಯ ಬಗ್ಗೆ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಅರ್ಜಿ ಸಲ್ಲಿಸಿದ್ದು, ನಾನು ಕ.ರಾ.ರ.ಸಾ.ನಿಗಮ / ಬೆಂ.ಮ.ಸಾ.ಸಂಸ್ಥೆ / ವಾ.ಕ.ರ.ಸಾ.ಸಂಸ್ಥೆ / ಈ.ಕ.ರ.ಸಾ.ಸಂಸ್ಥೆ ಮತ್ತು ಇತರೆ ಸರ್ಕಾರಿ ಇಲಾಖೆಗಳಲ್ಲಿ ಯಾವುದೇ ವಾಣಿಜ್ಯ ಮಳಿಗೆಗಳ / ಜಾಹೀರಾತು ಪರವಾನಗಿಯನ್ನು **ಅಂಗವಿಕಲ/ವಿಕಲಚೇತನ** ಮೀಸಲಾತಿ ಆಧಾರದ ಮೇಲೆ ಪಡೆದಿರುವುದಿಲ್ಲವೆಂದು ಈ ಮೂಲಕ ಸ್ವಯಂ ದೃಢೀಕರಿಸುತ್ತೇನೆ.

ನಾನು ಒದಗಿಸಿರುವ ಮಾಹಿತಿಯು ಸತ್ಯವೆಂದು ದೃಢೀಕರಿಸುತ್ತ, ಈ ಬಗ್ಗೆ ಯಾವುದೇ ಮಾಹಿತಿ ತಪ್ಪು ಎಂದು ಯಾವುದೇ ಹಂತದಲ್ಲಿ ಕಂಡುಬಂದಲ್ಲಿ ನಾನು ಸಲ್ಲಿಸಿರುವ ಇ.ಎಂ.ಡಿ / ಭದ್ರತಾ ಠೇವಣಿಯ ಮೊತ್ತವನ್ನು ಮುಟ್ಟುಗೋಲು ಹಾಕಿಕೊಂಡು ನನ್ನ ಆಯ್ಕೆ / ಕರಾರನ್ನು ರದ್ದುಗೊಳಿಸುವ ನಿಯಮದ ಬಗ್ಗೆ ತಿಳಿದು ಅರ್ಜಿ ಸಲ್ಲಿಸಿದ್ದು, ಈ ಬಗ್ಗೆ ನಾನು ಯಾವುದೇ ತಪ್ಪು ಮಾಹಿತಿ ನೀಡಿರುವುದು ಕಂಡುಬಂದಲ್ಲಿ / ಅಸತ್ಯವೆಂದು ದೃಡಪಟ್ಟಲ್ಲಿ ನಿಗಮವು ತೆಗೆದುಕೊಳ್ಳುವ ನಿರ್ಧಾರ / ಕ್ರಮಗಳಿಗೆ ಬದ್ಧನಾಗಿರುತ್ತೇನೆಂದು ಈ ಮೂಲಕ ದೃಢೀಕರಿಸುತ್ತೇನೆ..

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

(                    )

ದಿ :

ಯಿಂದ,
ಶ್ರೀ ---------------

---------------

---------------

ಗೆ,
ವಿಭಾಗೀಯ ನಿಯಂತ್ರಣಾಧಿಕಾರಿ,
ಕ.ರಾ.ರ.ಸಾ.ನಿಗಮ,
ಚಿಕ್ಕಮಗಳೂರು ವಿಭಾಗ,
ಚಿಕ್ಕಮಗಳೂರು
ಮಾನ್ಯರೆ,

## ಚೆಕ್‌ಲಿಸ್ಟ್

| | |
|---|---|
| ಬಸ್ ನಿಲ್ದಾಣ | |
| ಅರ್ಜಿ ಸಲ್ಲಿಸಿದ ಮಳಿಗೆ ಹೆಸರು & ಸಂಖ್ಯೆ | |
| ಬಿಡ್‌ದಾರರ ಹೆಸರು | |
| ಈ ಕೆಳಕಂಡ ದಾಖಲಾತಿಗಳನ್ನು ಸಲ್ಲಿಸಿರುವ ಬಗ್ಗೆ ಗುರುತು ಮಾಡುವುದು (ಸಲ್ಲಿಸಿರುತ್ತೇನೆ/ಸಲ್ಲಿಸಿರುವುದಿಲ್ಲ ಎಂಬ ಬಗ್ಗೆ ಸ್ಪಷ್ಟವಾಗಿ ನಮೂದಿಸುವುದು) | |
| ಇ.ಎಂ.ಡಿ. ಡಿ.ಡಿ (ನಂಬರ್‌ನೊಂದಿಗೆ) | |
| ಅರ್ಜಿ ಶುಲ್ಕದ ಡಿ.ಡಿ (ನಂಬರ್‌ನೊಂದಿಗೆ) | |
| ಪಾನ್ ಕಾರ್ಡ್ | |
| ಜಿ.ಎಸ್.ಟಿ. ಸಂಖ್ಯೆ ನಮೂದಿಸುವುದು | |
| ವಿಳಾಸ ದೃಡೀಕರಣ ಪತ್ರ | |
| ಕಪ್ಪು ಪಟ್ಟಿಗೆ ಸೇರಿಲ್ಲದ ಬಗ್ಗೆ ಸ್ವಯಂ ದೃಡೀಕರಣ ಪತ್ರ | |
| ಎಲ್ಲಾ ಪುಟಗಳಿಗೆ ಸಹಿ ಮಾಡಿದ ಷರತ್ತು ಮತ್ತು ನಿಬಂಧನೆಗಳ ಪ್ರತಿ | |
| ಮೀಸಲಾತಿ ಅಡಿಯಲ್ಲಿ ಅರ್ಜಿ ಸಲ್ಲಿಸಿದ್ದಲ್ಲಿ ಮಾತ್ರ ಅನ್ವಯಿಸುತ್ತದೆ. | |
| ಪರಿಶಿಷ್ಟ ಜಾತಿ ಪ್ರಮಾಣ ಪತ್ರ | |
| ಪರಿಶಿಷ್ಟ ಪಂಗಡ ಪ್ರಮಾಣ ಪತ್ರ | |
| ಅಂಗವಿಕಲರ ಪ್ರಮಾಣ ಪತ್ರ | |
| ಮೀಸಲಾತಿ ಆಧಾರದ ಮೇಲೆ ಬೇರೆ ಮಳಿಗೆ ಪಡೆಯದಿರುವ ಬಗ್ಗೆ ಸ್ವಯಂ ದೃಡೀಕರಣ ಪತ್ರ (ಪ.ಜಾ/ಪ.ಪ/ಅಂಗವಿಕಲರು) | |

ತಮ್ಮ ವಿಶ್ವಾಸಿ,

( )

ಅರ್ಜಿದಾರರ ಸಹಿ

ದಿ :

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ::ಚಿಕ್ಕಮಗಳೂರು ವಿಭಾಗ::ಚಿಕ್ಕಮಗಳೂರು

ಸಂ/ಕರಾಸಾ/ಚಿಮವಿ/ಸಂಚಾರ/ವಾಣಿಜ್ಯ/1625 /2020-21 ದಿನಾಂಕ:25.09.2020

## "ಸಂಧಾನ ಪ್ರಕಟಣೆ ಸಂಖ್ಯೆ : 06/2020"

ಕ.ರಾ.ರ.ಸಾ.ನಿಗಮ, ಚಿಕ್ಕಮಗಳೂರು ವಿಭಾಗದ ವ್ಯಾಪ್ತಿಯ ಈ ಕೆಳಕಂಡ ಬಸ್ ನಿಲ್ದಾಣಗಳಲ್ಲಿ ಖಾಲಿಯಿರುವ ವಾಣಿಜ್ಯ ಮಳಿಗೆಗಳ ಶಾಶ್ವತ ಹಾಗೂ ತೆರೆದ ಸ್ಥಳಗಳಿಗೆ ಪರವಾನಗಿದಾರರನ್ನು ಆಯ್ಕೆ ಮಾಡಲು ಆಸಕ್ತರನ್ನು **ದಿನಾಂಕ:22.10.2020ರಂದು ಸಮಯ 15.00** ಗಂಟೆಗೆ ಮಾತುಕತೆಯ ಮೂಲಕ ನೀಡಲು ಈ ಕೆಳಗೆ ಸಹಿ ಮಾಡಿರುವವರ ಕಛೇರಿಯಲ್ಲಿ ಭಾಗವಹಿಸಲು ಆಹ್ವಾನಿಸಲಾಗಿದೆ. ಪರವಾನಗಿ ಶುಲ್ಕದ ಮೇಲೆ ಶೇಖಡ 10% ರಷ್ಟು ಪ್ರತಿ ವರ್ಷ ಹೆಚ್ಚಿಸಲಾಗುವುದು. ಅವಧಿ ಮುಗಿದ ಬಳಿಕ ಹೊಸದಾಗಿ ಇ-ಟೆಂಡರ್ ಕರೆಯಲಾಗುವುದು. ಸಂಧಾನ ಮಾತುಕತೆಯಲ್ಲಿ ಆಯ್ಕೆಯಾದ ಆಸಕ್ತರು ಕರ್ನಾಟಕ ಸ್ಟಾಂಪ್ ಕಾಯ್ದೆಯನ್ವಯ ಸ್ಟಾಂಪ್ ಶುಲ್ಕವನ್ನು ಭರಿಸಿ ಸಂಸ್ಥೆಯೊಂದಿಗೆ ಕರಾರು ಒಪ್ಪಂದ ಮಾಡಿಕೊಳ್ಳುವುದು.

| ಕ್ರ ಸ | ನಿಲ್ದಾಣದ ಹೆಸರು | ವಾಣಿಜ್ಯ ಮಳಿಗೆ/ ತೆರೆದ ಜಾಗದ ವಿವರ ಹಾಗೂ ತೆರೆವುಗೊಳ್ಳುವ ದಿನಾಂಕ | ಪರವಾನಿಗೆ ಅವಧಿ | ನಿಗದಿ ಪಡಿಸಿದ ಮಾಸಿಕ ಪರವಾನಿಗೆ ಶುಲ್ಕ (ರೂ.ಗಳಲ್ಲಿ) | ಇ.ಎಂ.ಡಿ (ರೂ.ಗಳಲ್ಲಿ) | ವಿಸ್ತೀರ್ಣ ಚ.ಅಡಿ ಗಳಲ್ಲಿ | ಅರ್ಜಿ ಶುಲ್ಕ GST ಒಳಗೊಂಡಂತೆ | ಖಾಲಿ ದಿನಾಂಕ |
|---|---|---|---|---|---|---|---|---|
| 1 | ಕಡೂರು | ಜನರಲ್ ಸ್ಟಾಲ್-02 | 5ವರ್ಷ | 38,799/- | 1,16,397/- | 100.00 | 458/- | ಖಾಲಿ ಇದೆ |
| 2 | ಕಡೂರು | ಜನರಲ್ ಸ್ಟಾಲ್-03 (ರೈಲ್ವೆ ನಿಲ್ದಾಣದ ಕಡೆಗೆ) | 5ವರ್ಷ | 16,669/- | 50,007/- | 119.80 | 197/- | ಖಾಲಿ ಇದೆ |
| 3 | ಪಂಚನಹಳ್ಳಿ | ಜನರಲ್ ಸ್ಟಾಲ್-03 | 5 ವರ್ಷ | 1,500/- | 4,500/- | 100.00 | 118/- | ಖಾಲಿ ಇದೆ |
| 4 | ಸಖರಾಯಪಟ್ಟಣ | ಉಪಹಾರ ಗೃಹ | 5 ವರ್ಷ | 5,500/- | 16,500/- | 749.82 | 118/- | ಖಾಲಿ ಇದೆ |
| 5 | ಸಖರಾಯಪಟ್ಟಣ | ಜನರಲ್ ಸ್ಟಾಲ್-03 | 5 ವರ್ಷ | 1,800/- | 5,400/- | 120.00 | 118/- | ಖಾಲಿ ಇದೆ |
| 6 | ಕೊಟ್ಟಿಗೆಹಾರ | ಜನರಲ್ ಸ್ಟಾಲ್-03 | 5ವರ್ಷ | 10,000/- | 30,000/- | 120.00 | 118/- | ಖಾಲಿ ಇದೆ |
| 7 | ಕೊಟ್ಟಿಗೆಹಾರ | ಜನರಲ್ ಸ್ಟಾಲ್-04 | 5ವರ್ಷ | 10,000/- | 30,000/- | 120.00 | 118/- | ಖಾಲಿ ಇದೆ |
| 8 | ಅರೇಹಳ್ಳಿ | ಜನರಲ್ ಸ್ಟಾಲ್-02 | 5ವರ್ಷ | 2,750/- | 8,250/- | 114.64 | 118/- | ಖಾಲಿ ಇದೆ |

ಸದರಿ ಮಳಿಗೆಯನ್ನು ನಡೆಸಲು ಆಸಕ್ತರು, ನಿಗದಿಪಡಿಸಿದ ಅರ್ಜಿ ಶುಲ್ಕದ ಮೊತ್ತಕ್ಕೆ ಡಿ.ಡಿ ಯನ್ನು ಮತ್ತು ಇ.ಎಂ.ಡಿ ಮೊತ್ತಕ್ಕೆ ಡಿ.ಡಿ ಯನ್ನು ಪ್ರತ್ಯೇಕವಾಗಿ 'Divisional Controller K.S.R.T.C Chikmagaluru' ಇವರ ಹೆಸರಿಗೆ ರಾಷ್ಟ್ರೀಕೃತ ಬ್ಯಾಂಕಿನಿಂದ ಪಡೆದು, ಸದರಿ ಡಿ.ಡಿ ಯೊಂದಿಗೆ ತಮ್ಮ ಗುರುತಿನ ಚೀಟಿ (ವೋಟರ್ ಐ.ಡಿ/ಆಧಾರ್ ಕಾರ್ಡ್/ಪಡಿತರ ಚೀಟಿ/ಪಾನ್ ಕಾರ್ಡ್ ಹಾಗೂ ಇನ್ನಿತರ) ಮತ್ತು ಮನವಿ ಪತ್ರದೊಂದಿಗೆ ವಿಭಾಗೀಯ ನಿಯಂತ್ರಣಾಧಿಕಾರಿ, ಕ.ರಾ.ರ.ಸಾ.ನಿಗಮ, ಚಿಕ್ಕಮಗಳೂರು ಇವರಲ್ಲಿ ದಿನಾಂಕ:22.10.2020 ರಂದು ಸಮಯ 15.00 ಗಂಟೆಗೆ ನಡೆಯಲಿರುವ ಸಂಧಾನದಲ್ಲಿ ಭಾಗವಹಿಸಿ ಸಂಸ್ಥೆಯ ನಿಯಮಗಳನ್ನು ಪಾಲಿಸಿ ಪರವಾನಗಿದಾರರಾಗಿ ಆಯ್ಕೆಯಾಗಬಹುದಾಗಿರುತ್ತದೆ. ಸಂಸ್ಥೆಯ ನಿಯಮಾವಳಿಗಳ ಬಗ್ಗೆ ಮಾಹಿತಿಯನ್ನು ಈ ಕೆಳಗೆ ಸಹಿ ಮಾಡಿರುವ ಅಧಿಕಾರಿಯ ಕಛೇರಿಯಿಂದ ಪಡೆದು ಸಂಧಾನದಲ್ಲಿ ಭಾಗವಹಿಸಬಹುದಾಗಿರುತ್ತದೆ.

ಸದರಿ ಮಳಿಗೆಗಳಿಗೆ ಆಸಕ್ತರು ಮಾತುಕತೆಗೆ ಕರೆದಿರುವ ಪ್ರಕಟಣೆಯನ್ನು ಯಾವುದೇ ಕಾರಣ ನೀಡದೇ ಪುರಸ್ಕರಿಸುವ ಅಥವಾ ತಿರಸ್ಕರಿಸುವ ಹಕ್ಕನ್ನು ಸಂಸ್ಥೆಯು ಕಾಯ್ದಿರಿಸಿಕೊಂಡಿದೆ. ಹೆಚ್ಚಿನ ವಿವರಗಳಿಗಾಗಿ ವಿಭಾಗೀಯ ಕಛೇರಿ, ಕ.ರಾ.ರ.ಸಾ.ನಿಗಮ, ಚಿಕ್ಕಮಗಳೂರು ವಿಭಾಗ-577 101 ಇಲ್ಲಿ ಕಛೇರಿ ಅವಧಿಯಲ್ಲಿ ಸಂಪರ್ಕಿಸಲು ಕೋರಲಾಗಿದೆ.

-: <u>ಸಂಪರ್ಕಿಸುವ ದೂರವಾಣಿ ಸಂಖ್ಯೆ</u> :-

ವಿಭಾಗೀಯ ಸಂಚಾರ ಅಧಿಕಾರಿ – 7760990402

ಸಹಾಯಕ ಸಂಚಾರ ವ್ಯವಸ್ಥಾಪಕರು – 7760990411

ಸಹಿ/-
ವಿಭಾಗೀಯ ನಿಯಂತ್ರಣಾಧಿಕಾರಿ
ಕ.ರಾ.ರ.ಸಾ.ನಿಗಮ::ಚಿಕ್ಕಮಗಳೂರು ವಿಭಾಗ.

**<u>ಪ್ರತಿಯನ್ನು ವಂದನೆಗಳೊಂದಿಗೆ</u>** :-

1. ಮುಖ್ಯ ಸಂಚಾರ ವ್ಯವಸ್ಥಾಪಕರು (ವಾಣಿಜ್ಯ), ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
2. ವ್ಯವಸ್ಥಾಪಕ ನಿರ್ದೇಶಕರು, ವಾ.ಕ.ರ.ಸಾ.ಸಂಸ್ಥೆ, ಈ.ಕ.ರ.ಸಾ.ಸಂಸ್ಥೆ ಮತ್ತು ಬೆ.ಮ.ಸಾ.ಸಂಸ್ಥೆ ಕೇಂದ್ರ ಕಛೇರಿ, ಹುಬ್ಬಳ್ಳಿ, ಕಲಬುರಗಿ ಮತ್ತು ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
3. ಎಲ್ಲಾ ಹಿರಿಯ/ವಿಭಾಗೀಯ ನಿಯಂತ್ರಣಾಧಿಕಾರಿಗಳು, ಕ.ರಾ.ರ.ಸಾ.ನಿಗಮ, ವಾ.ಕ.ರ.ಸಾ.ಸಂಸ್ಥೆ, ಈ.ಕ.ರ.ಸಾ.ಸಂಸ್ಥೆ ಮತ್ತು ಬೆ.ಮ.ಸಾ.ಸಂಸ್ಥೆ ರವರ ಮಾಹಿತಿಗಾಗಿ ಹೆಚ್ಚಿನ ಪ್ರತಿಗಳನ್ನು ಸಾರ್ವಜನಿಕರ ಅವಗಹಾನೆಗಾಗಿ ಮುಖ್ಯ ಬಸ್ ನಿಲ್ದಾಣದ ಸೂಚನಾ ಫಲಕದಲ್ಲಿ ಅಂಟಿಸಲು ಕೋರಿದೆ.
4. ವಿಭಾಗೀಯ ಸಂಚಾರ ಅಧಿಕಾರಿ, ಸಹಾಯಕ ಕಾರ್ಯನಿರ್ವಾಹಕ ಅಧಿಕಾರಿ, ಸಹಾಯಕ ಕಾನೂನು ಅಧಿಕಾರಿ, ಭದ್ರತಾ ಮತ್ತು ಜಾಗೃತಾಧಿಕಾರಿ ಮತ್ತು ಸಹಾಯಕ ಲೆಕ್ಕಾಧಿಕಾರಿ, ಕ.ರಾ.ರ.ಸಾ.ನಿಗಮ ಚಿಕ್ಕಮಗಳೂರು ವಿಭಾಗ ರವರ ಮಾಹಿತಿಗಾಗಿ ದಿನಾಂಕ:22.10.2020ರಂದು 15.00 ಗಂಟೆಗೆ ಸಂಧಾನ ಸಭೆಗೆ ಹಾಜರಾಗುವುದು.
5. ಸಹಾಯಕ ಆಡಳಿತಾಧಿಕಾರಿ, ಕ.ರಾ.ರ.ಸಾ.ನಿಗಮ, ಚಿಕ್ಕಮಗಳೂರು ವಿಭಾಗ ರವರಿಗೆ ಕಳುಹಿಸುತ್ತ ಸದರಿ ಪ್ರಕಟಣೆಯನ್ನು ವಿಭಾಗೀಯ ಕಛೇರಿ ಸೂಚನಾ ಫಲಕದಲ್ಲಿ ಪ್ರಕಟಿಸಲು ಈ ಮೂಲಕ ತಿಳಿಸಿದೆ.
6. ಘಟಕ ವ್ಯವಸ್ಥಾಪಕರು, ಕ.ರಾ.ರ.ಸಾ.ನಿಗಮ, ಚಿಕ್ಕಮಗಳೂರು / ಮೂಡಿಗೆರೆ / ಕಡೂರು / ಅರಸೀಕೆರೆ / ಸಕಲೇಶಪುರ / ಮತ್ತು ಬೇಲೂರು ಘಟಕ ರವರ ಮಾಹಿತಿಗಾಗಿ ಕಳುಹಿಸುತ್ತಾ ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಬಸ್ ನಿಲ್ದಾಣಗಳಲ್ಲಿ ಸದರಿ ಪ್ರಕಟಣೆಯನ್ನು ನಿಲ್ದಾಣದ ಸೂಚನಾ ಫಲಕದಲ್ಲಿ ಪ್ರಕಟಿಸಿ ಸಾರ್ವಜನಿಕ ಗಮನಕ್ಕೆ ತರುವುದು ಹಾಗೂ ಹೆಚ್ಚಿನ ಪ್ರಚಾರ ಮಾಡುವುದು.

***<u>ಸಂಧಾನದಲ್ಲಿ ಭಾಗವಹಿಸಲು ಷರತ್ತು ಮತ್ತು ನಿಬಂಧನೆಗಳು (ಸಾ.ಸ್ಥಾ.ಆ. ಸಂ.787/2017 ರಂತೆ)</u>***

1. ಸಂಧಾನದಲ್ಲಿ ಭಾಗವಹಿಸುವ ಬಿಡ್‌ದಾರರು ಅರ್ಜಿ ಸಲ್ಲಿಸುವ ಮೊದಲು ತಮ್ಮ ಸ್ವಂತ ಖರ್ಚಿನಲ್ಲಿ ಆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ ನಂತರವೇ ಬಿಡ್ ಮೊತ್ತ ದಾಖಲಿಸುವುದು ಬಿಡ್‌ದಾರರ ಜವಾಬ್ದಾರಿಯಾಗಿರುತ್ತದೆ. ಸಂಧಾನ ಪ್ರಕ್ರಿಯೆ ಮುಗಿದ ನಂತರ ಯಾವುದೇ ಕಾರಣಕ್ಕೂ ಮಳಿಗೆಯ ವ್ಯವಹಾರ/ಸ್ಥಳವನ್ನು ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
2. ವಾಣಿಜ್ಯ ಮಳಿಗೆಗಳು ಯಾವ ಯಾವ ಸ್ಥಿತಿಯಲ್ಲಿವೆಯೋ ಹಾಗೇಯೇ ನೀಡಲಾಗುವುದು ಮತ್ತು ಸಂಧಾನದಲ್ಲಿ ನೀಡಿರುವ / ನಮೂದಿಸಿರುವ ಸ್ಥಳದಲ್ಲಿ ಮಾತ್ರ ವ್ಯವಸಹಾರ ನಡೆಸತಕ್ಕದ್ದು ಹಾಗೂ ಮಳಿಗೆಯ ಮೂಲ ಸ್ವರೂಪಕ್ಕೆ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

**<u>ಸಂಧಾನ ಅರ್ಜಿ ಶುಲ್ಕ ಮತ್ತು ಇ.ಎಂ.ಡಿ. ಮೊತ್ತ:-</u>**

1. ಸಂಧಾನದಲ್ಲಿ ಭಾಗವಹಿಸುವ ಬಿಡ್‌ದಾರರು / ಅರ್ಜಿದಾರರು ನಿಗದಿತ ಇ.ಎಂ.ಡಿ. ಮೊತ್ತವನ್ನು Divisional Controller, K.S.R.T.C, Chikmagaluru Division ರವರ ಪದನಾಮಕ್ಕೆ ಡಿ.ಡಿ. ರೂಪದಲ್ಲಿ ಪಡೆದು ಸಂಧಾನದ ಕೊನೆಯ ದಿನಾಂಕದಂದು ವಿಭಾಗೀಯ ಕಛೇರಿ ಚಿಕ್ಕಮಗಳೂರು ಇಲ್ಲಿ ಹಾಜರಿರತಕ್ಕದ್ದು,
2. ಅರ್ಜಿದಾರರು/ಬಿಡ್‌ದಾರರು ಪ್ರಕಟಣೆಯಲ್ಲಿ ಮಳಿಗೆಗೆ ನಿಗದಿಪಡಿಸಿದ ಅರ್ಜಿ ಶುಲ್ಕವನ್ನು Divisional Controller, K.S.R.T.C, Chikmagaluru Division ರವರ ಪದನಾಮಕ್ಕೆ ಪ್ರತ್ಯೇಕವಾಗಿ ಡಿ.ಡಿ. ರೂಪದಲ್ಲಿ ಪಡೆದು ಸಂಧಾನದ ಕೊನೆಯ ದಿನಾಂಕದಂದು ವಿಭಾಗೀಯ ಕಛೇರಿ ಚಿಕ್ಕಮಗಳೂರು ಇಲ್ಲಿ ಹಾಜರಿರತಕ್ಕದ್ದು.
3. ನಿಗದಿಪಡಿಸಿದ ಮಾಸಿಕ ಮಿತವ್ಯಯ ಪರವಾನಗಿ ಶುಲ್ಕದ ಮೂರು (03) ಪಟ್ಟು ಮೊತ್ತವನ್ನು ಇ.ಎಂ.ಡಿ. (Earnest Money Deposit) ಯನ್ನಾಗಿ ನಿಗದಿಪಡಿಸಲಾಗಿರುತ್ತದೆ.
4. ಸಂಧಾನ ಪ್ರಕಟಣೆಯಲ್ಲಿ ನಿಗದಿಪಡಿಸಿರುವ ಇ.ಎಂ.ಡಿ.ಮೊತ್ತಕ್ಕೆ, ಸಂಧಾನ ಪ್ರಕಟಣೆಯ ದಿನಾಂಕದ ಅವಧಿಯಲ್ಲಿ ಪಡೆದುಕೊಂಡಿರುವ ಡಿ.ಡಿ.ಯನ್ನು ಮಾತ್ರ ಪರಿಗಣಿಸಲಾಗುವುದು.
5. ಇ.ಎಂ.ಡಿ. ಮೊತ್ತಕ್ಕೆ ಯಾವುದೇ ಬಡ್ಡಿಯನ್ನು ನೀಡಲಾಗುವುದಿಲ್ಲ.

**ಬಿಡ್‌ದಾರರು/ಅರ್ಜಿದಾರರು ಕೆಳಕಂಡ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕಾಗಿರುತ್ತದೆ.**

| ರೂ.5.00 ಲಕ್ಷಗಳಿಗಿಂತ ಕಡಿಮೆ ಮಾಸಿಕ ಪರವಾನಗಿ ಶುಲ್ಕವಿರುವ ವಾಣಿಜ್ಯ ಮಳಿಗೆಗಳಿಗೆ | ರೂ.5.00 ಲಕ್ಷ ಅಥವಾ ಹೆಚ್ಚಿನ ಮಾಸಿಕ ಪರವಾನಗಿ ಶುಲ್ಕವಿರುವ ವಾಣಿಜ್ಯ ಮಳಿಗೆಗಳಿಗೆ |
|---|---|
| ಅ) ವಿಳಾಸ ದೃಢೀಕರಣ ಪತ್ರ (Voter ID, Aadhaar Card, Bank Passbook, Passport, etc.)<br>ಆ) ಬಿಡ್‌ದಾರರು ಪಾಲುದಾರಿಕೆ ವ್ಯವಹಾರ ಸಂಸ್ಥೆಯನ್ನು ಹೊಂದಿದ್ದಲ್ಲಿ, ಭಾರತೀಯ ಪಾಲುದಾರಿಕೆ ಕಾಯ್ದೆಯಡಿಯಲ್ಲಿ ನೋಂದಣಿಯಾಗಿರುವ ದಾಖಲಾತಿ, ಬಿಡ್ ಸಹಿಗೊಳಿಸುವ ವ್ಯಕ್ತಿಯು ಪಾಲುದಾರಿಕೆಯ ಸಂಸ್ಥೆಯಲ್ಲಿ ವ್ಯವಸ್ಥಾಪಕ ಪಾಲುದಾರನಾಗಿರುವ ಬಗ್ಗೆ ದಾಖಲಾತಿಯನ್ನು ಸಲ್ಲಿಸಬೇಕು. ಪಾಲುದಾರಿಕೆಯಲ್ಲಿರುವ ಎಲ್ಲಾ ನಿರ್ದೇಶಕರು / ಪಾಲುದಾರರ ಪೂರ್ಣ ವಿಳಾಸದ ಮಾಹಿತಿಯನ್ನು ಸಲ್ಲಿಸಬೇಕು.<br>ಇ) ಬಿಡ್‌ದಾರರು ಕಂಪನಿ / ವ್ಯವಹಾರ ಸಂಸ್ಥೆಯ ಹೆಸರಿನಲ್ಲಿ ಬಿಡ್ ಮಾಡಿದ್ದಲ್ಲಿ, ಕಂಪನಿಯು ಇಂಡಿಯನ್ ಕಂಪನೀಸ್ ಕಾಯ್ದೆಯಡಿಯಲ್ಲಿ ನೋಂದಣಿಯಾಗಿರುವ ದಾಖಲಾತಿಯನ್ನು ಸಲ್ಲಿಸಬೇಕು. | ಅ) ಕಂಪನಿ / ವ್ಯಕ್ತಿಯ ವಿಳಾಸ ದೃಢೀಕರಣ ಪತ್ರ (Voter ID, Aadhaar Card, Bank Passbook, Passport, etc)<br>ಆ) ಆದಾಯ ತೆರಿಗೆ ತೀರುವಳಿ ಪತ್ರ.<br>ಇ) ನಿಗದಿತ ಮಾಸಿಕ ಪರವಾನಗಿ ಶುಲ್ಕಕ್ಕಿಂತ ಹೆಚ್ಚಿನ ವಹಿವಾಟು ನಡೆಸಿರುವ ಬಗ್ಗೆ, 02 ವರ್ಷದ ವಾರ್ಷಿಕ ವಹಿವಾಟಿನ ದಾಖಲೆಗಳನ್ನು ಲೆಕ್ಕಪರಿಶೋಧಕರಿಂದ ದೃಢೀಕರಿಸಿ ನೀಡುವುದು.<br>ಈ) ಬಿಡ್‌ದಾರರು ಪಾಲುದಾರಿಕೆ ವ್ಯವಹಾರ ಸಂಸ್ಥೆಯನ್ನು ಹೊಂದಿದ್ದಲ್ಲಿ, ಭಾರತೀಯ ಪಾಲುದಾರಿಕೆ ಕಾಯ್ದೆಯಡಿಯಲ್ಲಿ ನೋಂದಣಿಯಾಗಿರುವ ದಾಖಲಾತಿ, ಬಿಡ್ ಸಹಿಗೊಳಿಸುವ ವ್ಯಕ್ತಿಯು ಪಾಲುದಾರಿಕೆಯ ಸಂಸ್ಥೆಯಲ್ಲಿ ವ್ಯವಸ್ಥಾಪಕ ಪಾಲುದಾರನಾಗಿರುವ ಬಗ್ಗೆ ದಾಖಲಾತಿಯನ್ನು ಸಲ್ಲಿಸಬೇಕು. ಪಾಲುದಾರಿಕೆಯಲ್ಲಿರುವ ಎಲ್ಲಾ ನಿರ್ದೇಶಕರು / ಪಾಲುದಾರರ ಪೂರ್ಣ ವಿಳಾಸದ ಮಾಹಿತಿಯನ್ನು ಸಲ್ಲಿಸಬೇಕು.<br>ಉ) ಬಿಡ್‌ದಾರರು ಕಂಪನಿ / ವ್ಯವಹಾರ ಸಂಸ್ಥೆಯ ಹೆಸರಿನಲ್ಲಿ ಬಿಡ್ ಮಾಡಿದ್ದಲ್ಲಿ, ಕಂಪನಿಯು ಇಂಡಿಯನ್ ಕಂಪನೀಸ್ ಕಾಯ್ದೆಯಡಿಯಲ್ಲಿ |

| | |
|---|---|
| ಈ) **ಬಿಡ್‌ದಾರರು ಕ.ರಾ.ರ.ಸಾ.ನಿಗಮ ಮತ್ತು ಇತರೆ ನಿಗಮಗಳಲ್ಲಿ** Defaulter **ಆಗದೆ ಇರುವ ಬಗ್ಗೆ ಹಾಗೂ ಕಪ್ಪುಪಟ್ಟಿಗೆ ಸೇರಿಲ್ಲದಿರುವ ಬಗ್ಗೆ ಸ್ವಯಂ–ದೃಢೀಕರಣ ಪತ್ರ**<br>ಉ) ಪಾನ್ ಕಾರ್ಡ್ ಸಲ್ಲಿಸುವುದು ಕಡ್ಡಾಯವಾಗಿರುತ್ತದೆ. | ನೋಂದಣಿಯಾಗಿರುವ ದಾಖಲಾತಿಯನ್ನು ಸಲ್ಲಿಸಬೇಕು.<br>ಊ) ವಹಿವಾಟಿಗೆ ಪೂರಕವಾಗಿ ಕಳೆದ 02 ವರ್ಷದ ಲಾಭ / ನಷ್ಟದ ಲೆಕ್ಕಾಚಾರದ ದಾಖಲೆಗಳು ಮತ್ತು ಬ್ಯಾಲೆನ್ಸ್ ಶೀಟ್ ಪ್ರತಿಗಳನ್ನು ಲೆಕ್ಕಪರಿಶೋಧಕರಿಂದ ದೃಢೀಕರಿಸಿ ನೀಡುವುದು.<br>ಋ) ಬಿಡ್‌ದಾರರು ಕ.ರಾ.ರ.ಸಾ.ನಿಗಮ ಮತ್ತು ಇತರೆ ನಿಗಮಗಳಲ್ಲಿ Defaulter ಆಗದೆ ಇರುವ ಬಗ್ಗೆ ಹಾಗೂ ಕಪ್ಪುಪಟ್ಟಿಗೆ ಸೇರಿಲ್ಲದಿರುವ ಬಗ್ಗೆ ಸ್ವಯಂ ದೃಢೀಕರಣ ಪತ್ರ |

1. ಸಂಧಾನದಲ್ಲಿ ಸಮರ್ಪಕ ದಾಖಲೆಗಳನ್ನು ಸಲ್ಲಿಸಿರುವ ಅರ್ಜಿದಾರರನ್ನು ಪರವಾನಗಿದಾರರನ್ನಾಗಿ ಆಯ್ಕೆ ಮಾಡಲಾಗುವುದು.
2. ಭಾರತ ಸರ್ಕಾರ / ಕರ್ನಾಟಕ ಸರ್ಕಾರ / ಕ.ರಾ.ರ.ಸಾ.ನಿಗಮವು ಆಗಿಂದಾಗ್ಗೆ ವಿಧಿಸುವ / ಕಾಲ ಕಾಲಕ್ಕೆ ಬದಲಾಗುವ ಷರತ್ತು / ನಿಬಂಧನೆಗಳಿಗೆ ಪರವಾನಗಿದಾರರು ಬದ್ಧರಾಗಿರಬೇಕು.

**ಪರವಾನಗಿ ಅವಧಿ:–**

ನಿಗಮದಲ್ಲಿನ ಮಳಿಗೆಗಳನ್ನು ಈ ಕೆಳಕಂಡಂತೆ ಪರವಾನಿಗೆ ನೀಡಲಾಗುವುದು.

| ಕ್ರ.ಸಂ. | ಮಳಿಗೆ ಮಾದರಿ/ಸ್ಥಳ | ಪರವಾನಗಿ ಅವಧಿ |
|---|---|---|
| 1 | ತೆರೆದ ಸ್ಥಳದಲ್ಲಿನ ಮಳಿಗೆಗಳು | 3 ವರ್ಷಗಳು |
| 2 | ಕಟ್ಟಿದ ಮಳಿಗೆಗಳು | 5 ವರ್ಷಗಳು |
| 3 | ಡಾರ್ಮಿಟರಿ & ಲಾಡ್ಜಿಂಗ್ / ಗಾರ್ಮೆಂಟ್/ ಕಛೇರಿ ಉದ್ದೇಶಕ್ಕಾಗಿ / ಮೊಬೈಲ್ ಟವರ್ಸ್ | 10 ವರ್ಷಗಳು |

1. ಉಪಹಾರಗೃಹಗಳ ಅವಧಿ:
   - ಪರವಾನಿಗೆಯನ್ನು ಮತ್ತೊಂದು ಅವಧಿಗೆ ಮಾತ್ರ (5+5 ವರ್ಷಗಳು) ನವೀಕರಣಕ್ಕೆ ಅವಕಾಶ ಕಲ್ಪಿಸಲಾಗಿದೆ.
   - ಉಪಹಾರ ಗೃಹದ ಪರವಾನಿಗೆದಾರರ ಮನವಿಯ ಮೇರೆಗೆ, ಪರವಾನಿಗೆ ಅವಧಿಯಲ್ಲಿನ ಉಪಹಾರ ಗೃಹದ ನಿರ್ವಹಣೆಯ ಗುಣಮಟ್ಟ ಮತ್ತು ಮಾಸಿಕ ಪರವಾನಿಗೆ ಶುಲ್ಕ ಪಾವತಿಯನ್ನು ಪರಿಗಣಿಸಿ, ಪರವಾನಿಗೆ ಶುಲ್ಕ ಪಾವತಿಯನ್ನು ಪರಿಗಣಿಸಿ, ಪರವಾನಿಗೆ ಶುಲ್ಕದಲ್ಲಿ 6ನೇ ವರ್ಷದಲ್ಲಿ ಶೇ.15 ರಷ್ಟು ಹಾಗೂ ತದನಂತರ ಪ್ರತಿವರ್ಷ ಶೆ.10 ರಷ್ಟು ಹೆಚ್ಚಳದ ಷರತ್ತೊಹೊಂದಿಗೆ 5 ವರ್ಷಗಳಿಗೆ ನವೀಕರಿಸಲಾಗುವುದು.
   - ಉಪಹಾರ ಗೃಹದ ಪರವನಿಗೆದಾರರು ನವೀಕರಣಕ್ಕೆ ಇಚ್ಚಿಸಿದಲ್ಲಿ 6 ತಿಂಗಳು ಮುಂಚಿತವಾಗಿ (ಟೆಂಡರ್ ಅಹ್ವಾನಿಸುವ ಮುಂಚೆ) ಮನವಿ ಸಲ್ಲಿಸಬೇಕು, ಕರಾರು ನವೀಕರಣದ ಬಗ್ಗೆ ತೀರ್ಮಾನದ ಹಕ್ಕನ್ನು ನಿಗಮವು ಕಾಯ್ದಿರಿಸಿದೆ.

**ಭದ್ರತಾ ಠೇವಣಿ: –**

1. ಕೆಳಕಂಡಂತೆ ನಿಗದಿತ ಭದ್ರತಾ ಠೇವಣಿ ಮೊತ್ತವನ್ನು ರಾಷ್ಟ್ರೀಕೃತ/ಶೆಡ್ಯೂಲ್ ಬ್ಯಾಂಕ್‌ನಿಂದ ಪಡೆದ ಡಿ.ಡಿ. / RTGS / NEFT ಮೂಲಕ ಪಾವತಿ ಮಾಡುವುದು.

| ಕ್ರ.ಸಂ. | ಪರವಾನಗಿ ಅವಧಿ | ಒಟ್ಟು ಪಾವತಿಸಬೇಕಿರುವ ಭದ್ರತಾ ಠೇವಣಿ |
|---|---|---|
| 1 | 3 ವರ್ಷ | ಅಂಗೀಕೃತ ಮಾಸಿಕ ಪರವಾನಗಿ ಶುಲ್ಕದ 6 ಪಟ್ಟು |
| 2 | 5 ವರ್ಷ | ಅಂಗೀಕೃತ ಮಾಸಿಕ ಪರವಾನಗಿ ಶುಲ್ಕದ 8 ಪಟ್ಟು |
| 3 | 10 ವರ್ಷ | ಅಂಗೀಕೃತ ಮಾಸಿಕ ಪರವಾನಗಿ ಶುಲ್ಕದ 10 ಪಟ್ಟು |

2. ಪರವಾನಗಿದಾರರು RTGS / NEFT ಮೂಲಕ ಪಾವತಿ ಮಾಡುವಾಗ ಬಸ್ ನಿಲ್ದಾಣ, ಮಳಿಗೆ ಸಂಖ್ಯೆ, ಪರವಾನಗಿದಾರರ ಹೆಸರನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.
3. ಭದ್ರತಾ ಠೇವಣಿ ಮೊತ್ತವನ್ನು ಡಿ.ಡಿ. ರೂಪದಲ್ಲಿ ಸಲ್ಲಿಸುವಾಗ Divisional Controller, K.S.R.T.C, Chkikmagaluru Division ರವರ ಪದನಾಮಕ್ಕೆ ಡಿ.ಡಿ.ಪಡೆದು ಈ ಕಛೇರಿಗೆ ಸಲ್ಲಿಸುವುದು.
4. ಭದ್ರತಾ ಠೇವಣಿಗೆ ಯಾವುದೇ ಬಡ್ಡಿಯನ್ನು ನೀಡಲಾಗುವುದಿಲ್ಲ.
5. ಆಯ್ಕೆಗೊಂಡ ಪರವಾನಗಿದಾರರ ಇ.ಎಂ.ಡಿ. ಮೊತ್ತವನ್ನು ಭದ್ರತಾ ಠೇವಣಿ ಮೊತ್ತಕ್ಕೆ ಹೊಂದಾಣಿಕೆ ಮಾಡಿಕೊಂಡು, ಉಳಿಕೆ ಭದ್ರತಾ ಠೇವಣಿ ಮೊತ್ತವನ್ನು ಪಾವತಿಸಿಕೊಳ್ಳಲಾಗುವುದು.
6. ಪರವಾನಗಿ ಅವಧಿ ಮುಕ್ತಾಯವಾದ ನಂತರ ನಿಗಮಕ್ಕೆ ಪಾವತಿಸಬೇಕಾದ ಬಾಕಿ ಶುಲ್ಕಗಳನ್ನು ಕಡಿತಗೊಳಿಸಿ ಉಳಿದ ಭದ್ರತಾ ಠೇವಣಿಯನ್ನು ಪರವಾನಗಿದಾರರಿಗೆ ಹಿಂತಿರುಗಿಸಲಾಗುವುದು.

**ಕರಾರು ಒಪ್ಪಂದ:–**

1. ಸಂಧಾನದಲ್ಲಿ ಆಯ್ಕೆಯಾದ ಬಿಡ್‌ದಾರರು, ಆಯ್ಕೆ ಪತ್ರ ತಲುಪಿದ ದಿನಾಂಕದಿಂದ 07 ದಿನಗಳೊಳಗಾಗಿ ನಿಗದಿತ ಭದ್ರತಾ ಠೇವಣಿ ಮತ್ತು ಒಂದು ತಿಂಗಳ ಮುಂಗಡ ಮಾಸಿಕ ಪರವಾನಗಿ ಶುಲ್ಕವನ್ನು ಪಾವತಿಸಿ, ಕರ್ನಾಟಕ ಸ್ಟ್ಯಾಂಪ್ ಕಾಯಿದೆ ಪ್ರಕಾರ ಸೂಕ್ತ ಮೌಲ್ಯದ ಛಾಪಾ ಕಾಗದದ ಮೇಲೆ ಕರಾರು ಒಪ್ಪಂದ ಮಾಡಿಕೊಳ್ಳಬೇಕು.
2. ಆಯ್ಕೆಯಾದ ಬಿಡ್‌ದಾರರು, ಆಯ್ಕೆ ಪತ್ರ ತಲುಪಿದ 07 ದಿನಗಳೊಳಗೆ ಕರಾರು ಒಪ್ಪಂದ ಮಾಡಿಕೊಳ್ಳುವಲ್ಲಿ ವಿಫಲರಾದಲ್ಲಿ, ಸದರಿ ಬಿಡ್‌ದಾರರ ಇ.ಎಂ.ಡಿ. ಮೊತ್ತವನ್ನು ನಿಗಮಕ್ಕೆ ಆದ ನಷ್ಟಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

**ಮಾಸಿಕ ಪರವಾನಗಿ ಶುಲ್ಕ ಮತ್ತು ಸರಕು & ಸೇವಾ ತೆರಿಗೆ** (GST) **ಪಾವತಿ:–**

1. ಪರವಾನಗಿದಾರರು ಕರಾರು ಒಪ್ಪಂದ ಪ್ರಾರಂಭದ ಮಾಹೆಯ ಮುಂಗಡ ಮಾಸಿಕ ಪರವಾನಗಿ ಶುಲ್ಕವನ್ನು ಡಿ.ಡಿ. ಮೂಲಕ ಭದ್ರತಾ ಠೇವಣಿ ಜೊತೆ ಸಲ್ಲಿಸುವುದು.
2. ಪರವಾನಗಿದಾರರು ಪ್ರತಿ ಮಾಹೆ 07 ನೇ ತಾರೀಖಿನೊಳಗಾಗಿ ಮಾಸಿಕ ಪರವಾನಗಿ ಶುಲ್ಕ ಮತ್ತು ಸರಕು & ಸೇವಾ ತೆರಿಗೆ ಶುಲ್ಕವನ್ನು, ಪ್ರಸ್ತುತ ಶೇ.18, ಮುಂಗಡವಾಗಿ ನಿಗಮಕ್ಕೆ ಪಾವತಿಸಬೇಕು.
3. ಪರವಾನಗಿದಾರರು GST ನೊಂದಣಿ ಮತ್ತು ಇದಕ್ಕೆ ಪೂರಕವಾದ ದಾಖಲೆಗಳನ್ನು ಲಭ್ಯವಿದ್ದಲ್ಲಿ ಈ ಕಚೇರಿಗೆ ಸಲ್ಲಿಸುವುದು.
4. ಮಾಸಿಕ ಪರವಾನಗಿ ಶುಲ್ಕವು ಪ್ರತಿ ವರ್ಷ ಶೇ.10 ರಷ್ಟು ಹೆಚ್ಚಳವಾಗುವುದು. ಇದಕ್ಕನುಗುಣವಾಗಿ ಸರಕು & ಸೇವಾ ತೆರಿಗೆಯು ಹೆಚ್ಚಳವಾಗುವುದು.

**ಕರಾರಿನ ಅವಧಿ ಮುಗಿಯುವ ದಿನ ಮಳಿಗೆಯನ್ನು/ತೆರೆದ ಸ್ಥಳಗಳಲ್ಲಿ ಸ್ಟ್ರಕ್ಚರ್‌ಗಳನ್ನು ತೆರವುಗೊಳಿಸಲು ವಿಳಂಭ ಮಾಡಿದ್ದಲ್ಲಿ ತೆಗೆದುಕೊಳ್ಳಬೇಕಾಗಿರುವ ಕ್ರಮದ ಬಗ್ಗೆ.**

| ಕ್ರ.ಸಂ | ವಿಳಂಬದ ದಿನಗಳು | ವಿಧಿಸಬೇಕಿರುವ ದಂಡದ ಮೊತ್ತ ಶೇ. ವಾರು |
|---|---|---|
| 1 | ಮಳಿಗೆಯನ್ನು ತೆರವುಗೊಳಿಸಲು 07 ದಿನಗಳವರೆಗಿನ ವಿಳಂಬಕ್ಕೆ | ಕೊನೆಯ ತಿಮಗಳ ಪರವಾನಗಿ ಶುಲ್ಕದ ಶೇ.25 ರಷ್ಟು ದಂಡ ಮತ್ತು ಅನ್ವಯಿಸುವ ತೆರಿಗೆಗಳನ್ನು ವಿಧಿಸಲಾಗುವುದು. |

| | | |
|---|---|---|
| 2 | ಮಳಿಗೆಯನ್ನು ತೆರವುಗೊಳಿಸಲು 07 ದಿನಗಳ ಮೇಲ್ಪಟ್ಟು, 15 ದಿನಗಳವರೆಗಿನ ವಿಳಂಬಕ್ಕೆ | ಕೊನೆಯ ತಿಂಗಳ ಪರವಾನಗಿ ಶುಲ್ಕದ ಶೇ.50 ರಷ್ಟು ದಂಡ ಮತ್ತು ಅನ್ವಯಿಸುವ ತೆರಿಗಳನ್ನು ವಿಧಿಸಲಾಗುವುದ. |
| 3 | ಮಳಿಗೆಯನ್ನು ತೆರವುಗೊಳಿಸಲು 15 ದಿನಗಳ ಮೇಲ್ಪಟ್ಟು, ಒಂದು ತಿಂಗಳವರೆಗಿನ ವಿಳಂಬಕ್ಕೆ | ಕೊನೆಯ ತಿಂಗಳ ಪೂರ್ಣ ಪರವಾನಗಿ ಶುಲ್ಕದಷ್ಟು ದಂಡ ಮತ್ತು ಅನ್ವಯಿಸುವ ತೆರಿಗೆಗಳು |

III. ಒಂದು ತಿಂಗಳೊಳಗಾಗಿ ಮಳಿಗೆಯಲ್ಲಿನ ವಸ್ತುಗಳನ್ನು ಹಾಗೂ ತೆರೆದ ಸ್ಥಳಗಳಲ್ಲಿನ (Structure) ಸ್ಟ್ರಕ್ಚರ್‌ನ್ನು ತೆರವುಗೊಳಿಸಲು ವಿಫಲರಾದಲ್ಲಿ ಅವುಗಳನ್ನು ಮುಟ್ಟುಗೋಲು ಹಾಕಿಕೊಂಡು ಪರವಾನಿಗೆದಾಶರರ ಖರ್ಚಿನಲ್ಲಿ ತೆರವುಗೊಳಿಸಲು/ವಿಲೇವಾರಿ ಮಾಢಲು ನಿಗಮದ ವತಿಯಿಂದ ಕ್ರಮಕೈಗೊಳ್ಳಲಾಗುವುದು.

IV. ಮಳಿಗೆಯಲ್ಲಿನ ವಸ್ತುಗಳನ್ನು ಮತ್ತು ತೆರೆದ ಸ್ಥಳಗಳಲ್ಲಿನ (Structure) ಸ್ಟ್ರಕ್ಚರ್ ತೆರವುಗೊಳಿಸಿರುವುದನ್ನು ಖಚಿತಪಡಿಸಿಕೊಂಡು, ಬರಬೇಕಾಗಿರುವ ಬಾಕಿ ಮೊತ್ತವನ್ನು ಹೊಂದಾಣಿಕೆ ಮಾಡಿದ ನಂತರ, ಭದ್ರತಾ ಠೇವಣಿಯನ್ನು ಹಿಂದಿರುಗಿಸಲಾಗುವುದು.

**<u>ವಿದ್ಯುಚ್ಛಕ್ತಿ ಹಾಗೂ ನೀರಿನ ಬಿಲ್ಲುಗಳ ಪಾವತಿ:-</u>**

1. ನಿಗಮದ ಕೊಳವೆ ಬಾವಿಗಳಿಂದ ನೀರಿನ ಸೌಲಭ್ಯವನ್ನು ಕಲ್ಪಿಸಿರುವಂತಹ ಮಳಿಗೆಗಳ ಪರವಾನಗಿದಾರರು ಮಾಸಿಕ ಪರವಾನಗಿ ಶುಲ್ಕದ ಶೇ.2 ರಷ್ಟು ಅಥವಾ ಕೊಳವೆ ಬಾವಿಯ ವಿದ್ಯುತ್ ಬಿಲ್ಲಿನ ಶೇ.50 ರಷ್ಟು, ಇದರಲ್ಲಿ ಯಾವುದು ಹೆಚ್ಚಿನದು, ಆ ಮೊತ್ತವನ್ನು ಪಾವತಿಸಬೇಕು.
2. ಒಂದು ವೇಳೆ ಮಳಿಗೆಗಳಿಗೆ ಜಲಮಂಡಳಿ / ಸಂಬಂಧಿಸಿದ ಇಲಾಖೆಗಳಿಂದ ಪ್ರತ್ಯೇಕವಾಗಿ ನೀರಿನ ಮೀಟರ್ ಅಳವಡಿಸಿದ್ದಲ್ಲಿ, ಅಂತಹ ಮಳಿಗೆಯ ಪರವಾನಗಿದಾರರು ಅನ್ವಯಿಸುವ ನೀರಿನ ಶುಲ್ಕವನ್ನು ಸಂಬಂಧಿಸಿದ ಇಲಾಖೆಗೆ ಪಾವತಿಸಬೇಕು.
3. ಪ್ರತಿ ಮಾಹೆಯ ವಿದ್ಯುಚ್ಛಕ್ತಿ ಹಾಗೂ ನೀರಿನ ಬಿಲ್ಲುಗಳನ್ನು ನಿಗದಿತ ಸಮಯದಲ್ಲಿ ಪಾವತಿಸಬೇಕು.
4. ಒಂದು ವೇಳೆ ನಿಗಮದ ವತಿಯಿಂದ ನೀರಿನ ಸರಬರಾಜು ಮಾಡಲು ಸಾಧ್ಯವಾಗದಿದ್ದಲ್ಲಿ, ಪರವಾನಗಿದಾರರು ತಮ್ಮ ಸ್ವಂತ ಖರ್ಚಿನಲ್ಲಿ ನೀರಿನ ವ್ಯವಸ್ಥೆಯನ್ನು ಮಾಡಿಕೊಳ್ಳಬೇಕಿರುತ್ತದೆ. ಸಂಸ್ಥೆಯು ಯಾವುದೇ ರೀತಿಯ ಭಾದ್ಯಸ್ಥರಲ್ಲ.

**<u>ಹೆಚ್ಚುವರಿ ಸ್ಥಳಾವಕಾಶ :-</u>**

1. ಪರವಾನಗಿದಾರರು ಸಂಧಾನ/ಕರಾರು ಒಪ್ಪಂದದಲ್ಲಿ ನಮೂದಿಸಿದ ಸ್ಥಳದ ವಿಸ್ತೀರ್ಣಕ್ಕಿಂತ ಆ ವಾಣಿಜ್ಯ ಮಳಿಗೆಗೆ ಹೊಂದಿಕೊಂಡಂತೆ ಇರುವ ಹೆಚ್ಚುವರಿ ಸ್ಥಳವನ್ನು ಅನಧಿಕೃತವಾಗಿ ಬಳಸಿಕೊಳ್ಳುವುದು ನಿಯಮ ಬಾಹಿರವಾಗಿರುತ್ತದೆ.

**<u>ಅನಧಿಕೃತವಾಗಿ ಹೆಚ್ಚುವರಿ ಸ್ಥಳಾವಕಾಶದ ಬಳಕೆ:-</u>**

1. ಪರವಾನಗಿದಾರರು ಅನಧಿಕೃತವಾಗಿ ಬಳಸಿದ ಹೆಚ್ಚುವರಿ ಸ್ಥಳಾವಕಾಶವನ್ನು ನೋಟಿಸ್ ನೀಡಿದ ಕೂಡಲೇ ತೆರವುಗೊಳಿಸಬೇಕು. ಇದಲ್ಲದೆ, ಪರವಾನಗಿದಾರರಿಗೆ ಕೆಳಕಂಡಂತೆ ದಂಡ ವಿಧಿಸಲಾಗುವುದು ಹಾಗೂ ಕರಾರನ್ನು ರದ್ದುಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

| | | |
|---|---|---|
| ಮೊದಲ ಬಾರಿಗೆ | ಉಪಯೋಗಿಸಿದ ಹೆಚ್ಚುವರಿ ಸ್ಥಳಕ್ಕೆ ಮಾಸಿಕ ಪರವಾನಗಿ ಶುಲ್ಕದ 3 ಪಟ್ಟು ಪ್ರೋರೇಟಾ ದರಕ್ಕನುಗುಣವಾಗಿ ದಂಡ ವಿಧಿಸಲಾಗುವುದು | ದಂಡವನ್ನು ಕನಿಷ್ಠ 1 ತಿಂಗಳು, ಗರಿಷ್ಠ ಉಪಯೋಗಿಸಿದ ಒಟ್ಟು ದಿನಗಳಿಗೆ ವಿಧಿಸಲಾಗುವುದು. |
| ಎರಡನೇ ಬಾರಿಗೆ ಹಾಗೂ ಪುನರಾವರ್ತನೆಗೊಂಡಲ್ಲಿ | ಉಪಯೋಗಿಸಿದ ಹೆಚ್ಚುವರಿ ಸ್ಥಳಕ್ಕೆ ಮಾಸಿಕ ಪರವಾನಗಿ ಶುಲ್ಕದ 5 ಪಟ್ಟು ಪ್ರೋರೇಟಾ ದರಕ್ಕನುಗುಣವಾಗಿ ದಂಡ ವಿಧಿಸಲಾಗುವುದು. ಇದಲ್ಲದೆ ಭದ್ರತಾ ಠೇವಣಿಯನ್ನು ಮುಟ್ಟುಗೋಲು ಹಾಕಿಕೊಂಡು, ಕರಾರನ್ನು ರದ್ದುಪಡಿಸುವ ಅಧಿಕಾರವನ್ನು ನಿಗಮವು ಹೊಂದಿರುತ್ತದೆ. | ದಂಡವನ್ನು ಕನಿಷ್ಠ 1 ತಿಂಗಳು, ಗರಿಷ್ಠ ಉಪಯೋಗಿಸಿದ ಒಟ್ಟು ದಿನಗಳಿಗೆ ವಿಧಿಸಲಾಗುವುದು. |

2. ಪರವಾನಗಿ ಪಡೆದ ಮಳಿಗೆಗಳಲ್ಲಿ ಸಂಧಾನದಲ್ಲಿ ನಿಗದಿಪಡಿಸಿದ ವ್ಯವಹಾರವನ್ನು ಹೊರತುಪಡಿಸಿ ಇತರೆ ವ್ಯವಹಾರವನ್ನು ನಡೆಸಲು ಅವಕಾಶವಿರುವುದಿಲ್ಲ.
3. ಜನರಲ್ ಸ್ಟಾಲ್‌ಗಳಿಗೆ ಆಯ್ಕೆಯಾದ ಪರವಾನಗಿದಾರರು, ಈ ಕೆಳಗಿನ ಪಟ್ಟಿಯಲ್ಲಿ ನಮೂದಿಸಿದ ವಸ್ತು / ಪದಾರ್ಥಗಳನ್ನು ಮಾರಾಟ ಮಾಡಬೇಕಿರುತ್ತದೆ. ಮಾರಾಟ ಮಾಡಲು ನಿಷೇಧಿಸಿದ ವಸ್ತು / ಪದಾರ್ಥಗಳನ್ನು ಮಾರಾಟ ಮಾಡುವಂತಿಲ್ಲ. ಸದರಿ ಪಟ್ಟಿಯ ಹೊರತಾಗಿ ಇರುವ ವಸ್ತುಗಳನ್ನು ಮಾರಾಟ ಮಾಡಬೇಕಿದ್ದಲ್ಲಿ, ಪರವಾನಗಿದಾರರು ಕರಾರಿಗೂ ಮುಂಚಿತವಾಗಿ ನಿಗಮದಿಂದ ಪೂರ್ವಾನುಮತಿ ಪಡೆಯಬೇಕಿರುತ್ತದೆ.

| **ಜನರಲ್ ಮಳಿಗೆಯಲ್ಲಿ ಮಾರಾಟ ವಾಡಬಹುದಾದ ವಸ್ತು / ಪದಾರ್ಥಗಳು** | **ಜನರಲ್ ಮಳಿಗೆಯಲ್ಲಿ ಮಾರಾಟ ಮಾಡಲು ನಿಷೇಧಿಸಿರುವ ವಸ್ತು / ಪದಾರ್ಥಗಳು** |
|---|---|
| ಪುಸ್ತಕ / ದಿನಪತ್ರಿಕೆ / ನಿಯತಕಾಲಿಕೆಗಳು ಮತ್ತು ಸ್ಟೇಷನರಿ ವಸ್ತುಗಳು, ಮಾರ್ಜಕ / ಸಾಬೂನುಗಳು ಹಣ್ಣು / ಹೂಗಳು, ಜೆರಾಕ್ಸ್, ಪ್ಯಾಕ್ ಆಗಿರುವ ಬಿಸ್ಕೆಟ್ಸ್ / ಜ್ಯೂಸ್, ಬೇಕರಿ ತಿನಿಸುಗಳು, ನೀರಿನ ಬಾಟಲ್, ಮೊಬೈಲ್ ಕರೆನ್ಸಿ, ಸೌಂದರ್ಯವರ್ಧಕಗಳು, ಅಲಂಕಾರಿಕ ವಸ್ತುಗಳು, ಕೊಡುಗೆ ನೀಡುವ ವಸ್ತುಗಳು, ಫ್ಯಾನ್ಸಿ ಸ್ಟೋರ್‌ನಲ್ಲಿ ಮಾರಾಟ ಮಾಡುವ ವಸ್ತುಗಳು, **ಈ ಮಳಿಗೆಗಳಲ್ಲಿ ಗ್ಯಾಸ್ / ಸ್ಟೌವ್ ಬಳಕೆಗೆ ಅವಕಾಶವಿಲ್ಲ.** | ಬೇಯಿಸಿದ ಪದಾರ್ಥಗಳಾದ ಕಾಫಿ, ಟೀ, ಉಪಹಾರ, ಊಟ, ಹಾಲು ಇತ್ಯಾದಿಗಳು, ಔಷಧಿಗಳು, ದೂರವಾಣಿ ಬೂತ್, ನಾಣ್ಯ ಚಾಲಿತ ಮಾನವ ತೂಕದ ಯಂತ್ರ, ಕಾನೂನು ಬಾಹಿರವಾಗಿರುವ ಪಟಾಕಿ, ಗನ್ನುಗಳು, ಸಿಡಿಮದ್ದುಗಳು, ತಂಬಾಕುಯುಕ್ತ ಪದಾರ್ಥಗಳು, ಮದ್ಯದ ಮಾರಾಟ, ಸೀಮೆಎಣ್ಣೆ, ಡೀಸೆಲ್, ಪೆಟ್ರೋಲ್ & ಗ್ಯಾಸ್, ಗ್ಯಾಸ್ ಸಿಲಿಂಡರ್, ಟ್ರಾವೆಲ್ / ಟ್ರಾನ್ಸ್‌ಪೋರ್ಟ್ ಏಜೆನ್ಸಿ, ಟಿಕೆಟ್ ಬುಕಿಂಗ್, ಇತ್ಯಾದಿ ಕಾನೂನು ಮತ್ತು ನಿಗಮದ ವತಿಯಿಂದ ನಿಷೇಧಿಸಲ್ಪಟ್ಟ ಹಾಗೂ ಮುಂದೆ ನಿಷೇಧಿಸಲ್ಪಡುವ ವಸ್ತುಗಳು. |

4. ವಾಣಿಜ್ಯ ಮಳಿಗೆಗಳಲ್ಲಿ ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ ನಿಷೇದಿಸಲಾಗಿರುತ್ತದೆ.
5. ಔಷಧಿ ಮಳಿಗೆಗಳಿಗೆ ಭಾಗವಹಿಸುವ ಅರ್ಜಿದಾರರು ಔಷಧಿ ಮಳಿಗೆ ನಡೆಸಲು ಅವಶ್ಯವಿರುವ ಫಾರ್ಮಸಿ ವಿದ್ಯಾರ್ಹತೆಯನ್ನು (D.Pharma / B.Pharma) ಮತ್ತು ಔಷಧ ನಿಯಂತ್ರಣ ಪ್ರಾಧಿಕಾರದಿಂದ ಔಷಧಿಗಳನ್ನು ಮಾರಾಟ ಮಾಡಲು ಅನುಮತಿ ಪಡೆದಿರುವ ಪ್ರಮಾಣ ಪತ್ರವನ್ನು (Drugs Sales Registration Certification from Drug Control Authority) ಕಡ್ಡಾಯವಾಗಿ ಹೊಂದಿರಬೇಕು. ಸದರಿ ದಾಖಲೆಗಳ ಪ್ರತಿಯನ್ನು ಟೆಂಡರ್‌ನಲ್ಲಿ ಅಪ್‌ಲೋಡ್ ಮಾಡಬೇಕು ಹಾಗೂ ಅಗತ್ಯ ಅನುಮತಿಯನ್ನು ವಿವಿಧ ಸರ್ಕಾರಿ ಇಲಾಖೆಯಿಂದ ಪಡೆಯುವುದು ಪರವಾನಗಿದಾರರ ಜವಾಬ್ದಾರಿಯಾಗಿರುತ್ತದೆ.

**<u>ನಿಗದಿತ ದರದಲ್ಲಿ ಮಾರಾಟ</u>** (MRP rate):-

1. ವಾಣಿಜ್ಯ ಮಳಿಗೆಗಳಲ್ಲಿ ಪರವಾನಗಿದಾರರು ಮಾರಾಟ ಮಾಡುವ ವಸ್ತುಗಳನ್ನು, ಅವುಗಳ ಮೇಲೆ ನಮೂದಿಸಲಾದ ಗರಿಷ್ಠ ಮೊತ್ತಕ್ಕೆ/MRP (Maximum Retail Price) ಮೀರದಂತೆ ಮಾರಾಟ ಮಾಡಬೇಕು. ವಸ್ತುಗಳನ್ನು ಹೆಚ್ಚಿನ ದರದಲ್ಲಿ ಮಾರಾಟ ಮಾಡುತ್ತಿರುವುದು ನಿಗಮದ ಗಮನಕ್ಕೆ ಬಂದಲ್ಲಿ, ಅಂತಹ ಪರವಾನಗಿದಾರರಿಗೆ ಮೊದಲ ಪ್ರಕರಣಕ್ಕೆ ರೂ.500/–, 2ನೇ ಪ್ರಕರಣಕ್ಕೆ ರೂ.1,000/– ಮತ್ತು 3ನೇ ಪ್ರಕರಣಕ್ಕೆ ರೂ.2,000/– ದಂಡ ವಿಧಿಸಲಾಗುವುದು. ಇದು ಪುನರಾವರ್ತನೆಗೊಂಡಲ್ಲಿ, ರೂ.2,000/– ದಂಡ ವಿಧಿಸುವ ಅಥವಾ ಕರಾರನ್ನು ರದ್ದುಪಡಿಸುವ ಅಧಿಕಾರವನ್ನು ನಿಗಮವು ಹೊಂದಿರುತ್ತದೆ.

2. ವಾಣಿಜ್ಯ ಮಳಿಗೆಗಳಲ್ಲಿ ಪರವಾನಿಗೆದಾರರು ನಿಗದಿತ ವಸ್ತುಗಳನ್ನು ಹೊರತುಪಡಿಸಿ, ಇತರೆ ವಸ್ತುಗಳನ್ನು ಮಾರಾಟ ಮಾಡುತ್ತಿರುವುದು ನಿಗಮದ ಗಮನಕ್ಕೆ ಬಂದಲ್ಲಿ ಅಂತಹ ಪರವಾನಿಗೆದಾರರಿಗೆ ಮೊದಲನೇ ಬಾರಿ ರೂ.1,000/- ದಂಡ, 2ನೇ ಬಾರಿ ರೂ.2,000/- ದಂಡ ಮತ್ತು 3ನೇ ಬಾರಿ ಅಥವಾ ತದನಂಥರ ರೂ.5,000/- ದಂಡ ವಿಧಿಸುವ ಅಥವಾ ಕರಾರನ್ನು ರದ್ದುಪಡಿಸುವ ಅಧಿಕಾರವನ್ನು ನಿಗಮವು ಹೊಂದಿರುತ್ತದೆ.

**ದ್ವಿಚಕ್ರ / ಕಾರು ವಾಹನ ನಿಲುಗಡೆ ಶುಲ್ಕ:-**

6. ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರ ಅನುಕೂಲಕ್ಕಾಗಿ ದ್ವಿಚಕ್ರ ವಾಹನ ನಿಲ್ದಾಣ ಹಾಗೂ ಕಾರು ನಿಲ್ದಾಣದ ವ್ಯವಸ್ಥೆ ಕಲ್ಪಿಸಲಾಗಿದ್ದು, ವಾಹನ ನಿಲುಗಡೆ ಪರವಾನಗಿ ಪಡೆದ ಪರವಾನಗಿದಾರರು ಈ ಕೆಳಕಂಡಂತೆ ನಿಲುಗಡೆ ಶುಲ್ಕಗಳನ್ನು ವಿಧಿಸಬೇಕಿರುತ್ತದೆ.

**ಇತರೆ ಜಿಲ್ಲಾ ಕೇಂದ್ರ ಬಸ್ ನಿಲ್ದಾಣಗಳ ಪಾರ್ಕಿಂಗ್ ದರಗಳು:**

| ವಾಹನದ ವಿಧ | ದರ (ರೂ.ಗಳಲ್ಲಿ) | | | | | |
|---|---|---|---|---|---|---|
| ಸಮಯ (ಗಂಟೆಗಳಲ್ಲಿ) | 0-2 | 2-4 | 4-8 | 8-12 | 12-24 | 24 ಗಂಟೆಗಳ ಮೇಲ್ಪಟ್ಟು |
| ದ್ವಿಚಕ್ರ ವಾಹನಗಳು | 5/- | 10/- | 15/- | 20/- | 25/ | ಪ್ರತಿ ದಿನಕ್ಕೆ ರೂ.25/- |
| ಕಾರು | 10/- | 20/- | 30/- | 40/- | 50/- | ಪ್ರತಿ ದಿನಕ್ಕೆ ರೂ.50/- |

**ತಾಲ್ಲೂಕು / ಇತರೆ ಬಸ್ ನಿಲ್ದಾಣಗಳ ಪಾರ್ಕಿಂಗ್ ದರಗಳು:**

| ವಾಹನದ ವಿಧ | ದರ (ರೂ.ಗಳಲ್ಲಿ) | | | | | |
|---|---|---|---|---|---|---|
| ಸಮಯ (ಗಂಟೆಗಳಲ್ಲಿ) | 0-2 | 2-4 | 4-8 | 8-12 | 12-24 | 24 ಗಂಟೆಗಳ ಮೇಲ್ಪಟ್ಟು |
| ದ್ವಿಚಕ್ರ ವಾಹನಗಳು | 5/- | 5/- | 10/- | 15/- | 20/- | ಪ್ರತಿ ದಿನಕ್ಕೆ ರೂ.20/- |
| ಕಾರು | 10/- | 10/- | 20/- | 30/- | 40/- | ಪ್ರತಿ ದಿನಕ್ಕೆ ರೂ.40/- |

7. ಒಬ್ಬ ಗ್ರಾಹಕರು ಮೂರು (03) ದಿನಗಳ ಮೇಲ್ಪಟ್ಟು ನಿರಂತರವಾಗಿ ವಾಹನವನ್ನು ಪಾರ್ಕಿಂಗ್ ಮಾಡಲು ಅವಕಾಶವಿರುವುದಿಲ್ಲ.
8. ಸೈಕಲ್ / ಸ್ಕೂಟರ್ ನಿಲ್ದಾಣ (ದ್ವಿಚಕ್ರ ವಾಹನ ನಿಲ್ದಾಣ) ಮತ್ತು ಕಾರು ನಿಲ್ದಾಣದಲ್ಲಿ ವಾಹನಗಳ ನಿಲುಗಡೆಗೆ ನಿಗದಿಪಡಿಸಿದ ದರಗಳನ್ನು ಮಾತ್ರ ಪಡೆದುಕೊಳ್ಳುವುದು. ಒಂದು ವೇಳೆ ನಿಗದಿತ ದರಕ್ಕಿಂತ ಹೆಚ್ಚಿನ ದರಗಳನ್ನು ಪರವಾನಗಿದಾರರು ಪಡೆಯುತ್ತಿರುವುದು ನಿಗಮದ ಗಮನಕ್ಕೆ ಬಂದಲ್ಲಿ, ಅಂತಹ ಪರವಾನಗಿದಾರರಿಗೆ ಮೊದಲ ಐದು(5) ಪ್ರಕರಣಕ್ಕೆ ರೂ.500/-, ನಂತರದ ಐದು (5) ಪ್ರಕರಣಕ್ಕೆ ರೂ.1,000/-ತದ ನಂತರದ ಪ್ರಕರಣಗಳು ದಾಖಲಾದಲ್ಲಿ ಭದ್ರತಾ ಠೇವಣಿಯನ್ನು ಮುಟ್ಟುಗೋಲು ಹಾಕಿಕೊಂಡು ಕರಾರು ಒಪ್ಪಂದವನ್ನು ರದ್ದುಪಡಿಸಿ, ಕಪ್ಪು ಪಟ್ಟಿಗೆ ಸೇರಿಸಲಾಗುವುದು. 3.
9. ಅಂಗವಿಕಲರ ದ್ವಿಚಕ್ರ ಮತ್ತು ತ್ರಿಚಕ್ರ ವಾಹನಗಳಿಗೆ ನಿಲ್ದಾಣದಲ್ಲಿ ಪಾರ್ಕಿಂಗ್ ಮಾಡಲು ಲಭ್ಯವಿರುವ ಸ್ಥಳದಲ್ಲಿ ಕನಿಷ್ಠ ಎರಡು ದ್ವಿಚಕ್ರ/ತ್ರಿಚಕ್ರ /ಕಾರನ್ನು ಅಥವಾ ಲಭ್ಯವಿರುವ ಪಾರ್ಕಿಂಗ್ ಸ್ಥಳದಲ್ಲಿ ಶೇ.2 ರಷ್ಟನ್ನು ಅಂಗವಿಕಲರ ವಾಹನಗಳನ್ನು ಉಚಿತವಾಗಿ ನಿಲ್ಲಿಸಲು ಸ್ಥಳಾವಕಾಶ ಮಾಡಿಕೊಡುವುದು.
10. ಸೈಕಲ್ / ಸ್ಕೂಟರ್ ನಿಲ್ದಾಣ (ದ್ವಿಚಕ್ರ ವಾಹನ ನಿಲ್ದಾಣ) ಮತ್ತು ಕಾರು ನಿಲ್ದಾಣದಲ್ಲಿ ವಾಹನಗಳ ಪರವಾನಗಿದಾರರು ಪರವಾನಗಿ ಶುಲ್ಕದ ಮೇಲೆ ಸರ್ಕಾರ ನಿಗದಿಪಡಿಸಿರುವ/ನಿಗದಿಪಡಿಸುವ ಟಿ.ಸಿ.ಎಸ್ (Tax Collected on Source) (ಪ್ರಸ್ತುತ ಶೇಖಡಾ 2 ರಷ್ಟು) ಶುಲ್ಕವನ್ನು ಪಾವತಿಸುವುದು.

**ಲಗೇಜ್/ ಕ್ಲೋಕ್ ರೂಮ್ ದರಗಳು:-**

ಬಸ್ ನಿಲ್ದಾಣಗಳಲ್ಲಿ ಲಗೇಜ್/ಕ್ಲೋಕ್ ರೂಮ್‌ಗಳಿಗೆ ಪರವಾನಗಿ ಪಡೆದ ಪರವಾನಗಿದಾರರು ಈ ಕೆಳಕಂಡಂತೆ ನಿಬಂಧನೆಗೊಳಪಟ್ಟು ಗ್ರಾಹಕರಿಗೆ ದರಗಳನ್ನು ವಿಧಿಸಬೇಕಾಗಿರುತ್ತದೆ.

13. ಸಾರ್ವಜನಿಕ ಪ್ರಯಾಣಿಕರ ವಸ್ತುಗಳನ್ನು ಸುರಕ್ಷಿತವಾಗಿ ಲಗೇಜ್/ಕ್ಲೋಕ್ ರೂಂಗಳಲ್ಲಿ ಇಡಬಹುದಾಗಿರುತ್ತದೆ.
14. ಈ ಸಂಬಂಧ ಪರವಾನಗಿದಾರರು ರಸೀದಿಯನ್ನು ಪ್ರಯಾಣಿಕರಿಗೆ ನೀಡಬೇಕಿರುತ್ತದೆ.
15. ಸರಿಯಾಗಿ ಪ್ಯಾಕ್ ಮಾಡದ ವಸ್ತುಗಳು / ಲಾಕ್‌ಮಾಡದ ಟ್ರಂಕ್ / ಸೂಟ್ ಕೇಸ್‌ಗಳು, ಕೆಟ್ಟುಹೋಗುವ ವಸ್ತುಗಳಾದ ತರಕಾರಿ, ಮೀನು, ಮಾಂಸ, ಸ್ಫೋಟಕ ವಸ್ತುಗಳು, ಜ್ವಾಲೆ ಎಬ್ಬಿಸುವ ವಸ್ತುಗಳು, ನಿಷೇಧಿತ ವಸ್ತುಗಳು ಹಾಗೂ ಪ್ರಾಣಿಗಳಾದ ನಾಯಿ, ಮೊಲ ಇತ್ಯಾದಿಗಳನ್ನು ಕ್ಲೋಕ್ ರೂಂನಲ್ಲಿ ಪಡೆಯುವಂತಿಲ್ಲ, ಇದು ನಿಯಮ ಬಾಹಿರವಾಗಿರುತ್ತದೆ.
16. ಕ್ಲೋಕ್ ರೂಂ / ಲಗೇಜ್ ರೂಂನ ಪರವಾನಗಿದಾರರು ಅಗತ್ಯ ದಾಖಲಾತಿಯನ್ನು ನಿರ್ವಹಿಸಿ, ವಸ್ತುಗಳನ್ನು ಠೇವಣಿ ಇಡುವವರ ವಿವರಗಳನ್ನು ದಾಖಲಿಸುವುದು. ನಿಗಮದ ಅಧಿಕಾರಿಗಳು / ಬಸ್ ನಿಲ್ದಾಣದ ಅಧಿಕಾರಿಗಳು ಕೇಳಿದಲ್ಲಿ, ಸದರಿ ದಾಖಲಾತಿಯನ್ನು ತೋರಿಸತಕ್ಕದ್ದು.
17. ಬಸ್ ನಿಲ್ದಾಣಗಳಲ್ಲಿರುವ ಕ್ಲೋಕ್ ರೂಂ/ಲಗೇಜ್ ರೂಂನಲ್ಲಿ ಪರವಾನಗಿದಾರರು ಗ್ರಾಹಕರಿಂದ ಪಡೆಯಬೇಕಿರುವ ದರಗಳ ವಿವರಗಳು ಈ ಕೆಳಕಂಡಂತಿವೆ.

| ಕ್ರ. ಸಂ. | ವಿವರಗಳು | ವಿಧಿಸಬೇಕಾದ ದರ | |
|---|---|---|---|
| | | ಪ್ಯಾಕೇಜ್‌ಗೆ (ರೂ.) | ಲಾಕರ್ ವ್ಯವಸ್ಥೆಗೆ (ರೂ.) |
| 1 | 30 ಕೆ.ಜಿ.ವರೆಗೆ, 12 ಗಂಟೆಗಳ ಅವಧಿಗೆ (ಸೂಟ್‌ಕೇಸ್, ಟ್ರಂಕ್, ಹಾಸಿಗೆ ಇತ್ಯಾದಿ) | 5/- | 10/- |
| 2 | ಮುಂದಿನ 12 ಗಂಟೆಗಳು ಅಥವಾ ಭಾಗಶಃ ಅವಧಿಗೆ | 10/- | 15/- |
| 3 | ನಂತರದ ಪ್ರತಿ 12 ಗಂಟೆಗಳಿಗೆ | 15/- | 20/- |

18. ಮೂವತ್ತು (30) ಕೆ.ಜಿ.ವರೆಗಿನ ಪ್ಯಾಕೇಜ್‌ಗಳನ್ನು ಮಾತ್ರ ಸುರಕ್ಷಿತವಾಗಿಡಲು ಪರವಾನಗಿದಾರರು ಪಡೆಯಬೇಕು.
19. ಠೇವಣಿ ಇರಿಸಿರುವ ವಸ್ತುಗಳು 15 ದಿನಗಳ ಅವಧಿಯಲ್ಲಿ ವಾಪಸ್ ಪಡೆಯದಿದ್ದಲ್ಲಿ, ವಾರಸುದಾರರಿಲ್ಲದ ಸ್ವತ್ತು ಎಂದು ಪರಿಗಣಿಸಿ ಬಸ್ ನಿಲ್ದಾಣದ ಅಧಿಕಾರಿಯವರ / ಸಂಬಂಧಿಸಿದ ಘಟಕ ವ್ಯವಸ್ಥಾಪಕರ ವಶಕ್ಕೆ ನೀಡುವುದು.
20. ಪರವಾನಗಿದಾರರು ಠೇವಣಿ ಇರಿಸುವ ವಸ್ತುಗಳಿಗೆ ಬೆಂಕಿ ತಗುಲದಂತೆ ಅಗ್ನಿರಕ್ಷಕ ಉಪಕರಣಗಳ ವ್ಯವಸ್ಥೆ ಮಾಡಿಕೊಳ್ಳುವುದು.
21. ವಿಭಾಗೀಯ ಕೇಂದ್ರ ಸ್ಥಳಗಳಲ್ಲಿರುವ ಬಸ್ ನಿಲ್ದಾಣದಲ್ಲಿನ ಪರವಾನಗಿದಾರರು ಲಗೇಜ್ / ಕ್ಲೋಕ್ ರೂಂಗಳನ್ನು ದಿನಪೂರ್ತಿ, ಅಂದರೆ ಸದರಿ ಬಸ್ ನಿಲ್ದಾಣದಲ್ಲಿ ಮೊದಲ ಅನುಸೂಚಿ ಆಚರಣೆಯ 30 ನಿಮಿಷಗಳ ಮುಂಚಿತವಾಗಿ ಹಾಗೂ ಕೊನೆಯ ಅನುಸೂಚಿ ಆಚರಣೆಯ 30 ನಿಮಿಷದ ನಂತರದ ಸಮಯದವರೆಗೆ ತೆರೆದಿಡತಕ್ಕದ್ದು.
22. ಕ್ಲೋಕ್ ರೂಂನಲ್ಲಿ ಠೇವಣಿ ಇಡಬಹುದಾದ / ನಿಷೇಧಿತ ವಸ್ತುಗಳು, ದರಗಳು, ವಸ್ತುಗಳ ತೂಕ ಇತ್ಯಾದಿ ವಿವರಗಳನ್ನು, ಕ್ಲೋಕ್ ರೂಂ ಮುಂದುಗಡೆ ಸಾರ್ವಜನಿಕ ಪ್ರಯಾಣಿಕರು ವೀಕ್ಷಿಸಲು ಪ್ರದರ್ಶಿಸತಕ್ಕದ್ದು.
23. ಪ್ರಯಾಣಿಕರು ಠೇವಣಿ ಇಡುವ ವಸ್ತುಗಳಿಗೆ ಪರವಾನಗಿದಾರರು ಜವಾಬ್ದಾರರಾಗಿದ್ದು, ಠೇವಣಿ ಇಡುವ ವಸ್ತುಗಳು ಕಳವು / ಹಾನಿಗೊಂಡಲ್ಲಿ, ರೂ.1,000/- ರವರೆಗೆ ಪರಿಹಾರ ನೀಡುವುದಾಗಿ ಗ್ರಾಹಕರಿಗೆ ನೀಡುವ ರಸೀದಿಯಲ್ಲಿ ಮುದ್ರಿಸುವುದು ಹಾಗೂ ಅದರಂತೆ ಕ್ರಮ ವಹಿಸುವುದು.

24. ಪರವಾನಗಿದಾರರು ನಿಗದಿಪಡಿಸಿದ ದರಗಳನ್ನು ಮಾತ್ರ ಪಡೆದುಕೊಳ್ಳುವುದು. ಒಂದು ವೇಳೆ ನಿಗದಿತ ದರಕ್ಕಿಂತ ಹೆಚ್ಚಿನ ದರಗಳನ್ನು ಪರವಾನಗಿದಾರರು ಪಡೆಯುತ್ತಿರುವುದು ನಿಗಮದ ಗಮನಕ್ಕೆ ಬಂದಲ್ಲಿ, ಅಂತಹ ಪರವಾನಗಿದಾರರಿಗೆ ಮೊದಲ ಪ್ರಕರಣಕ್ಕೆ ರೂ.500/-, 2ನೇ ಪ್ರಕರಣಕ್ಕೆ ರೂ.1,000/- ಮತ್ತು 3ನೇ ಪ್ರಕರಣಕ್ಕೆ ರೂ.2,000/- ದಂಡ ವಿಧಿಸುವುದು. ಇದು ಪುನರಾವರ್ತನೆಗೊಂಡಲ್ಲಿ ರೂ.2,000/- ದಂಡ ವಿಧಿಸುವ ಅಥವಾ ಕರಾರನ್ನು ರದ್ದುಪಡಿಸುವ ಅಧಿಕಾರವನ್ನು ನಿಗಮವು ಹೊಂದಿರುತ್ತದೆ.

**ಕರಾರು ರದ್ಧತಿಯ ಷರತ್ತುಗಳು:-**

6. ಯಾವುದೇ ಕಾರಣ ನೀಡದೇ, 4 ತಿಂಗಳ ನೋಟಿಸ್ ನೀಡಿ ಮಳಿಗೆಯ ಪರವಾನಗಿಯನ್ನು ರದ್ದುಪಡಿಸಲು ನಿಗಮವು ಅಧಿಕಾರವನ್ನು ಹೊಂದಿರುತ್ತದೆ.
7. ಪರವಾನಗಿ ಪಡೆದ ಅವಧಿಯಿಂದ ಒಂದು ವರ್ಷದ ಒಳಗೆ ಪರವಾನಗಿದಾರರು, 6 ತಿಂಗಳ ಮಾಸಿಕ ಪರವಾನಗಿ ಶುಲ್ಕವನ್ನು ಮುಂಗಡವಾಗಿ ಪಾವತಿಸಿ, ತಮ್ಮ ಪರವಾನಗಿಯನ್ನು ರದ್ದುಪಡಿಸಿಕೊಳ್ಳಬಹುದು.
8. ಒಂದು ವರ್ಷದ ನಂತರ ಪರವಾನಗಿಯನ್ನು ರದ್ದುಪಡಿಸಿಕೊಳ್ಳಲು ಪರವಾನಗಿದಾರರು ಇಚ್ಛಿಸಿದಲ್ಲಿ, 4 ತಿಂಗಳ ಮಾಸಿಕ ಪರವಾನಗಿ ಶುಲ್ಕವನ್ನು ಮುಂಗಡವಾಗಿ ನಿಗಮಕ್ಕೆ ಪಾವತಿಸಿ, ತಮ್ಮ ಪರವಾನಗಿಯನ್ನು ರದ್ದುಪಡಿಸಿಕೊಳ್ಳಬಹುದು.
9. ಮಾಸಿಕ ಪರವಾನಗಿ ಶುಲ್ಕ, ಸರಕು & ಸೇವಾ ತೆರಿಗೆ ಮತ್ತು ಇತರೆ ಶುಲ್ಕಗಳನ್ನು ಸತತವಾಗಿ 2 ತಿಂಗಳು ಪಾವತಿಸದೇ ಬಾಕಿ ಉಳಿಸಿಕೊಂಡಲ್ಲಿ, ಅಂತಹ ಮಳಿಗೆಗಳ ಪರವಾನಗಿದಾರರ ಪರವಾನಗಿಯನ್ನು ನಿಗಮದ ವತಿಯಿಂದ ರದ್ದುಪಡಿಸಿ, ಪರವಾನಗಿದಾರರು ನಿಗಮದಲ್ಲಿಟ್ಟಿರುವ ಭದ್ರತಾ ಠೇವಣಿಯನ್ನು ಮುಟ್ಟುಗೋಲು ಹಾಕಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದು.
10. ಬಸ್ ನಿಲ್ದಾಣಗಳ ನವೀಕರಣ ಕಾಮಗಾರಿ / ಆವರಣವನ್ನು ಮೇಲ್ದರ್ಜೇಗೇರಿಸುವ / ದುರಸ್ಥಿ ಕಾರ್ಯಗಳನ್ನು ಕೈಗೆತ್ತಿಕೊಳ್ಳುವ ಸಮಯದಲ್ಲಿ, ನಿಗಮವು ಪರವಾನಗಿದಾರರಿಗೆ ಒಂದು ತಿಂಗಳು ಮುಂಗಡ ನೋಟೀಸ್‌ನ್ನು ಜಾರಿ ಮಾಡಿ ಪರವಾನಗಿಯನ್ನು ರದ್ದುಪಡಿಸಬಹುದು.

**ಬಿಡ್‌ದಾರರ / ಪರವಾನಗಿದಾರರ ಹೆಸರನ್ನು ಕಪ್ಪುಪಟ್ಟಿಗೆ ಸೇರಿಸುವ ಸಂದರ್ಭಗಳು:-**

6. ಟೆಂಡರ್‌ನಲ್ಲಿ ಅರ್ಹಗೊಳ್ಳುವ ಸಲುವಾಗಿ ಬಿಡ್‌ದಾರರು / ಪರವಾನಗಿದಾರರು ಸಲ್ಲಿಸಿರುವ ದಾಖಲೆಗಳು ಯಾವುದೇ ಹಂತದಲ್ಲಿ ನೈಜತೆಯಿಂದ ಕೂಡಿಲ್ಲದಿರುವುದು ಕಂಡುಬಂದಲ್ಲಿ, ಅಂತಹ ಬಿಡ್‌ದಾರರ ಆಯ್ಕೆ / ಪರವಾನಗಿದಾರರ ಪರವಾನಗಿಯನ್ನು ರದ್ದುಪಡಿಸಿ, ನಿಗಮದಲ್ಲಿಟ್ಟಿರುವ ಇ.ಎಂ.ಡಿ / ಭದ್ರತಾ ಠೇವಣಿಯನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು. ಅಂತಹ ಬಿಡ್‌ದಾರರನ್ನು / ಪರವಾನಗಿದಾರರನ್ನು ಮುಂದಿನ 02 ವರ್ಷಗಳ ಅವಧಿಗೆ ಕ.ರಾ.ರ.ಸಾ.ನಿಗಮದ ವತಿಯಿಂದ ಆಹ್ವಾನಿಸಲಾಗುವ ಯಾವುದೇ ಟೆಂಡರ್‌ನಲ್ಲಿ ಭಾಗವಹಿಸದಂತೆ ಕಪ್ಪುಪಟ್ಟಿಗೆ ಸೇರಿಸಲಾಗುವುದು.
7. ಬಿಡ್‌ದಾರರು ಬಿಡ್ ಹಿಂದಕ್ಕೆ ಪಡೆದಲ್ಲಿ ಅಥವಾ ತಿದ್ದುಪಡಿಗೊಳಿಸಿದಲ್ಲಿ ಅಥವಾ ಅಗೌರವ ತರುವಂತಹ ಸಂದರ್ಭಗಳಲ್ಲಿ, ಇ.ಎಂ.ಡಿ. ಮೊತ್ತ ಮುಟ್ಟುಗೋಲು ಹಾಕಿಕೊಂಡು, ಮುಂದಿನ 02 ವರ್ಷಗಳ ಅವಧಿಗೆ ಕ.ರಾ.ರ.ಸಾ. ನಿಗಮದ ವತಿಯಿಂದ ಆಹ್ವಾನಿಸಲಾಗುವ ಯಾವುದೇ ಟೆಂಡರ್‌ನಲ್ಲಿ ಭಾಗವಹಿಸದಂತೆ ಕಪ್ಪುಪಟ್ಟಿಗೆ ಸೇರಿಸಲಾಗುವುದು.
8. ಒಂದು ವರ್ಷದ ಅವಧಿಯೊಳಗೆ ಯಾವುದೇ ಕಾರಣದಿಂದ ಪರವಾನಗಿ ರದ್ದುಗೊಳ್ಳುವಂತಹ ಮತ್ತು ಒಂದು ವರ್ಷದ ಅವಧಿಯೊಳಗೆ ಪರವಾನಗಿಯನ್ನು ರದ್ದುಪಡಿಸುವಂತೆ ಮನವಿ ಸಲ್ಲಿಸುವ ಪರವಾನಗಿದಾರರನ್ನು, ಮನವಿ ಸಲ್ಲಿಸಿದ ದಿನಾಂಕದಿಂದ ಮುಂದಿನ 02 ವರ್ಷಗಳ ಅವಧಿಗೆ ಕ.ರಾ.ರ.ಸಾ. ನಿಗಮದ ವತಿಯಿಂದ ಆಹ್ವಾನಿಸಲಾಗುವ ಯಾವುದೇ ಟೆಂಡರ್‌ನಲ್ಲಿ ಭಾಗವಹಿಸದಂತೆ ಕಪ್ಪುಪಟ್ಟಿಗೆ ಸೇರಿಸಲಾಗುವುದು.
9. ಪರವಾನಗಿ ಅವಧಿಯ ಯಾವುದೇ ಸಮಯದಲ್ಲಿ ಮಳಿಗೆಯನ್ನು ಉಪ-ಪರವಾನಗಿಗೆ ನೀಡಿರುವುದು ಕಂಡು ಬಂದಲ್ಲಿ, ಪರವಾನಗಿಯನ್ನು ತಕ್ಷಣದಿಂದಲೇ ಜಾರಿಗೆ ಬರುವಂತೆ ರದ್ದುಪಡಿಸಲಾಗುವುದು ಹಾಗೂ ಭದ್ರತಾ ಠೇವಣಿ ಮೊತ್ತವನ್ನು ಮುಟ್ಟುಗೋಲು ಹಾಕಿಕೊಂಡು, ಕರಾರು ರದ್ದುಪಡಿಸಿದ ದಿನಾಂಕದಿಂದ ಮುಂದಿನ 02 ವರ್ಷಗಳ ಅವಧಿಗೆ ಕ.ರಾ.ರ.ಸಾ.ನಿಗಮದ ವತಿಯಿಂದ ಆಹ್ವಾನಿಸಲಾಗುವ ಯಾವುದೇ ಟೆಂಡರ್‌ನಲ್ಲಿ ಭಾಗವಹಿಸದಂತೆ ಸದರಿ ಪರವಾನಗಿದಾರರನ್ನು ಕಪ್ಪುಪಟ್ಟಿಗೆ ಸೇರಿಸಲಾಗುವುದು.
10. ಕಪ್ಪು ಪಟ್ಟಿಗೆ ಸೇರಿದ ಪರವಾನಗಿದಾರರು ನಿಗಮದ ಯಾವುದೇ ಟೆಂಡರ್ / ಸಂಧಾನದಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ. ಅಂತಹ ಬಿಡ್‌ದಾರರು / ಅರ್ಜಿದಾರರು ಒಂದು ವೇಳೆ ಟೆಂಡರ್ / ಸಂಧಾನದಲ್ಲಿ ಭಾಗವಹಿಸಿದಲ್ಲಿ, ಯಾವುದೇ ಹಂತದಲ್ಲಿ ಅವರ ಇ.ಎಂ.ಡಿ. ಮೊತ್ತವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

**ಇತರೆ ಷರತ್ತು ನಿಯಮಗಳು :-**

34. ಟೆಂಡರ್‌ನಲ್ಲಿ ಆಯ್ಕೆಯಾಗದ ಬಿಡ್‌ದಾರರುಗಳ (H1 & H2 ಹೊರತುಪಡಿಸಿ) ಇ.ಎಂ.ಡಿ. ಮೊತ್ತವನ್ನು ಟೆಂಡರ್ ಅಂತಿಮಗೊಂಡ ನಂತರ ಹಿಂದಿರುಗಿಸಲಾಗುವುದು. H2 ಬಿಡ್‌ದಾರರ ಇ.ಎಂ.ಡಿ. ಮೊತ್ತವನ್ನು H1 ಬಿಡ್‌ದಾರರು ಕರಾರು ಒಪ್ಪಂದ ಮಾಡಿಕೊಂಡ ನಂತರ ಹಿಂದಿರುಗಿಸಲಾಗುವುದು.
35. ಟೆಂಡರ್‌ನಲ್ಲಿ ಅತಿ ಹೆಚ್ಚು ಮೊತ್ತವನ್ನು ಬಿಡ್‌ಮಾಡಿ ಪರವಾನಗಿದಾರರಾಗಿ ಆಯ್ಕೆಯಾದ ಬಿಡ್‌ದಾರರು ನಿಗದಿತ ದಿನಾಂಕದೊಳಗಾಗಿ ಭದ್ರತಾ ಠೇವಣಿ ಹಾಗೂ ಮುಂಗಡ ಮಾಸಿಕ ಪರವಾನಗಿ ಶುಲ್ಕಗಳನ್ನು ಪಾವತಿಸಲು ವಿಫಲರಾದಲ್ಲಿ, ಅಂತಹ ಬಿಡ್‌ದಾರರ ಇ.ಎಂ.ಡಿ. ಮೊತ್ತವನ್ನು ನಿಗಮಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.
36. ಒಂದು ವೇಳೆ ಆಯ್ಕೆಯಾದ ಬಿಡ್‌ದಾರರು ಭದ್ರತಾ ಠೇವಣಿ ಮತ್ತು ಮುಂಗಡ ಮಾಸಿಕ ಪರವಾನಗಿ ಶುಲ್ಕಗಳನ್ನು ಪಾವತಿಸಿ, ನಿಗದಿತ ದಿನಾಂಕದೊಳಗಾಗಿ ಕರಾರು ಒಪ್ಪಂದವನ್ನು ಮಾಡಿಕೊಳ್ಳಲು ವಿಫಲರಾದಲ್ಲಿ, ಅಂತಹ ಬಿಡ್‌ದಾರರ ಭದ್ರತಾ ಠೇವಣಿ ಹಾಗೂ ಮುಂಗಡ ಮಾಸಿಕ ಪರವಾನಗಿ ಶುಲ್ಕಗಳನ್ನು ನಿಗಮಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.
37. H2 ಬಿಡ್‌ದಾರರನ್ನು ಪರವಾನಗಿದಾರರಾಗಿ ಆಯ್ಕೆ ಮಾಡಿದಾಗ, ಅವರು ಕರಾರು ಒಪ್ಪಂದ ಮಾಡಿಕೊಳ್ಳಲು ವಿಫಲರಾದಲ್ಲಿ, ಅವರ ಇ.ಎಂ.ಡಿ. ಮೊತ್ತವನ್ನು ಸಹ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.
38. ಪರವಾನಗಿ ಪಡೆದ ಪರವಾನಗಿದಾರರೇ ಮಳಿಗೆಯನ್ನು ನಡೆಸುವುದು. ಮಳಿಗೆಗಳನ್ನು ಉಪ ಪರವಾನಗಿಗೆ ನೀಡಲು ಅವಕಾಶವಿರುವುದಿಲ್ಲ.
39. ಮುಷ್ಕರ / ಬಂದ್ ಅವಧಿಯಲ್ಲಿ ಮಾಸಿಕ ಪರವಾನಗಿ ಶುಲ್ಕದಲ್ಲಿ ರಿಯಾಯಿತಿಗೆ ಅವಕಾಶವಿರುವುದಿಲ್ಲ.
40. ಪರವಾನಗಿದಾರರು ತಮ್ಮ ವ್ಯವಹಾರಕ್ಕೆ ಸಂಬಂಧಿಸಿದ ಜಿ.ಎಸ್.ಟಿ., ಆದಾಯ ತೆರಿಗೆ, ಭವಿಷ್ಯ ನಿಧಿ, ಇ.ಎಸ್.ಐ, ಸೇಲ್ಸ್ ಟ್ಯಾಕ್ಸ್ ಕ್ಲಿಯರೆನ್ಸ್ ಪ್ರಮಾಣ ಪತ್ರ, ಟ್ರೇಡ್ ಲೈಸೆನ್ಸ್, ಲೇಬರ್ ಲೈಸೆನ್ಸ್, ಫುಡ್ ಲೈಸೆನ್ಸ್ ಇತ್ಯಾದಿ ಪ್ರಮಾಣಪತ್ರಗಳನ್ನು ಹೊಂದಿರಬೇಕು. ನಿಗಮವು & ಸರ್ಕಾರದ ಇತರ ಇಲಾಖೆಯವರು ದಾಖಲೆಗಳನ್ನು ಹಾಜರುಪಡಿಸಲು ಕೋರಿದ್ದಲ್ಲಿ ಸಂಬಂಧಿಸಿದ ದಾಖಲೆಗಳನ್ನು ಕೂಡಲೇ ಸಲ್ಲಿಸಬೇಕಾಗಿರುತ್ತದೆ.
41. ಸ್ಥಳೀಯ ಇಲಾಖೆ / ಪ್ರಾಧಿಕಾರಗಳು ವಿಧಿಸುವ ತೆರಿಗೆಯನ್ನು ಪರವಾನಗಿದಾರರೇ ಸಂಬಂಧಿಸಿದ ಇಲಾಖೆ / ಪ್ರಾಧಿಕಾರಗಳಿಗೆ ಸಂದಾಯ ಮಾಡಲು ಜವಾಬ್ದಾರರಾಗಿರುತ್ತಾರೆ.
42. ನಿಗಮದ ವ್ಯವಹಾರಕ್ಕೆ ವ್ಯತಿರಿಕ್ತ ಪರಿಣಾಮ ಉಂಟುಮಾಡುವ ವ್ಯವಹಾರವನ್ನು, ನಿಗಮದ ವತಿಯಿಂದ ನಿಷೇದಿಸಲ್ಪಟ್ಟ, ಮುಂದೆ ನಿಷೇಧಿಸಲ್ಪಡುವ ವಸ್ತುಗಳು ಮತ್ತು ಕಾನೂನುಬಾಹಿರ ವಸ್ತುಗಳ ಮಾರಾಟವನ್ನು ಮಳಿಗೆಗಳಲ್ಲಿ ನಿಷೇಧಿಸಲಾಗಿದೆ. ಈ ರೀತಿಯ ವಸ್ತುಗಳ ಮಾರಾಟ ಕಂಡುಬಂದಲ್ಲಿ, ಪರವಾನಗಿಯನ್ನು ರದ್ದುಪಡಿಸಿ, ಕಾನೂನು ಕ್ರಮ ಕೈಗೊಳ್ಳಲಾಗುವುದು.

43. ಆಯ್ಕೆಗೊಂಡ ಪರವಾನಗಿದಾರರು ನಿಗಮದ ವಾಣಿಜ್ಯ ಮಳಿಗೆಗಳಲ್ಲಿ ಅಗ್ನಿ ರಕ್ಷಕ / ಶಾಮಕ ಉಪಕರಣಗಳನ್ನು ಕಡ್ಡಾಯವಾಗಿ ಅಳವಡಿಸುವುದು. ಅಗ್ನಿ ಅವಘಡ ಹಾಗೂ ಇತರೆ ನೈಸರ್ಗಿಕ ದುರಂತಗಳಿಗೆ ನಿಗಮವು ಜವಾಬ್ದಾರಿಯಾಗಿರುವುದಿಲ್ಲ.
44. ಲಾಡ್ಜಿಂಗ್ & ಡಾರ್ಮಿಟರಿ, ಉಪಹಾರ ಗೃಹ, ಬೇಕರಿ ಮಳಿಗೆಗಳು, ಚಾಟ್ಸ್ ಸೆಂಟರ್ ಇವುಗಳನ್ನು ಹೊರತುಪಡಿಸಿ, ಇತರೆ ಮಳಿಗೆಗಳಲ್ಲಿ ಎಲ್ಲಾ ಮಾದರಿಯ ಸ್ಟೌವ್ / ಗ್ಯಾಸ್ ಬಳಕೆಯನ್ನು ನಿಷೇಧಿಸಲಾಗಿದೆ.
45. ಮಳಿಗೆಗಳಲ್ಲಿ ಟೂರಿಸ್ಟ್ ಟ್ರಾವಲ್, ಮಧ್ಯಪಾನ, ಮಾಂಸ ಮತ್ತು ಇತರೆ ಕಾನೂನು ಬಾಹಿರ ಚಟುವಟಿಕೆಗಳಿರುವ ವ್ಯಾಪಾರ, ಮಾದಕ ವಸ್ತುಗಳು, ವಾಯು ಮಾಲಿನ್ಯ ಉಂಟುಮಾಡುವ ಹಾಗೂ ಸಂಸ್ಥೆಯ ಹಿತಕ್ಕೆ ಧಕ್ಕೆಯಾಗುವಂತಹ ವ್ಯಾಪಾರಗಳನ್ನು ಹೊರತು ಪಡಿಸಿದೆ.
46. ಡಾರ್ಮಿಟರಿ ಮತ್ತು ಲಾಡ್ಜಿಂಗ್ ವ್ಯವಹಾರ ನಡೆಸಲು ಆಯ್ಕೆಯಾಗುವ ಪರವಾನಿಗೆದಾರರೇ ಮೂಲಭೂತ ಸೌಕರ್ಯಗಳನ್ನು ನಿರ್ಮಿಸಿಕೊಳ್ಳಬಹುದಾಗಿರುತ್ತದೆ ಹಾಗೂ ಕಟ್ಟಡದ ಮೂಲ ಸ್ವರೂಪದಲ್ಲಿ ಯಾವುದೇ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
47. ಬಸ್ ನಿಲ್ದಾಣದಲ್ಲಿರುವ ವಾಣಿಜ್ಯ ಮಳಿಗೆಗಳಲ್ಲಿ ಸಿಗರೇಟು/ಗುಟ್ಕಾ ಮತ್ತು ಇನ್ನಿತರೆ ತಂಬಾಕು ಪದಾರ್ಥಗಳ ಮಾರಾಟವನ್ನು ಕಡ್ಡಾಯವಾಗಿ ನಿಷೇದಿಸಿದೆ.
48. ಉಪಹಾರ ಗೃಹದಲ್ಲಿ ಹೊಟ್ಟಾಗಲಿ, ಸೌದೆಯ ಒಲೆಯನ್ನು ಉರಿಸುವಂತಿರುವುದಿಲ್ಲ, ಗ್ಯಾಸ್ ಮತ್ತು ವಿದ್ಯುತ್‌ನ್ನು ಮಾತ್ರ ಬಳಸುವುದು.
49. ಉಪಹಾರ ಗೃಹ/ವಾಣಿಜ್ಯ ಮಳಿಗೆಗಳಲ್ಲಿ ನೇಮಿಸಿಕೊಂಡಿರುವ ಕಾರ್ಮಿಕರಿಗೆ ಕಾರ್ಮಿಕ ಇಲಾಖೆಯು ನಿಗದಿಪಡಿಸಿರುವ ಇಎಸ್‌ಐ/ಫಿ.ಎಫ್ ಹಾಗೂ ಇನ್ನಿತರೆ ಸೌಲಭ್ಯವನ್ನು ಒದಗಿಸುವುದು, ಸಂಬಂಧಿಸದಿದ್ದಲ್ಲಿ, ಸ್ವಯಂ ಘೋಷಣಾ ಪತ್ರವನ್ನು ಸಲ್ಲಿಸುವುದು. ತಪ್ಪಿದ್ದಲ್ಲಿ ಭದ್ರತಾ ಠೇವಣಿ ಮೊತ್ತವನ್ನು ಮುಟ್ಟುಗೋಲು ಹಾಕಿಕೊಂಡು ಕರಾರು ಒಪ್ಪಂದ ರದ್ದುಪಡಿಸಲಾಗುವುದು.
50. ಪರವಾನಗಿದಾರರು ಬಾಲ ಕಾರ್ಮಿಕರನ್ನು ನೇಮಿಸಿಕೊಳ್ಳುವಂತಿಲ್ಲ.
51. ಉಪಹಾರ ಗೃಹವನ್ನು ಹೊರತುಪಡಿಸಿ, ಉಳಿದ ವಾಣಿಜ್ಯ ಮಳಿಗೆಗಳಲ್ಲಿ ಗ್ಯಾಸ್‌ನ್ನಾಗಲಿ, ಹೊಟ್ಟಾಗಲಿ ಅಥವಾ ವಿದ್ಯುತ್ ಬಳಿಸಿ ಒಲೆಯನ್ನು ಉರಿಸುವಂತಿಲ್ಲ.
52. ಕರ್ನಾಟಕ ರಾಜ್ಯ ಸರ್ಕಾರವು ಜಾರಿ ಮಾಡಿರುವ 1957 ರ ಗ್ರಾಹಕರ ಅಧಿನಿಯಮ–6/23(1)ರ ಅನ್ವಯ ಗ್ರಾಹಕರಿಗೆ ಮಳಿಗೆಯಲ್ಲಿ ವ್ಯಾಪಾರ ಮಾಡುವ ಸಾಮಾಗ್ರಿಗಳ ಪೊಟ್ಟಣದ ಮೇಲೆ ಮುದ್ರಿಸಿರುವ ಗರಿಷ್ಟ ಚಿಲ್ಲರೆ ಬೆಲೆಗಿಂತ ಹೆಚ್ಚಿಗೆ ಬೆಲೆ ಪಡೆಯುವುದಾಗಲಿ ಅಥವಾ ಬೆಲೆಯನ್ನು ಅಳಿಸುವುದು/ತಿದ್ದುವುದು/ಇತ್ಯಾದಿಗಳನ್ನು ಮಾಡಿದ ಬಗ್ಗೆ ದೂರುಗಳು ಬಂದಲ್ಲಿ / ನಿಗಮದ ಹೆಸರಿಗೆ ಧಕ್ಕೆ ಬರುವಂತಹ ಸನ್ನಿವೇಶಗಳಲ್ಲಿ ಪರವಾನಗಿದಾರರ ಪರವಾನಗಿಯನ್ನು ರದ್ದು ಪಡಿಸಲಾಗುವುದು.

53. ಟೆಂಡರ್/ಸಂಧಾನ ಪ್ರಕಟಣೆಯಲ್ಲಿ ಆಯ್ಕೆಯಾದವರು ತಮ್ಮ ಸ್ವಂತ ಖರ್ಚಿನಲ್ಲಿ ಕರ್ನಾಟಕ ಸ್ಟಾಂಪ್ ಆಕ್ಟ್‌ನಂತೆ ಸ್ಟಾಂಪ್ ಶುಲ್ಕವನ್ನು ಭರಿಸಿ ಕರಾರು ಒಪ್ಪಂದ ಮಾಡಿಕೊಳ್ಳಬೇಕಾಗಿರುತ್ತದೆ.
54. ಕರಾರು ಒಪ್ಪಂದ ಮಾಡಿಕೊಳ್ಳುವ ಸಮಯದಲ್ಲಿ ಸೇಲ್ಸ್ ಟ್ಯಾಕ್ಸ್ ಕ್ಲಿಯರೆನ್ಸ್ ಸರ್ಟಿಫಿಕೇಟ್ ನೀಡುವುದು.
55. ಟೆಂಡರ್‌ನಲ್ಲಿ ಭಾಗವಹಿಸುವ ಅರ್ಜಿದಾರರು/ಬಿಡ್‌ದಾರರು ನಿಗಮಕ್ಕೆ ಯಾವುದೇ ಷರತ್ತುಗಳನ್ನು ಹಾಕುವಂತಿಲ್ಲ, ನಿಗಮವು ಕಾಲಕಾಲಕ್ಕೆ ವಿಧಿಸುವ ಎಲ್ಲಾ ಷರತ್ತುಗಳನ್ನು ಒಪ್ಪಿಕೊಳ್ಳತಕ್ಕದಾಗಿರುತ್ತದೆ.
56. ಪರವಾನಗಿದಾರರು / ಬಿಡ್ಡದಾರರು ಕಡ್ಡಾಯವಾಗಿ ಪಾನ್‌ಕಾರ್ಡ್ ಹೊಂದಿರಬೇಕಾಗಿರುತ್ತದೆ.
57. ಯಾವುದೇ ಸಮಯದಲ್ಲಿ ಹೆಚ್ಚಿನ ಷರತ್ತು ಮತ್ತು ನಿಬಂಧನೆಗಳನ್ನು ಕರಾರಿನಲ್ಲಿ ಸೇರಿಸಲು ಮತ್ತು ಮಾರ್ಪಡಿಸಲು ನಿಗಮವು ಅಧಿಕಾರ ಹೊಂದಿರುತ್ತದೆ.
58. ಪರವಾನಗಿದಾರರು ಮತ್ತು ನಿಗಮದ ಮಧ್ಯೆ ಯಾವುದೇ ವ್ಯಾಜ್ಯ / ತಕರಾರು ಉಂಟಾದಲ್ಲಿ, ನಿಗಮದ ವ್ಯವಸ್ಥಾಪಕ ನಿರ್ದೇಶಕರು ಮಧ್ಯಸ್ಥಿಕೆದಾರರಾಗಿರುತ್ತಾರೆ. ಸದರಿಯವರ ತೀರ್ಮಾನವೇ ಅಂತಿಮವಾಗಿರುತ್ತದೆ.
59. ಕರಾರಿನಿಂದ ಉದ್ಭವಿಸಬಹುದಾದಂತಹ ಯಾವುದೇ ವ್ಯಾಜ್ಯ ಅಥವಾ ವಿವಾದ ಕ್ಷೇಮುಗಳನ್ನು ಪರಿಹರಿಸಿಕೊಳ್ಳುವುದಕ್ಕಾಗಿ ಉಭಯ ಪಕ್ಷದವರು ಅಂತಹ ವಿವಾದವನ್ನು ಕರ್ನಾಟಕ Arbitration ಕೇಂದ್ರ (ದೇಶಿಯ, ಅಂತರ್‌ದೇಶಿಯ)ನಿಯಮಗಳು, 2012ರಡಿಯಲ್ಲಿ ನೇಮಕಗೊಂಡ ಒಬ್ಬರು ಅಥವಾ ಹಲವು ಪಂಚಾಯತ್‌ದಾರರ ಮೂಲಕ ಪರಿಹರಿಸಲು ಒಪ್ಪಿಕೊಳ್ಳಲಾಗಿದೆ.
60. ಯಾವುದೇ ಕಾರಣ ನೀಡದೇ ಟೆಂಡರನ್ನು ಪುರಸ್ಕರಿಸುವ / ತಿರಸ್ಕರಿಸುವ ಅಧಿಕಾರವನ್ನು ನಿಗಮವು ಹೊಂದಿರುತ್ತದೆ.
61. ನಿಗಮದಿಂದ ಕರೆಯಲಾಗುವ ಯಾವುದೇ ಟೆಂಡರ್ / ಸಂಧಾನವನ್ನು ಯಾವುದೇ ಸಮಯದಲ್ಲಿ ಯಾವುದೇ ಕಾರಣವನ್ನು ನೀಡದೇ ರದ್ದುಪಡಿಸುವ ಅಧಿಕಾರವನ್ನು ನಿಗಮವು ಕಾಯ್ದಿರಿಸಿಕೊಂಡಿರುತ್ತದೆ.
62. ಇ–ಟೆಂಡರ್ ಪ್ರಕಟಣೆಯನ್ನು ಯಾವುದೇ ಕಾರಣ ನೀಡದೆ ಮುಂದೂಡುವ & ತಿರಸ್ಕರಿಸುವ ಹಾಗೂ ರದ್ದು ಮಾಡುವ ಹಕ್ಕನ್ನು ನಿಗಮವು ಕಾಯ್ದರಿಸಿಕೊಂಡಿದೆ.
63. ಇ.ಎಸ್.ಐ ಕಾಯ್ದೆಯ ವ್ಯಾಪ್ತಿಯಲ್ಲಿ ಬರುವ ವಾಣಿಜ್ಯ ಮಳಿಗೆಗಳ / ಸ್ಥಳಗಳ ಪರವಾನಗಿದಾರರುಗಳು ಇ.ಎಸ್.ಐ ಕೋಡ್‌ನ್ನು ಹೊಂದಿರಬೇಕು ಮತ್ತು ಅವರುಗಳ ವ್ಯಾಪ್ತಿಯಲ್ಲಿ ಬರುವ ನೌಕರರನ್ನು ಇ.ಎಸ್.ಐ ವ್ಯಾಪ್ತಿಯಲ್ಲಿ ತರಬೇಕು ಮತ್ತು ಇ.ಎಸ್.ಐ ಕಾರ್ಡ್‌ನ್ನು ಕೊಡಿಸಬೇಕು.
64. ಇ.ಎಸ್.ಐ ಕಾಯ್ದೆಯ ವ್ಯಾಪ್ತಿಯಲ್ಲಿ ಬರುವ ವಾಣಿಜ್ಯ ಮಳಿಗೆಗಳ / ಸ್ಥಳಗಳ ಪರವಾನಗಿದಾರರುಗಳು ನಿಗದಿತ ವಂತಿಕೆಯನ್ನು ಆನ್‌ಲೈನ್‌ನಲ್ಲಿ ಸಲ್ಲಿಸಬೇಕು ಮತ್ತು ಇ.ಎಸ್.ಐ ಸೌಲಭ್ಯಗಳನ್ನು ನೌಕರರಿಗೆ ಮತ್ತು ಅವರ ಅವಲಂಬಿತರಿಗೆ ಸಿಗುವಂತೆ ಸಹಾಯ ಮಾಡಬೇಕು.
65. ವಾಣಿಜ್ಯ ಮಳಿಗೆಗಳಿಗೆ ಸಂಬಂಧಿಸಿದ ವ್ಯವಹಾರಗಳನ್ನು ಪ್ರಾರಂಭಿಸಲು ಕಾನೂನು ರೀತಿಯಲ್ಲಿ ಆಗತ್ಯವಿರುವ ಪರವಾನಿಗೆಯನ್ನು ಸಂಬಂಧಿಸಿದ ಪ್ರಾಧಿಕಾರಗಳಿಂದ ಪರವಾನಗಿದಾರರು ಪಡೆದುಕೊಳ್ಳತಕ್ಕದ್ದು.
66. ಕಟ್ಟಿದ/ತೆರೆದ ಸ್ಥಳದ ಮಳಿಗೆಗಳಿಗೆ ಆಯ್ಕೆಯಾಗಿರುವ ಪರವಾನಿಗೆದಾರರು ಪರವಾನಿಗೆ ಅವಧಿಯು ಮುಕ್ತಾಯದ ನಂತರ ಅಥವಾ ಕರಾರು ರದ್ದತಿಯ ನಂತರ ತಾವು ತಾತ್ಕಾಲಿಕವಾಗಿ ನಿರ್ಮಿಸಿಕೊಂಡಿರುವ ಮಳಿಗೆ(ಶೆಡ್)/Structure/ಹೋರ್ಡಿಂಗ್ಸ್ ಇತರೆ ಮಾರ್ಪಾಡುಗಳನ್ನು ತೆರವುಗೊಳಿಸಿ ಖಾಲಿ ಸ್ಥಳವನ್ನು ನಿಗಮದ ವಶಕ್ಕೆ ಒಪ್ಪಿಸುವುದು, ಸಂಪೂರ್ಣವಾಗಿ ತೆರೆದ ಸ್ಥಳದಲ್ಲಿ ನಿರ್ಮಿಸಿಕೊಂಡಿರುವ ಶೆಡ್ (ಮಳಿಗೆ)/Structure ತೆರವುಗೊಳಿಸದಿದ್ದಲ್ಲಿ ಭದ್ರತಾ ಠೇವಣಿ ಮುಟ್ಟುಗೋಲು ಹಾಕಿಕೊಂಡು ಶೆಡ್ (ಮಳಿಗೆ)/Structure ನ್ನು ನಿಗಮದ ವಶಕ್ಕೆ ಪಡೆದುಕೊಳ್ಳಲಾಗುವುದು.

**ವಿಶೇಷ ಸೂಚನೆ : –**

7. ಮಳಿಗೆಗೆ ನಿಗದಿಪಡಿಸಿದ ಇ.ಎಂ.ಡಿ ಮೊತ್ತದಲ್ಲಿ ರೂ.500–00 ಗಳನ್ನು ಮಾತ್ರ ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಪಾವತಿಸುವುದು ಉಳಿದ ಇ.ಎಂ.ಡಿ ಮೊತ್ತವನ್ನು ಡಿ.ಡಿ.ಮೂಲಕ ಪಡೆದು ಸದರಿ ಡಿ.ಡಿ ಯ ಹಿಂಭಾಗದಲ್ಲಿ ತಮ್ಮ ಹೆಸರು, ಬಿಡ್ ಮಾಡುವ ಮಳಿಗೆಯ ಹೆಸರು & ಮಳಿಗೆಯ ಸಂಖ್ಯೆಯನ್ನು ನಮೂದಿಸಿ, ಟೆಂಡರ್ ತೆರೆಯುವ ಕೊನೆಯ ದಿನಾಂಕದೊಳಗಾಗಿ 22.10.2020 ರ ಬೆಳಗ್ಗೆ 10.45 ಗಂಟೆಯ ಒಳಗೆ) ವಿಭಾಗೀಯ ಕಛೇರಿ ಸಂಚಾರ ಶಾಖೆಯಲ್ಲಿರುವ ಬಾಕ್ಸ್‌ನಲ್ಲಿ ಹಾಕುವುದು. ಸದರಿ ಡಿ.ಡಿಯ ಜರಾಕ್ಸ್ ಪ್ರತಿಯನ್ನು ಇತರೆ ದಾಖಲಾತಿಗಳೊಂದಿಗೆ ಅಪ್‌ಲೋಡ್ ಮಾಡುವುದು.

8. ಇ–ಪ್ರೊಕ್ಯೂರ್‌ಮೆಂಟ್ ಭಾಗವಹಿಸುವ ಬಿಡ್‌ದಾರರು ಅಫ್‌ಲೋಡ್ ಮಾಡಿರುವ ಎಲ್ಲಾ ದಾಖಲಾತಿಗಳ ಜರಾಕ್ಸ್ ಪ್ರತಿಗಳನ್ನು ಇ.ಎಂ.ಡಿ ಮತ್ತು ಅರ್ಜಿ ಶುಲ್ಕದ ಡಿ.ಡಿ ಜೊತೆಯಲ್ಲಿ ಟೆಂಡರ್ ತೆರೆಯುವ ಕೊನೆಯ ದಿನಾಂಕದೊಳಗಾಗಿ (22.10.2020 ರ ಬೆಳಗ್ಗೆ 10.45 ಗಂಟೆಯ ಒಳಗೆ) ವಿಭಾಗೀಯ ಕಛೇರಿ ಸಂಚಾರ ಶಾಖೆಯಲ್ಲಿರುವ ಬಾಕ್ಸ್‌ನಲ್ಲಿ ಹಾಕುವುದು.
9. ಮಳಿಗೆಗೆ ನಿಗದಿಪಡಿಸಿದ ಅರ್ಜಿ ಶುಲ್ಕದ ಮೊತ್ತವನ್ನು ಡಿ.ಡಿ.ಮೂಲಕ ಪಡೆದು ಸದರಿ ಡಿ.ಡಿ ಯ ಹಿಂಭಾಗದಲ್ಲಿ ತಮ್ಮ ಹೆಸರು, ಬಿಡ್ ಮಾಡುವ ಮಳಿಗೆಯ ಹೆಸರು & ಮಳಿಗೆಯ ಸಂಖ್ಯೆಯನ್ನು ನಮೂದಿಸಿ ಟೆಂಡರ್ ತೆರೆಯುವ ಕೊನೆಯ ದಿನಾಂಕದೊಳಗಾಗಿ ವಿಭಾಗೀಯ ಕಛೇರಿ ಸಂಚಾರ ಶಾಖೆಯಲ್ಲಿರುವ ಬಾಕ್ಸ್‌ನಲ್ಲಿ ಹಾಕುವುದು. ಸದರಿ ಡಿ.ಡಿಯ ಜರಾಕ್ಸ್ ಪ್ರತಿಯನ್ನು ಇತರೆ ದಾಖಲಾತಿಗಳೊಂದಿಗೆ ಅಪ್‌ಲೋಡ್ ಮಾಡುವುದು.
10. ಪೋರ್ಟಲ್‌ನಲ್ಲಿ ಅಪಲೋಡ್ ಮಾಡಿದ ಮಳಿಗೆಗೆ ಸಂಬಂಧಿಸಿದ ವಿವರಗಳನ್ನು ಸಂಪೂರ್ಣವಾಗಿ ಓದಿ ಅರ್ಥೈಸಿಕೊಂಡಿರುವ ಬಗ್ಗೆ ಹಾಗೂ ಎಲ್ಲಾ ಷರತ್ತು ಮತ್ತು ನಿಬಂಧನೆಗಳನ್ನು ಒಪ್ಪಿರುವ ಬಗ್ಗೆ ಷರತ್ತು ಮತ್ತು ನಿಭಂಧನೆಗಳ ಪ್ರತಿಯಲ್ಲಿ, ಟೆಂಡರ್‌ದಾರರು/ಅರ್ಜಿದಾರರು/ಬಿಡ್‌ದಾರರು ಸಹಿ ಮಾಡಿ, ಇ–ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವುದು.
11. ಪಾನ್ ಕಾರ್ಡ್ ಸಲ್ಲಿಸುವುದು ಕಡ್ಡಾಯವಾಗಿದ್ದು ಹಾಗೂ ವಿಳಾಸ ದೃಢೀಕರಣ ಪತ್ರಕ್ಕೆ ವೋಟರ್ ಐಡಿ, ಆಧಾರ ಕಾರ್ಡ್, ಬ್ಯಾಂಕ್ ಪಾಸ್ ಬುಕ್, ಪಾಸಪೋರ್ಟ & ಇತರೆ ದಾಖಲಾತಿಗಳನ್ನು ಇ–ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವುದು.
12. ಎಲ್ಲಾ ಬಿಡ್‌ದಾರರು ಕಪ್ಪುಪಟ್ಟಿಗೆ ಸೇರಿಲ್ಲದಿರುವ ಬಗ್ಗೆ ನಾವು ಅಪ್‌ಲೋಡ್ ಮಾಡಿರುವ ಸ್ವಯಂ ದೃಢೀಕರಣ ಪತ್ರದ ನಮೂನೆಯಲ್ಲಿ ಭರ್ತಿ ಮಾಡಿ ಪೂರ್ಣ ಹೆಸರು, ವಿಳಾಸದೊಂದಿಗೆ ಸಹಿ ಮಾಡಿ ಇ–ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವುದು.
13. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಅಂಗವಿಕಲ/ವಿಕಲಚೇತನ ಮೀಸಲಾತಿ ಪಡೆಯುವ ಬಿಡ್‌ದಾರರು ನಾವು ಅಪ್‌ಲೋಡ್ ಮಾಡಿರುವ ಸ್ವಯಂ ದೃಢೀಕರಣ ಪತ್ರದ ನಮೂನೆಯಲ್ಲಿ ಭರ್ತಿ ಮಾಡಿ ಪೂರ್ಣ ಹೆಸರು, ವಿಳಾಸದೊಂದಿಗೆ ಸಹಿ ಮಾಡಿ ಇ–ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವುದು.
14. ಬಿಡ್‌ದಾರರು ಬಿಡ್‌ನಲ್ಲಿ ಸಲ್ಲಿಸಿರುವ ದಾಖಲಾತಿಗಳ ಬಗ್ಗೆ ಅಳವಡಿಸಿರುವ ಚೆಕ್‌ಲಿಸ್ಟ್‌ನಲ್ಲಿ ದಾಖಲಾತಿಗಳನ್ನು ಸಲ್ಲಿಸಿದ ಬಗ್ಗೆ ಕಾಲಂಗಳನ್ನು ಭರ್ತಿ ಮಾಡಿ ದೃಢೀಕರಿಸಿ ಸಹಿಯೊಂದಿಗೆ ಅಪ್‌ಲೋಡ ಮಾಡುವುದು.

–ಸಹಿ–
ವಿಭಾಗೀಯ ನಿಯಂತ್ರಣಾಧಿಕಾರಿ
ಕರಾರಸಾನಿಗಮ : ಚಿಕ್ಕಮಗಳೂರು ವಿಭಾಗ

ಯಿಂದ,
ಶ್ರೀ ______________________

______________________

______________________

______________________

ಗೆ,
ವಿಭಾಗೀಯ ನಿಯಂತ್ರಣಾಧಿಕಾರಿ,
ಕ.ರಾ.ರ.ಸಾ.ನಿಗಮ,
ಚಿಕ್ಕಮಗಳೂರು ವಿಭಾಗ,
ಚಿಕ್ಕಮಗಳೂರು.

ಮಾನ್ಯರೆ,

ವಿಷಯ : **<u>ಕಪ್ಪು ಪಟ್ಟಿಗೆ</u>** ಸೇರಿಲ್ಲದಿರುವ ಬಗ್ಗೆ ಸ್ವಯಂ ದೃಢೀಕರಣ ಪತ್ರ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ನಾನು ಸಂಧಾನ ಪ್ರಕಟಣೆ ಸಂಖ್ಯೆ : ______/2019–20 ದಿನಾಂಕ:______________ರಂತೆ ಬಸ್ ನಿಲ್ದಾಣದ ಮಳಿಗೆಯ ಬಗ್ಗೆ ಇ–ಟೆಂಡರ್/ಸಂಧಾನದ ಮೂಲಕ ಅರ್ಜಿ ಸಲ್ಲಿಸಿದ್ದು, ನಾನು ಕ.ರಾ.ರ.ಸಾ.ನಿಗಮ / ಬೆಂ.ಮ.ಸಾ.ಸಂಸ್ಥೆ / ವಾ.ಕ.ರ.ಸಾ.ಸಂಸ್ಥೆ / ಈ.ಕ.ರ.ಸಾ.ಸಂಸ್ಥೆ ಮತ್ತು ಇತರೆ ಸರ್ಕಾರಿ ಇಲಾಖೆಗಳಲ್ಲಿ ಯಾವುದೇ ವಾಣಿಜ್ಯ ಮಳಿಗೆಗಳ / ಜಾಹೀರಾತು ವಿಷಯಕ್ಕೆ ಸಂಬಂಧಿಸಿದಂತೆ **<u>ಕಪ್ಪು ಪಟ್ಟಿಗೆ</u>** ಸೇರಿಲ್ಲವೆಂದು ಈ ಮೂಲಕ ಸ್ವಯಂ ದೃಢೀಕರಿಸುತ್ತೇನೆ.

ನಾನು ಒದಗಿಸಿರುವ ಮಾಹಿತಿಯು ಸತ್ಯವೆಂದು ದೃಢೀಕರಿಸುತ್ತ, ಈ ಬಗ್ಗೆ ಯಾವುದೇ ಮಾಹಿತಿ ತಪ್ಪು ಎಂದು ಯಾವುದೇ ಹಂತದಲ್ಲಿ ಕಂಡುಬಂದಲ್ಲಿ ನಾನು ಸಲ್ಲಿಸಿರುವ ಇ.ಎಂ.ಡಿ / ಭದ್ರತಾ ಠೇವಣಿಯ ಮೊತ್ತವನ್ನು ಮುಟ್ಟುಗೊಲು ಹಾಕಿಕೊಂಡು ನನ್ನ ಆಯ್ಕೆ / ಕರಾರನ್ನು ರದ್ದುಗೊಳಿಸುವ ನಿಯಮದ ಬಗ್ಗೆ ತಿಳಿದು ಅರ್ಜಿ ಸಲ್ಲಿಸಿದ್ದು, ಈ ಬಗ್ಗೆ ನಾನು ಯಾವುದೇ ತಪ್ಪು ಮಾಹಿತಿ ನೀಡಿರುವುದು ಕಂಡುಬಂದಲ್ಲಿ / ಅಸತ್ಯವೆಂದು

ದೃಢಪಟ್ಟಲ್ಲಿ ನಿಗಮವು ತೆಗೆದುಕೊಳ್ಳುವ ನಿರ್ಧಾರ / ಕ್ರಮಗಳಿಗೆ ಬದ್ಧನಾಗಿರುತ್ತೇನೆಂದು ಈ ಮೂಲಕ ದೃಢೀಕರಿಸುತ್ತೇನೆ..

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

( )

ದಿ :

ಯಿಂದ,
ಶ್ರೀ ______________

______________

______________

______________

ಗೆ,
ವಿಭಾಗೀಯ ನಿಯಂತ್ರಣಾಧಿಕಾರಿ,
ಕ.ರಾ.ರ.ಸಾ.ನಿಗಮ,
ಚಿಕ್ಕಮಗಳೂರು ವಿಭಾಗ,
ಚಿಕ್ಕಮಗಳೂರು.

ಮಾನ್ಯರೆ,

ವಿಷಯ : **ಪರಿಶಿಷ್ಟ ಜಾತಿ/ಪರಿಶಿಷ್ಠ ಪಂಗಡ** ಮೀಸಲಾತಿ ಆಧಾರದಲ್ಲಿ ಬೇರೆ ಮಳಿಗೆಯನ್ನು ಪಡೆಯದಿರುವ ಬಗ್ಗೆ ಸ್ವಯಂ ದೃಢೀಕರಣ ಪತ್ರ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ನಾನು ಸಂಧಾನ ಪ್ರಕಟಣೆ ಸಂಖ್ಯೆ : ______2019-20 ದಿ :______________ ರಂತೆ ಬಸ್ ನಿಲ್ದಾಣದ ಮಳಿಗೆಯ ಬಗ್ಗೆ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಅರ್ಜಿ ಸಲ್ಲಿಸಿದ್ದು, ನಾನು ಕ.ರಾ.ರ.ಸಾ.ನಿಗಮ / ಬೆಂ.ಮ.ಸಾ.ಸಂಸ್ಥೆ / ವಾ.ಕ.ರ.ಸಾ.ಸಂಸ್ಥೆ / ಈ.ಕ.ರ.ಸಾ.ಸಂಸ್ಥೆ ಮತ್ತು ಇತರೆ ಸರ್ಕಾರಿ ಇಲಾಖೆಗಳಲ್ಲಿ ಯಾವುದೇ ವಾಣಿಜ್ಯ ಮಳಿಗೆಗಳ / ಜಾಹೀರಾತು ಪರವಾನಗಿಯನ್ನು **ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ** ಮೀಸಲಾತಿ ಆಧಾರದ ಮೇಲೆ ಪಡೆದಿರುವುದಿಲ್ಲವೆಂದು ಈ ಮೂಲಕ ಸ್ವಯಂ ದೃಢೀಕರಿಸುತ್ತೇನೆ.

ನಾನು ಒದಗಿಸಿರುವ ಮಾಹಿತಿಯು ಸತ್ಯವೆಂದು ದೃಢೀಕರಿಸುತ್ತ, ಈ ಬಗ್ಗೆ ಯಾವುದೇ ಮಾಹಿತಿ ತಪ್ಪು ಎಂದು ಯಾವುದೇ ಹಂತದಲ್ಲಿ ಕಂಡುಬಂದಲ್ಲಿ ನಾನು ಸಲ್ಲಿಸಿರುವ ಇ.ಎಂ.ಡಿ / ಭದ್ರತಾ ಠೇವಣಿಯ ಮೊತ್ತವನ್ನು ಮುಟ್ಟುಗೋಲು ಹಾಕಿಕೊಂಡು ನನ್ನ ಆಯ್ಕೆ / ಕರಾರನ್ನು ರದ್ದುಗೊಳಿಸುವ ನಿಯಮದ ಬಗ್ಗೆ ತಿಳಿದು ಅರ್ಜಿ ಸಲ್ಲಿಸಿದ್ದು, ಈ ಬಗ್ಗೆ ನಾನು ಯಾವುದೇ ತಪ್ಪು ಮಾಹಿತಿ ನೀಡಿರುವುದು ಕಂಡುಬಂದಲ್ಲಿ / ಅಸತ್ಯವೆಂದು

ದೃಡಪಟ್ಟಲ್ಲಿ ನಿಗಮವು ತೆಗೆದುಕೊಳ್ಳುವ ನಿರ್ಧಾರ / ಕ್ರಮಗಳಿಗೆ ಬದ್ಧನಾಗಿರುತ್ತೇನೆಂದು ಈ ಮೂಲಕ ದೃಢೀಕರಿಸುತ್ತೇನೆ..

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

( )

ದಿ :

ಯಿಂದ,
ಶ್ರೀ ________________
________________
________________
________________

ಗೆ,
ವಿಭಾಗೀಯ ನಿಯಂತ್ರಣಾಧಿಕಾರಿ,
ಕ.ರಾ.ರ.ಸಾ.ನಿಗಮ,
ಚಿಕ್ಕಮಗಳೂರು ವಿಭಾಗ,
ಚಿಕ್ಕಮಗಳೂರು.

ಮಾನ್ಯರೆ,

ವಿಷಯ : **ಅಂಗವಿಕಲ/ವಿಕಲಚೇತನ** ಮೀಸಲಾತಿ ಆಧಾರದಲ್ಲಿ ಬೇರೆ ಮಳಿಗೆಯನ್ನು ಪಡೆಯದಿರುವ ಬಗ್ಗೆ ಸ್ವಯಂ ದೃಢೀಕರಣ ಪತ್ರ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ನಾನು ಸಂಧಾನ ಪ್ರಕಟಣೆ ಸಂಖ್ಯೆ : ______2019-20 ದಿ : ______________ ರಂತೆ ಬಸ್ ನಿಲ್ದಾಣದ ಮಳಿಗೆಯ ಬಗ್ಗೆ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಅರ್ಜಿ ಸಲ್ಲಿಸಿದ್ದು, ನಾನು ಕ.ರಾ.ರ.ಸಾ.ನಿಗಮ / ಬೆಂ.ಮ.ಸಾ.ಸಂಸ್ಥೆ / ವಾ.ಕ.ರ.ಸಾ.ಸಂಸ್ಥೆ / ಈ.ಕ.ರ.ಸಾ.ಸಂಸ್ಥೆ ಮತ್ತು ಇತರೆ ಸರ್ಕಾರಿ ಇಲಾಖೆಗಳಲ್ಲಿ ಯಾವುದೇ ವಾಣಿಜ್ಯ ಮಳಿಗೆಗಳ / ಜಾಹೀರಾತು ಪರವಾನಗಿಯನ್ನು **ಅಂಗವಿಕಲ/ವಿಕಲಚೇತನ** ಮೀಸಲಾತಿ ಆಧಾರದ ಮೇಲೆ ಪಡೆದಿರುವುದಿಲ್ಲವೆಂದು ಈ ಮೂಲಕ ಸ್ವಯಂ ದೃಢೀಕರಿಸುತ್ತೇನೆ.

ನಾನು ಒದಗಿಸಿರುವ ಮಾಹಿತಿಯು ಸತ್ಯವೆಂದು ದೃಢೀಕರಿಸುತ್ತ, ಈ ಬಗ್ಗೆ ಯಾವುದೇ ಮಾಹಿತಿ ತಪ್ಪು ಎಂದು ಯಾವುದೇ ಹಂತದಲ್ಲಿ ಕಂಡುಬಂದಲ್ಲಿ ನಾನು ಸಲ್ಲಿಸಿರುವ ಇ.ಎಂ.ಡಿ / ಭದ್ರತಾ ಠೇವಣಿಯ ಮೊತ್ತವನ್ನು ಮುಟ್ಟುಗೋಲು ಹಾಕಿಕೊಂಡು ನನ್ನ ಆಯ್ಕೆ / ಕರಾರನ್ನು ರದ್ದುಗೊಳಿಸುವ ನಿಯಮದ ಬಗ್ಗೆ ತಿಳಿದು

ಅರ್ಜಿ ಸಲ್ಲಿಸಿದ್ದು, ಈ ಬಗ್ಗೆ ನಾನು ಯಾವುದೇ ತಪ್ಪು ಮಾಹಿತಿ ನೀಡಿರುವುದು ಕಂಡುಬಂದಲ್ಲಿ / ಅಸತ್ಯವೆಂದು ದೃಡಪಟ್ಟಲ್ಲಿ ನಿಗಮವು ತೆಗೆದುಕೊಳ್ಳುವ ನಿರ್ಧಾರ / ಕ್ರಮಗಳಿಗೆ ಬದ್ಧನಾಗಿರುತ್ತೇನೆಂದು ಈ ಮೂಲಕ ದೃಢೀಕರಿಸುತ್ತೇನೆ..

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

( )

ದಿ :

ಯಿಂದ,
ಶ್ರೀ ________________
__________________
__________________
__________________

ರವರಿಗೆ,
ವಿಭಾಗೀಯ ನಿಯಂತ್ರಣಾಧಿಕಾರಿ,
ಕ.ರಾ.ರ.ಸಾ.ನಿಗಮ,
ಚಿಕ್ಕಮಗಳೂರು ವಿಭಾಗ,
ಚಿಕ್ಕಮಗಳೂರು

ಮಾನ್ಯರೆ,

ಚೆಕ್‌ಲಿಸ್ಟ್

| | |
|---|---|
| ಬಸ್ ನಿಲ್ದಾಣ | |
| ಅರ್ಜಿ ಸಲ್ಲಿಸಿದ ಮಳಿಗೆ ಹೆಸರು & ಸಂಖ್ಯೆ | |
| ಬಿಡ್‌ದಾರರ ಹೆಸರು | |
| ಈ ಕೆಳಕಂಡ ದಾಖಲಾತಿಗಳನ್ನು ಸಲ್ಲಿಸಿರುವ ಬಗ್ಗೆ ಗುರುತು ಮಾಡುವುದು (ಸಲ್ಲಿಸಿರುತ್ತೇನೆ/ಸಲ್ಲಿಸಿರುವುದಿಲ್ಲ ಎಂಬ ಬಗ್ಗೆ ಸ್ಪಷ್ಟವಾಗಿ ನಮೂದಿಸುವುದು) | |
| ಇ.ಎಂ.ಡಿ. ಡಿ.ಡಿ (ನಂಬರ್‌ನೊಂದಿಗೆ) | |
| ಅರ್ಜಿ ಶುಲ್ಕದ ಡಿ.ಡಿ (ನಂಬರ್‌ನೊಂದಿಗೆ) | |
| ಪಾನ್ ಕಾರ್ಡ್ | |
| ಜಿ.ಎಸ್.ಟಿ. ಸಂಖ್ಯೆ ನಮೂದಿಸುವುದು | |
| ವಿಳಾಸ ದೃಡೀಕರಣ ಪತ್ರ (ವೋಟರ್ ಐಡಿ, ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಬುಕ್, ಪಾಸ್‌ಪೋರ್ಟ್ & ಇತರೆ ದಾಖಲಾತಿಗಳು) | |
| ಕಪ್ಪು ಪಟ್ಟಿಗೆ ಸೇರಿಲ್ಲದ ಬಗ್ಗೆ ಸ್ವಯಂ ದೃಡೀಕರಣ ಪತ್ರ | |

| | |
|---|---|
| ಎಲ್ಲಾ ಪುಟಗಳಿಗೆ ಸಹಿ ಮಾಡಿದ ಷರತ್ತು ಮತ್ತು ನಿಬಂಧನೆಗಳ ಪ್ರತಿ | |
| ಮೀಸಲಾತಿ ಅಡಿಯಲ್ಲಿ ಅರ್ಜಿ ಸಲ್ಲಿಸಿದ್ದಲ್ಲಿ ಮಾತ್ರ ಅನ್ವಯಿಸುತ್ತದೆ. | |
| ಪರಿಶಿಷ್ಟ ಜಾತಿ ಪ್ರಮಾಣ ಪತ್ರ | |
| ಪರಿಶಿಷ್ಟ ಪಂಗಡ ಪ್ರಮಾಣ ಪತ್ರ | |
| ಅಂಗವಿಕಲರ ಪ್ರಮಾಣ ಪತ್ರ | |
| ಮೀಸಲಾತಿ ಆಧಾರದ ಮೇಲೆ ಬೇರೆ ಮಳಿಗೆ ಪಡೆಯದಿರುವ ಬಗ್ಗೆ ಸ್ವಯಂ ದೃಡೀಕರಣ ಪತ್ರ (ಪ.ಜಾ/ಪ.ಪ/ಅಂಗವಿಕಲರು) | |

ತಮ್ಮ ವಿಶ್ವಾಸಿ,

( )

ಅರ್ಜಿದಾರರ ಸಹಿ

ದಿ :